ಸಂಪುಟ : 13 Volume | ಸಂಚಿಕೆ : 229 Issue | ಪುಟಗಳು : 08 Pages | ಮಂಗಳವಾರ 28 ಅಕ್ಟೋಬರ್ 2025 | ₹2 | PRGINO.120927(RNINO:KARKAN/2011/48371) | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಬಳ್ಳಾರಿ | ವಿಜಯನಗರ | ಕೊಪ್ಪಳ & ಬಾಗಲಕೋಟೆ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ಹೆಸರಲ್ಲೇನಿದೆ ? ಗುಲಾಬಿಯೆಂದು ಕರೆಯುವ ಹೂವನ್ನು ಯಾವ ಹೆಸರಿನಿಂದ ಕರೆದರೂ ಅದರ ಪರಿಮಳದಲ್ಲಿ ಯಾವ ವ್ಯತ್ಯಾಸವೂ : ಇಲ್ಲ
-ಷೇಕ್ಸ್ ಪಿಯರ್ .

2. ಇಂದು ಸಚಿವ ಈಶ್ವರ ಖಂಡ್ರೆ ಬೀದರಗೆ

8 ರೈತರ ಪ್ರಗತಿಗೆ ಖಂಡ್ರೆ ಮನೆತನದ ಶ್ರಮ

4 ಅ.28 ರಂದು ಲೋಕಾಯುಕ್ತ ಅಹವಾಲು ಸಭೆ

# ದೇಶಾದ್ಯಂತ ಎಸ್ಐಆರ್

## 12 ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಜಾರಿ, ಕರ್ನಾಟಕದಲ್ಲಿ ಈ ಬಾರಿ ಎಸ್ಐಆರ್ ಇಲ್ಲ

ನವದೆಹಲಿ:ಅ.27:ಬಿಹಾರದಲ್ಲಿ ಯಶಸ್ವಿಯಾಗಿ ಪೂರ್ಣಗೊಂಡ ನಂತರ, ವಿವಾದಾತ್ಮಕ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯನ್ನು ದೇಶಾದ್ಯಂತ ನಡೆಸುವುದಾಗಿ ಭಾರತೀಯ ಚುನಾವಣಾ ಆಯೋಗ ಸೋಮವಾರ ಘೋಷಿಸಿದೆ.

ನಾಳೆಯಿಂದಲೇ ರಾಷ್ಟ್ರವ್ಯಾಪಿ ಎಸ್ ಐಆರ್ ಆರಂಭವಾಗಲಿದ್ದು, ಮೊದಲ ಹಂತದಲ್ಲಿ ತಮಿಳುನಾಡು, ಕೇರಳ ಮತ್ತು ಪಶ್ಚಿಮ ಬಂಗಾಳ ಸೇರಿದಂತೆ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಮತದಾರರ ಪಟ್ಟಿಯ ಶುದ್ಧೀಕರಣ ಕಾರ್ಯ ನಡೆಯಲಿದೆ.

ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ನಾವು ಬಿಹಾರದಲ್ಲಿ ಮತದಾರರ ಪಟ್ಟಿಯನ್ನು ಶುದ್ಧೀಕರಿಸುವ ಪ್ರಕ್ರಿಯೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದೇವೆ. ಅದರ ಫಲಿತಾಂಶವು ನಿಮ್ಮ ಮುಂದಿದೆ. ಶೂನ್ಯ ಮೇಲ್ಮನವಿಗಳು ಬಂದಿವೆ ಎಂದು ಹೇಳಿದರು.




ಎಸ್ಐಆರ್ ನ ಎರಡನೇ ಹಂತವನ್ನು 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆಸಲಾಗುವುದು ಎಂದು ಘೋಷಿಸಿದರು.

ರಾಷ್ಟ್ರವ್ಯಾಪಿ ಎಸ್ಐಆರ್ ನ ಮೊದಲ ಹಂತದಲ್ಲಿ ಒಳಗೊಳ್ಳುವ 12 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮತದಾರರ ಪಟ್ಟಿಗಳನ್ನು ಸೋಮವಾರ ಮಧ್ಯರಾತ್ರಿ ಸ್ಥಗಿತಗೊಳಿಸಲಾಗುವುದು ಎಂದು ಅವರು ತಿಳಿಸಿದರು.

ಆ ಪಟ್ಟಿಯಲ್ಲಿರುವ ಎಲ್ಲಾ ಮತದಾರರಿಗೆ ಬಿಎಲ್ಒಗಳು ವಿಶಿಷ್ಟ ಎಣಿಕೆ ನಮೂನೆಗಳನ್ನು ನೀಡುತ್ತಾರೆ. ಈ ಎಣಿಕೆ ನಮೂನೆಗಳು ಪ್ರಸ್ತುತ ಮತದಾರರ ಪಟ್ಟಿಯಿಂದ ಅಗತ್ಯವಿರುವ ಎಲ್ಲಾ ವಿವರಗಳನ್ನು ಹೊಂದಿರುತ್ತವೆ. ಬಿಎಲ್ಒಗಳು ಅಸ್ತಿತ್ವದಲ್ಲಿರುವ ಮತದಾರರಿಗೆ ಫಾರ್ಮ್‌ಗಳನ್ನು ವಿತರಿಸಲು ಪ್ರಾರಂಭಿಸಿದ ನಂತರ, ಎಣಿಕೆ ನಮೂನೆಗಳಲ್ಲಿ ಹೆಸರುಗಳನ್ನು ಹೊಂದಿರುವ ಎಲ್ಲರೂ ತಮ್ಮ ಹೆಸರುಗಳು 2003ರ ಮತದಾರರ ಪಟ್ಟಿಯಲ್ಲಿವೆಯೇ ಎಂದು ಪರಿಶೀಲಿಸಬೇಕು. ಇದೆ ಎಂದಾದರೆ, ಅವರು ಯಾವುದೇ ಹೆಚ್ಚುವರಿ ದಾಖಲೆಗಳನ್ನು ಸಲ್ಲಿಸುವ ಅಗತ್ಯವಿಲ್ಲ ಎಂದು ಸಿಇಸಿ ಹೇಳಿದರು.

ಆಯೋಗದ ಕಾನೂನಿನ ಪ್ರಕಾರ ಮತದಾರರ ಪಟ್ಟಿ ಪರಿಷ್ಕರಣೆ ಅಗತ್ಯವಿದೆ.

ಪ್ರತಿಯೊಂದು ರಾಜಕೀಯ ಪಕ್ಷವೂ ಪರಿಷ್ಕರಣೆ ನಡೆಸದ ಬಗ್ಗೆ ದೂರು ನೀಡಿವೆ. ಇಲ್ಲಿಯವರೆಗೆ ಎಂಟು ಬಾರಿ ಎಸ್ಐಆರ್ ನಡೆಸಿದೆ. 2002-2004ರಲ್ಲಿ ಕೊನೆಯದಾಗಿ ಎಸ್ಐಆರ್ ನಡೆಸಲಾಗಿತ್ತು. ಎರಡು ದಶಕದ ಬಳಿಕ ಈಗ ಎಸ್ಐಆರ್ ಮಾಡಲಾಗುತ್ತಿದೆ ಎಂದು ತಿಳಿಸಿದರು.


ಕಳೆದ 20 ವರ್ಷದ ಅವಧಿಯಲ್ಲಿ ಸಾಕಷ್ಟು ಬದಲಾವಣೆಯಾಗಿದೆ. ಸಾಕಷ್ಟು ಮತದಾರರ ವಿಳಾಸ ಬದಲಾವಣೆಯಾಗಿರುತ್ತದೆ,

ವಿದೇಶಿಗರು ಪಟ್ಟಿಯಲ್ಲಿ ಸೇರಿರುತ್ತಾರೆ. ಕೆಲವರು ಮರಣದ ಬಳಿಕವೂ ಪಟ್ಟಿಯಲ್ಲಿ ಹೆಸರು ಉಳಿದುಕೊಂಡಿರುತ್ತದೆ. ಇದನ್ನು ತೆರವು ಮಾಡಲು ಎಸ್ಐಆರ್ ಅಗತ್ಯವಿದೆ ಎಂದು ಆಯೋಗದ ನಿರ್ಧಾರವನ್ನು ಸಮರ್ಥಿಸಿಕೊಂಡರು.

**ಎಸ್ಐಆರ್ ನಡೆಯುವ 12 ರಾಜ್ಯಗಳು**

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಗೋವಾ, ಪುದುಚೇರಿ, ಛತ್ತೀಸ್‌ಗಢ, ಗುಜರಾತ್, ಕೇರಳ, ಮಧ್ಯಪ್ರದೇಶ, ಉತ್ತರ ಪ್ರದೇಶ, ರಾಜಸ್ಥಾನ, ಪಶ್ಚಿಮ ಬಂಗಾಳ, ತಮಿಳುನಾಡು ಮತ್ತು ಲಕ್ಷದ್ವೀಪ.

## ಡಿಜಿಟಲ್ ಅರೆಸ್ಟ್' ಹಾವಳಿ ಸಿಬಿಐ ತನಿಖೆಗೆ ಸುಪ್ರೀಂ ಚಿಂತನೆ



ನವದೆಹಲಿ:ಅ.27:ದೇಶಾದ್ಯಂತ ಹೆಚ್ಚುತ್ತಿರುವ ಡಿಜಿಟಲ್ ಅರೆಸ್ಟ್' ವಂಚನೆಬಗ್ಗೆ ಕಳವಳ ವ್ಯಕ್ತಪಡಿಸಿರುವ 2ನೇ ಪುಟನೋಡಿ

## ಬೀದರ್ ಜಿಲ್ಲೆಯ ಪತ್ರಕರ್ತರ ಒಗ್ಗಟ್ಟು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಬೀದರ್, ಬೀದರ್ ಜಿಲ್ಲೆಯ ಪತ್ರಕರ್ತರೆಲ್ಲರು ಒಗ್ಗಟ್ಟು ಪ್ರದರ್ಶಿಸುವುದರ ಮೂಲಕ ನಾವೆಲ್ಲರೂ ಒಂದೆ ಕುಟುಂಬದಂತೆ ಇದ್ದವೆ ಎಂದು ಸೋಮವಾರ ಸಾಬಿತು ಪಡಿಸಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕದ, ಅಧ್ಯಕ್ಷ ಸೇರಿದಂತೆ ಇತರೆ ಪದಾಧಿಕಾರಿಗಳ ಚುನಾವಣೆ ನಡೆಯಬೇಕಾಗಿತ್ತು, ಚುನಾವಣೆ ನಡೆದರೆ ವೈಮನಸ್ಸು ಬರುತ್ತದೆ ಎಂಬ ಒಂದೇ ಕಾರಣಕ್ಕೆ ಯಾವ ಹುದ್ದೆಗೊ ಯಾರೋಬ್ಬರು ನಾಮ ಪತ್ರ ಸಲ್ಲಿಸಲ್ಲಿಸದೇ ಇರುವುದರಿಂದ ಚುನಾವಣಾ ಕಣದಲ್ಲಿ ಯಾರೊಬ್ಬರೂ ಇಲ್ಲದಂತಾಗಿದೆ. ಬಹುತೇಕ ಸಂಘದ ಸರ್ವ ಪದಾಧಿಕಾರಿಗಳನ್ನು ಅವರ ಅವರ ಅರ್ಹತೆಗೆ ತಕ್ಕಂತೆ ನಿಯೋಜಿಸಲಾಗಬಹುದು ಎಂದು ತಿಳಿದುಬಂದಿದೆ. ಒಟ್ಟಿನಲ್ಲಿ ಚುನಾವಣೆ ಆಗದೆ ನಾವೆಲ್ಲರೂ ಒಂದೆ ಎಂಬ ಸಂದೇಶ ರವಾನೆ ಆಗಿದೆ.

## ಭ್ರಷ್ಟಾಚಾರ ತೊಲಗಿಸಲು ಎಲ್ಲರೂ ಕೈಜೋಡಿಸಿ: ನ್ಯಾ.ವಿಜಯ


ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27-ಭ್ರಷ್ಟಾಚಾರ ತೊಲಗಿಸಲು ಎಲ್ಲರೂ ಕೈಜೋಡಿಸಬೇಕಾಗಿದೆ. ಭ್ರಷ್ಟಾಚಾರ ಹೋಗಲಾಡಿಸಿದಲ್ಲಿ ದೇಶ ತನ್ನಿಂದ ತಾನೇ ಪ್ರಗತಿ ಸಾಧಿಸುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎನ್.ವಿ.ವಿಜಯ ಹೇಳಿದರು.



ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪೊಲೀಸ್ ಇಲಾಖೆ, ಕರ್ನಾಟಕ ಲೋಕಾಯುಕ್ತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಭ್ರಷ್ಟಾಚಾರ ತಡೆಗಟ್ಟುವ ಜಾಗೃತಿ ಅರಿವು ಸಪ್ತಾಹ 2025 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭ್ರಷ್ಟಾಚಾರ ಜನ ಜಾಗೃತಿ ಮೂಡಿಸುವುದು ಕೇವಲ ಒಂದು ದಿನ ಅಥವಾ ವಾರಕ್ಕೆ ಸೀಮಿತಗೊಳಿಸದೆ, ಇಡೀ ಜೀವಮಾನದ ದೈನಂದಿನ ಕರ್ತವ್ಯದಲ್ಲಿ ಅಳವಡಿಸಿಕೊಳ್ಳಬೇಕು. ಮಧ್ಯಸ್ಥಗಾರರಿಂದ ಲಂಚದ ಹಣಕ್ಕೆ ಬೇಡಿಕೆ ಇಟ್ಟರೂ ಸಹ ಪ್ರಕರಣ ದಾಖಲಾಗುತ್ತದೆ. ಹಾಸಿಗೆ ಇದ್ದಷ್ಟು 2ನೇ ಪುಟನೋಡಿ

## ನಿರಾಸೆಯಲ್ಲಿ ಸಂಬಂಧ ಅಂತ್ಯಗೊಂಡರೆ ರೇಪ್ ಅಲ್ಲ



ಬೆಂಗಳೂರು:ಅ.27:ಆರಂಭದಲ್ಲಿ ಪರಸ್ಪರ ಸಮ್ಮತಿ ಮೇರೆಗೆ ಇಬ್ಬರ ನಡುವೆ ಸಂಬಂಧ ಚೆನ್ನಾಗಿದ್ದು, ಕೊನೆಗೆ ಯಾವುದೇ ಕಾರಣಕ್ಕೆ ಸಂಬಂಧ ನಿರಾಸೆಯಲ್ಲಿ ಅಂತ್ಯಗೊಂಡರೆ ಅದು ಅಪರಾಧವಲ್ಲ ಎಂದು ಕರ್ನಾಟಕ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಮಹಿಳೆಯೊಬ್ಬರು ಡೇಟಿಂಗ್ ಆಪ್‌ನಲ್ಲಿ ಪರಿಚಯವಾಗಿದ್ದ ಸಾಂಪ್ರಸ್ ಆಂಥೋಣಿ ಎಂಬಾತನ ಒಂದು ವರ್ಷಗಳ ಕಾಲ ಆತ್ಮೀಯವಾಗಿದ್ದರು. ಬಳಿಕ ಮಹಿಳೆ, ಸಾಂಪ್ರಸ್ ಆಂಥೋಣಿ ವಿರುದ್ಧ ಬೆಂಗಳೂರಿನ ಕೋಣನಕುಂಟೆ ಪೊಲೀಸ್ ಠಾಣೆಯಲ್ಲಿ ಅತ್ಯಾಚಾರ ಪ್ರಕರಣ ದಾಖಲಿಸಿದ್ದರು. ಈ ಕೇಸಿನ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ, ವಾಟ್ಸ ಪ್‌ನಲ್ಲಿ ಇಬ್ಬರು ಪರಸ್ಪರ ಚಾಟಿಂಗ್ ಮಾಡಿದ್ದು, ಹಾಗೇ ಫೋಟೋ, ವಿಡಿಯೋಗಳನ್ನೂ ವಿನಿಮಯ ಮಾಡಿಕೊಂಡಿರುವುದನ್ನು ಗಂಭೀರವಾಗಿ ಪರಿಗಣಿಸಿ ಬಳಿಕ ಪರಸ್ಪರ ಸಮ್ಮತಿಯ ಲೈಂಗಿಕ ಕ್ರಿಯೆ ಅಪರಾಧವಲ್ಲ. ಒಪ್ಪಿಗೆಯಿಂದ ಆರಂಭಗೊಂಡ ಸಂಬಂಧ ನಿರಾಸೆಯಲ್ಲಿ ಅಂತ್ಯಗೊಂಡರೆ ಅಪರಾಧವಲ್ಲ ಎಂದು 2ನೇ ಪುಟನೋಡಿ

## ಅಕ್ರಮ ಸಂಬಂಧ ಶಂಕೆಯಿಂದ ಮಹಾರಾಷ್ಟ್ರದ ಯುವಕನಿಗೆ ಥಳಿತ; ಸಾವು



ಬೀದರ್. ಅ. 27: ಅಕ್ರಮ ಸಂಬಂಧ ಶಂಕೆ, ಮಾಹಾರಾಷ್ಟ್ರ ಮೂಲದ ಯುವಕನ ಮೇಲೆ ಬೀದರ್ ಜಿಲ್ಲೆಯ ಔರಾದ್‌ನಲ್ಲಿ ಮಾರಣಾಂತಿಕ ಹಲ್ಲೆ ನಡೆಸಲಾಗಿದ್ದು, 2ನೇ ಪುಟನೋಡಿ

## ಹೈಕಮಾಂಡ್ ಒಪ್ಪಿದರೇ 5 ವರ್ಷ ಕಾಲ ನಾನೇ ಮುಖ್ಯಮಂತ್ರಿ': ಸಿದ್ದರಾಮಯ್ಯ



ಮಂಗಳೂರು:ಅ.27: ಕರ್ನಾಟಕದಲ್ಲಿ ಮುಖ್ಯಮಂತ್ರಿ ಸ್ಥಾನ ಬದಲಾವಣೆ ಕುರಿತಾದ ನವೆಂಬರ್ ಕ್ರಾಂತಿಯ ಬಗ್ಗೆ ವ್ಯಾಪಕ ಪರ-ವಿರೋಧ ಚರ್ಚೆಗಳು ನಡೆಯುತ್ತಿರುವಂತೆಯೇ ಇತ್ತ ಸಿಎಂ ಸಿದ್ದರಾಮಯ್ಯ ಈ ಚರ್ಚೆಗೆ ಮತ್ತೊಂದು ಟ್ವಿಸ್ಟ್ ನೀಡುವ ಹೇಳಿಕೆ ನೀಡಿದ್ದಾರೆ.

ಕಾಂಗ್ರೆಸ್ ಸರ್ಕಾರ ನವೆಂಬರ್‌ನಲ್ಲಿ ತನ್ನ ಐದು ವರ್ಷಗಳ ಅವಧಿಯ ಅರ್ಧಭಾಗ ತಲುಪಿರುವಂತೆಯೇ ನಾಯಕತ್ವದಲ್ಲಿ ಸಂಭವನೀಯ ಬದಲಾವಣೆಯ ಬಗ್ಗೆ ಊಹಾಪೋಹಗಳೆದ್ದಿವೆ.

ಇದನ್ನು ಕೆಲವರು ನವೆಂಬರ್ ಕ್ರಾಂತಿ ಎಂದು ಕರೆಯುತ್ತಿದ್ದು, ಈ ಕುರಿತ ಚರ್ಚೆಗಳು ವ್ಯಾಪಕವಾಗಿವೆ. ಆದಾಗ್ಯೂ, ಸಿಎಂ ಸಿದ್ದರಾಮಯ್ಯ ಕೂಡ ಐದು ವರ್ಷಗಳ ಪೂರ್ಣ ಅವಧಿಯನ್ನು ಪೂರ್ಣಗೊಳಿಸುವುದಾಗಿ ನಿರಂತರವಾಗಿ ಪುನರುಚ್ಚರಿಸುತ್ತಿದ್ದಾರೆ. ಆದರೆ ಇದೀಗ ಮೊದಲ ಬಾರಿಗೆ ಸಿಎಂ ಸ್ಥಾನದ ಬದಲಾವಣೆ ಕುರಿತು ಸಿಎಂ ಸಿದ್ದರಾಮಯ್ಯ ಹೈಕಮಾಂಡ್ ನತ್ತ ಬೊಟ್ಟು ಮಾಡಿ ತೋರಿಸುತ್ತಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ನಿರ್ಧಾರಕ್ಕೆ ಒಳಪಟ್ಟು ಐದು ವರ್ಷಗಳ ಪೂರ್ಣ ಅವಧಿಗೆ ಅಧಿಕಾರದಲ್ಲಿ ಮುಂದುವರಿಯುವುದಾಗಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ 2ನೇ ಪುಟನೋಡಿ

## ಕರ್ನೂಲ್ ದುರಂತ: ಬಸ್‌ಗಳಲ್ಲಿ ಕಡ್ಡಾಯ ನಿಯಮಕ್ಕೆ ಸಚಿವ ರೆಡ್ಡಿ ಸೂಚನೆ



ಬೆಂಗಳೂರು:ಅ.27: ಕರ್ನೂಲ್ ಬಸ್ ದುರಂತದ ಬೆನ್ನಲ್ಲೇ ರಾಜ್ಯ ಸಾರಿಗೆ ಇಲಾಖೆ ಎಚ್ಚೆತ್ತುಕೊಂಡಿದೆ. ಈ ಬಗ್ಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕೆಎಸ್ ಆರ್‌ಟಿಸಿ, ಬಿಎಂಟಿಸಿ ಸೇರಿದಂತೆ 4 ಸಾರಿಗೆ ನಿಗಮಗಳ ಎಂಡಿಗಳಿಗೆ ಬಸ್‌ಗಳಲ್ಲಿ ಕೆಲ ನಿಯಮಗಳನ್ನ ಕಡ್ಡಾಯಗೊಳಿಸಲು ಸೂಚಿಸಿದ್ದಾರೆ.

ಪ್ರಮುಖವಾಗಿ ಬಸ್‌ಗಳಲ್ಲಿ ಬೆಂಕಿ ಸ್ಪರ್ಶಕ್ಕೆ ಸರಳವಾಗಿ ಉರಿಯುವ ವಸ್ತುಗಳ ಸಾಗಾಣಿಕೆಗೆ ಬ್ರೇಕ್ ಹಾಕಬೇಕು. ಬಸ್‌ಗಳಲ್ಲಿ ಯಾವುದೇ ರೀತಿಯ ಸ್ಫೋಟಕ ವಸ್ತುಗಳನ್ನ ತೆಗೆದುಕೊಂಡು ಹೋಗಬಾರದು. ಎಲ್ಲಾ ಎಸಿ ಬಸ್‌ಗಳಲ್ಲಿ ಸುತ್ತಿಗೆ ಕಡ್ಡಾಯಗೊಳಿಸಿದ್ದು, ಇದರಿಂದ ತುರ್ತು ಸಂದರ್ಭಗಳಲ್ಲಿ ಕಿಟಕಿಗಳನ್ನು ಒಡೆಯಲು ಬಳಸಲು ಸಹಾಯವಾಗಲಿದೆ. ಅಲ್ಲದೇ ಲಗೇಜ್ ಸಾಗಿಸುವ ಜಾಗದಲ್ಲಿ ಯಾವುದೇ ವ್ಯಕ್ತಿ ಮಲಗಲು ಅವಕಾಶ ನೀಡಬಾರದು. ಬಸ್ಸುಗಳ ನವೀಕರಣ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಸೂಚನೆ ನೀಡಿದ್ದಾರೆ. ಜೊತೆಗೆ ಬಸ್ಸುಗಳಲ್ಲಿನ ಸುರಕ್ಷತಾ ಆಡಿಟ್ ಪರಿಶೀಲನೆಗೆ ತಂಡಗಳನ್ನು ರಚಿಸಿ, ಬಸ್ ಗಳಲ್ಲಿ ಯಾವುದೇ ನ್ಯೂನ್ಯತೆ ಕಂಡುಬಂದರೂ ಕಠಿಣ ಕ್ರಮಕ್ಕೆ ಆದೇಶಕ್ಕೆ ಸೂಚಿಸಿದ್ದಾರೆ. ಇದರ ನಡುವೆ ರಾಜ್ಯ ಸಾರಿಗೆ ಅಧಿಕಾರಿಗಳು ಹಾಗೂ ಟ್ರಾಫಿಕ್ ಪೊಲೀಸರು, ಬೆಂಗಳೂರಿನಿಂದ ಹೋಗುವಂತ ಎಲ್ಲಾ ಬಸ್ಸುಗಳ ಪರಿಶೀಲನೆಗೆ ಮುಂದಾಗಿದ್ದಾರೆ. ಮೆಜೆಸ್ಟಿಕ್‌ನಲ್ಲಿ ಖಾಸಗಿ ಎಸಿ ಬಸ್‌ಗಳ ಪರಿಶೀಲನೆ ನಡೆಸಿ, ಡ್ರೈವರ್ ಲೈಸೆನ್ಸ್, ಬಸ್‌ಗಳ ದಾಖಲೆ ಚೆಕ್ ಮಾಡುತ್ತಿದ್ದಾರೆ.

## ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಅರ್ಹ ಪ್ರತಿಯೊಬ್ಬ ನೋಂದಣಿಯಾಗುವಂತೆ ನೋಡಿಕೊಳ್ಳಿ



ಯಾದಗಿರಿ:ಅ:27: ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆ ಹಿನ್ನೆಲೆಯಲ್ಲಿ ಅರ್ಹತಾ ದಿನಾಂಕ 1-11-25ಕ್ಕೆ ಅನ್ವಯವಾಗುವಂತೆ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆದಿದ್ದು, ಅರ್ಹ ಮತದಾರರ ನೋಂದಣಿ ಕಾರ್ಯ ಇನ್ನಷ್ಟು ಚುರುಕುಗೊಳಿಸುವಂತೆ ಕಲ್ಬುರ್ಗಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಕ್ಷೇತ್ರದ ಚುನಾವಣಾಧಿಕಾರಿಗಳಾಗಿರುವ ಶ್ರೀಮತಿ ಜಹೀರಾ ನಸೀಮ್ ಅವರು ಹೇಳಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿ ಕುರಿತ ಪ್ರಗತಿ 2ನೇ ಪುಟನೋಡಿ

**ಟೀಂ ಇಂಡಿಯಾ ಆಟಗಾರ ಶ್ರೇಯಸ್ ಅಯ್ಯರ್: ಸಿಡ್ನಿ ಆಸ್ಪತ್ರೆಗೆ ದಾಖಲು ಐಸಿಯುನಲ್ಲಿ ಪಕ್ಕೆಲುಬಿನ ಗಾಯಕ್ಕೆ ಚಿಕಿತ್ಸೆ**

## ಒಂದನೇ ಪುಟದಿಂದ

### ಸಿಬಿಐ ತನಿಖೆಗೆ ಸುಪ್ರೀಂ ಚಿಂತನೆ

ಡಿಜಿಟಲ್ ಅರೆಸ್ಟ್ ಸೈಬರ್ ವಂಚನೆಯ ಒಂದು ವಿಧಾನ: ಇದರಲ್ಲಿ ವಂಚಕರು ಕಾನೂನು ಅಧಿಕಾರಿಗಳಂತೆಪೋಸ್‌ನೀಡುತ್ತಾರೆ. ಆಡಿಯೊ ಅಥವಾ ವೀಡಿಯೊ ಕರೆಗಳಲ್ಲಿಜನರನ್ನು ಬೆದರಿಸುತ್ತಾರೆ. ಬಂಧನದಸುಳ್ಳುನೆಪದಲ್ಲಿಡಿಜಿಟಲ್ ಒತ್ತೆಯಾಳುಗಳನ್ನಾಗಿಮಾಡಿಹಣ ಪೀಕುತ್ತಾರೆ.

ಸುಪ್ರೀಂ ಕೋರ್ಟ್ , ಈ ಪ್ರಕರಣಗಳ ತನಿಖೆಯನ್ನ ಕೇಂದ್ರೀಯ ತನಿಖಾ ದಳಕ್ಕೆ ವಹಿಸುವ ಕುರಿತು ಚಿಂತನೆ ನಡೆಸಿದೆ.

ನ್ಯಾಯಾಧೀಶರು ಮತ್ತು ಪೊಲೀಸ್ ಅಧಿಕಾರಿಗಳ ಸೋಗಿನಲ್ಲಿ ನಕಲಿ ದಾಖಲೆಗಳನ್ನ ಬಳಸಿ ವಂಚಕರು ನಡೆಸುತ್ತಿರುವ ಈ ಕೃತ್ಯಗಳ ಬಗ್ಗೆ ಸಮಗ್ರ ತನಿಖೆಯಅಗತ್ಯವಿದೆಎಂದುನ್ಯಾಯಾಲಯಅಭಿಪ್ರಾಯಪಟ್ಟಿದೆ.ಇದರೊಂದಿಗೆ ಡಿಜಿಟಲ್ ಅರೆಸ್ಟ್ ಪ್ರಕರಣಗಳಿಗೆ ಸಂಬಂಧ ದಾಖಲಾಗಿರುವ ಎಫ್‌ಐಆರ್‌ಗಳ ವಿವರ ನೀಡುವಂತೆ ಎಲ್ಲಾ ರಾಜ್ಯಗಳಿಗೆ ನಿರ್ದೇಶನ ನೀಡಿದೆ.

ಪ್ರಕರಣದ ವಿಚಾರಣೆ ನಡೆಸುತ್ತಿರುವ ನ್ಯಾ. ಸೂರ್ಯ ಕಾಂತ್ ಮತ್ತು ಜೋಯ್ಮಲ್ಯ ಬಾಗ್ಚಿ ಅವರಿದ್ದ ಪೀಠವು ತನಿಖೆಯನ್ನ ಕೇಂದ್ರ ತನಿಖಾ ದಳಕ್ಕೆ ಹಸ್ತಾಂತರಿಸುವ ಬಗ್ಗೆಯೂ ಚಿಂತನೆ ನಡೆಸಿದೆ. ಈ ಬಗ್ಗೆ ದೇಶಾದ್ಯಂತದ ದಾಖಲಾಗಿರುವ ಎಲ್ಲಾ ಪ್ರಕರಣಗಳನ್ನ ನಿರ್ವಹಿಸಲು ಸಿಬಿಐಗೆ ಸಂಪನ್ಮೂಲಗಳಿವೆಯೇ ಎಂದು ಪ್ರಶ್ನಿಸಿತು. ಆಗ ಸಿಬಿಐ ಈಗಾಗಲೇ ಕೆಲವು ಪ್ರಕರಣಗಳನ್ನು ನಿಭಾಯಿಸುತ್ತಿದೆ ಎಂದು ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ನ್ಯಾಯಪೀಠಕ್ಕೆ ತಿಳಿಸಿದರು. ಇದಕ್ಕೆ ಪ್ರತಿಕ್ರಿಯೆ ನೀಡಿದ ನ್ಯಾಯಮೂರ್ತಿ ಬಾಗ್ಚಿ, ಎಲ್ಲಾ ಪ್ರಕರಣಗಳನ್ನ ನಿರ್ವಹಿಸಲು ಸಿಬಿಐ ಬಳಿ ಅಗತ್ಯ ಸಂಪನ್ಮೂಲಗಳಿವೆಯೇ ಪರಿಶೀಲಿಸುವಂತೆ ಸೂಚಿಸಿದರು.

ಸೈಬರ್ ಅಪರಾಧದಲ್ಲಿ ಅವರಿಗೆ ತಜ್ಞರು ಬೇಕಾದರೆ ನಮಗೆ ಹೇಳಬಹುದು ಎಂದು ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದರು. ಇದಕ್ಕೆ ಉತ್ತರಿಸಿದ ತುಷಾರ್ ಮೆಹ್ತಾ, ಸಿಬಿಐ ಗೃಹ ಸಚಿವಾಲಯದ ಸೈಬರ್ ಅಪರಾಧ ವಿಭಾಗದ ಸಹಾಯ ಪಡೆಯುತ್ತಿದೆ ಎಂದು ವಿವರಿಸಿದರು.

ಅಂತಿಮವಾಗಿ ಏಕರೂಪದ ತನಿಖೆ ನಡೆಯುವಂತೆ ನೋಡಿಕೊಳ್ಳಲು ನಾವು ಇಂದು ನಿರ್ದೇಶನಗಳನ್ನು ನೀಡುತ್ತಿಲ್ಲ. ನಾವು ಎಲ್ಲ ರಾಜ್ಯಗಳಿಗೆ ನೋಟಿಸ್ ನೀಡುತ್ತಿದ್ದೇವೆ ಎಂದು ನ್ಯಾಯಮೂರ್ತಿ ಕಾಂತ್ ಹೇಳಿದರು. ದೇಶಾದ್ಯಂತ ಹೆಚ್ಚುತ್ತಿರುವ ಡಿಜಿಟಲ್ ಅರೆಸ್ಟ್ ಹಗರಣಗಳ ಬೆದರಿಕೆಯನ್ನ ಪರಿಹರಿಸಲು ಅಕ್ಟೋಬರ್ 17 ರಂದು ನ್ಯಾಯಾಲಯವು ಸ್ವಯಂಪ್ರೇರಿತ ಪ್ರಕರಣವನ್ನು ದಾಖಲಿಸಿಕೊಂಡಿದೆ.

### ಮಹಾರಾಷ್ಟ್ರದ ಯುವಕನಿಗೆ ಥಳಿತ; ಸಾವು

ಇದರ ವಿಡಿಯೋ ವೈರಲ್ ಆಗಿದೆ. ಬೀದರ್ ಜಿಲ್ಲೆ ಔರಾದ್ ತಾಲೂಕಿನ ನಾಗನಪಲ್ಲಿ ಗ್ರಾಮದಲ್ಲಿ ಯುವಕನ ಕೈ-ಕಾಲು ಕಟ್ಟಿ ದೊಣ್ಣೆಯಿಂದ ಮಾರಣಾಂತಿಕ ಹಲ್ಲೆ ನಡೆಸುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ. ಯುವಕ ಸಾವನ್ನಪ್ಪಿದ್ದು, ದೂರು-ಪ್ರತಿದೂರು ದಾಖಲು ಮಾಡಲಾಗಿದೆ.

ಮಹಾರಾಷ್ಟ್ರದ ನಾಂದೇಡ್ ಜಿಲ್ಲೆ ಗೌಣಗಾಂವ್ ಗ್ರಾಮದ ವಿಷ್ಣು (27) ಮೃತ ಯುವಕ. ಮಹಿಳೆಯೊಂದಿಗೆ ಅಕ್ರಮಸಂಬಂಧದಆರೋಪಹಿನ್ನೆಲೆಯಲ್ಲಿಮಹಿಳೆಯತಂದೆಹಾಗೂಸಹೋದರಬಡಿಗೆಯಿಂದಹೊಡೆದುಕೊಲೆ ಮಾಡಿದ್ದಾರೆಂದುಆರೋಪಿಸಲಾಗಿದೆ. ವಿಷ್ಣುಕಳೆದಒಂದುವರ್ಷದಿಂದನಾಗನಪಲ್ಲಿಗ್ರಾಮದಮಹಿಳೆಯೊಂದಿಗೆ ಸಂಬಂಧಹೊಂದಿದ್ದನಂತೆ. ಅ.21ರಂದುಈತಮಹಿಳೆಯಮನೆಗೆಬಂದವೇಳೆಕುಟುಂಬಸ್ಥರುಹಲ್ಲೆನಡೆಸಿದ್ದಾರೆ. ಹಲ್ಲೆ ನಂತರ ಯುವಕನನ್ನು ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು, ಆದರೆ ಚಿಕಿತ್ಸೆ ಫಲಕಾರಿಯಾಗದೆ ವಿಷ್ಣು ಕೊನೆಯುಸಿರೆಳೆದಿದ್ದಾನೆ. ಮಗನನ್ನು ಕೊಲೆ ಮಾಡುವ ಉದ್ದೇಶದಿಂದ ಥಳಿಸಿರುವುದಾಗಿ ಮೃತ ವಿಷ್ಣು ತಾಯಿ ಲಕ್ಷ್ಮಿ ಚಿಂತಾಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ಹಲ್ಲೆ ನಡೆಸಿದ ಮಹಿಳೆ ಕುಟುಂಬಸ್ಥರಿಂದಲೂ ಚಿಂತಾಕಿ ಠಾಣೆಯಲ್ಲಿ ಪ್ರತಿದೂರು ದಾಖಲಿಸಲಾಗಿದೆ.

### ಅಂತ್ಯಗೊಂಡರೆ ರೇಪ್ ಅಲ್ಲ

ಅಭಿಪ್ರಾಯಪಟ್ಟಿದೆ. ಅಲ್ಲದೇ ಮಹಿಳೆ ಸಾಂಪ್ರಸ್ ಆಂಥೋಣಿ ವಿರುದ್ಧ ದಾಖಲಿಸಿದ್ದ ಅತ್ಯಾಚಾರ ಪ್ರಕರಣವನ್ನು ರದ್ದುಪಡಿಸಿದೆ. ಇನ್‌ಸ್ಟಾಗ್ರಾಂನಲ್ಲಿ ಇಬ್ಬರು ಕೆಟ್ಟ ಅಭಿರುಚಿಯ ಚಾಟಿಂಗ್ ಮಾಡಿದ್ದರು. ಪರಸ್ಪರ ಫೋಟೋ, ವಿಡಿಯೋಗಳನ್ನೂ ವಿನಿಮಯ ಮಾಡಿಕೊಂಡಿದ್ದರು. ಆದ್ರೆ, ಆರೋಪ ಪಟ್ಟಿ ಸಲ್ಲಿಸಿದ್ದ ಪೊಲೀಸರು ಇನ್‌ಸ್ಟಾಗ್ರಾಂ ಚಾಟಿಂಗ್ ಪರಿಗಣಿಸಿರಲಿಲ್ಲ. ಇವುಗಳನ್ನು ಪರಿಶೀಲಿಸಿದರೆ ಮಹಿಳೆಯ ದೂರು ಸುಳ್ಳೆಂದು ಸಾಬೀತಾಗಿದೆ. ಒಪ್ಪಿಗೆಯಿಂದಆರಂಭಗೊಂಡಸಂಬಂಧನಿರಾಸೆಯಲ್ಲಿಅಂತ್ಯಗೊಂಡರೆಅಪರಾಧವಲ್ಲಎಂದುನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ ಅಭಿಪ್ರಾಯಪಟ್ಟಿದೆ.

### ಎಲ್ಲರೂ ಕೈಜೋಡಿಸಿ:ನ್ಯಾ.ವಿಜಯ

ಕಾಲು ಚಾಚು ಎನ್ನುವಂತೆ ಸಂಬಳ ಇದ್ದಷ್ಟು ಜೀವನ ನಡೆಸಬೇಕು ಎಂದು ತಿಳಿಸಿದರು. ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶಕೆ.ರಾಜೇಶಕರ್ಣಂಮಾತನಾಡಿಜನಜಾಗೃತಿಮೂಡಿ,ಸಾರ್ವಜನಿಕರುಜಾಗೃತರಾದಲ್ಲಿಸಾಕಷ್ಟು ಸಂಖ್ಯೆಯಲ್ಲಿ ಭ್ರಷ್ಟಾಚಾರ ಪ್ರಕರಣಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ. ಸರಕಾರಿ ನೌಕರರು ಸಾರ್ವಜನಿಕರ ಸೇವೆಗಾಗಿ ಬಂದವರಾಗಿದ್ದು, ಪಾರದರ್ಶಕತೆ, ಹೊಣೆಗಾರಿಕೆ ಮತ್ತು ನ್ಯಾಯಸಮ್ಮತತೆಯ ಆಧಾರದ ಮೇಲೆ ಉತ್ತಮ ಆಡಳಿತನೀಡುವಲ್ಲಿಬದ್ಧರಾಗಿರಬೇಕಾಗುತ್ತದೆಎಂದರು. ಕಾರ್ಯಕ್ರಮದಅಧ್ಯಕತೆವಹಿಸಿದ್ದ ಜಿಲ್ಲಾಧಿಕಾರಿ ಸಂಗಪ್ಪ ಅವರು ಮಾತನಾಡಿ, ಭ್ರಷ್ಟಾಚಾರ ವಿರೋಧಿ ಅರಿವು ಒಂದು ದಿನದ ಕಾರ್ಯಕ್ರಮವಾಗಿರಬಾರದು, ಪ್ರತಿದಿನದ ಜೀವನದಲ್ಲಿ ಅನುಸರಿಸಿದರೆ ರಾಜ್ಯ ಮತ್ತು ದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ. ಸರ್ಕಾರಿ ನೌಕರರು ಎಲ್ಲರಿಗೂ ಸಮಾನವಾಗಿ ಪಾರದರ್ಶಕವಾಗಿ ಕೆಲಸ ಮಾಡಬೇಕು. ಕಚೇರಿಗೆ ಬರುವ ಜನರೊಂದಿಗೆ ಸೌಜನ್ಯದಿಂದ ವರ್ತಿಸಿ, ಅವರ ವಿಶ್ವಾಸವನ್ನು ಗೆಲ್ಲಬೇಕು ಎಂದು ಹೇಳಿದರು. ಅತಿಥಿಯಾಗಿ ಭಾಗವಹಿಸಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಶಶಿಧರ ಕುರೇರ್ ಮಾತನಾಡಿ, ಸರ್ಕಾರಿ ನೌಕರರು ತಮ್ಮ ದೈನಂದಿನ ಕೆಲಸವನ್ನು ನೈತಿಕತೆ ಮತ್ತು ಪಾರದರ್ಶಕತೆಯಿಂದ ಮಾಡಬೇಕು. ಲಂಚ ಸ್ವೀಕರಿಸುವುದೇ ಭ್ರಷ್ಟಾಚಾರವಲ್ಲ, ಕೆಲಸದಲ್ಲಿ ವಿಳಂಬ ಮಾಡಿದರೂ ಅದೂ ಭ್ರಷ್ಟಾಚಾರವೆಂದರು. ಇತ್ತೀಚೆಗೆ ಸಾರ್ವಜನಿಕರು ನೌಕರರ ಕೆಲಸವನ್ನು ಗಮನಹರಿಸಿ ನೋಡುತ್ತಿದ್ದಾರೆ, ಆದ್ದರಿಂದ ತಪ್ಪಾದ ಮೇಲೆ ಸರಿಪಡಿಸುವುದಕ್ಕಿಂತ ತಪ್ಪೇ ಆಗದಂತೆ ಮುಂಚಿತ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕ ಸಿದ್ದೇಶ್ವರ ಅವರು ಪ್ರತಿಜ್ಞಾವಿಧಿ ಭೋದಿಸಿದರು, ಸಂಗಮೇಶ ಸಣ್ಣತಂಗಿ ಕಾರ್ಯಕ್ರಮ ನಿರೂಪಿಸಿದರು. ಲೋಕಾಯುಕ್ತ ಪೊಲೀಸ್ ಇನ್ಸ ಪೆಕ್ಟರ್ ಮಲ್ಲಿಕಾರ್ಜುನ ಬಿರಾದಾರ ವಂದಿಸಿದರು. ಹಿರಿಯ ದಿವಾಣಿ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಚಂದ್ರಶೇಖರ ದಿಡ್ಡಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಮಲ್ಲೇಶ ಟಿ ಸೇರಿದಂತೆ ಇತರರು ಇದ್ದರು.

### ಮುಖ್ಯಮಂತ್ರಿ': ಸಿದ್ದರಾಮಯ್ಯ

ಸೋಮವಾರ ಹೇಳಿದ್ದಾರೆ. ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಉಳಿಯುವಿರಾ ಎಂಬ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಿದ್ದರಾಮಯ್ಯ, ಹೈಕಮಾಂಡ್ ನಿರ್ಧರಿಸಿದರೆ ಎಂದು ಮಾರ್ಮಿಕವಾಗಿ ಹೇಳಿದರು.

ಸಿದ್ದರಾಮಯ್ಯ ಐದು ವರ್ಷಗಳ ಕಾಲ ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂಬ ಅವರ ಆಪ್ತ ಮತ್ತು ಮಾಜಿ ಸಚಿವ ಕೆ ಎನ್ ರಾಜಣ್ಣ ಅವರ ಹೇಳಿಕೆಯ ಬಗ್ಗೆ ಕೇಳಿದಾಗ, ಅದು ಅವರ ವೈಯಕ್ತಿಕ ಅಭಿಪ್ರಾಯ ಎಂದುಸಿದ್ದರಾಮಯ್ಯ ಹೇಳಿದರು.ಕಾಂಗ್ರೆಸ್‌ನಲ್ಲಿರುವಬಹುಮುಖ್ಯಮಂತ್ರಿ ಆಕಾಂಕ್ಷಿಗಳಕುರಿತುಮಾತನಾಡಿದ ಸಿದ್ದರಾಮಯ್ಯ, ಪ್ರಜಾಪ್ರಭುತ್ವದಲ್ಲಿ, ಸ್ಪರ್ಧೆಯಲ್ಲಿರುವವರಿಗೆಸ್ಪರ್ಧಿಸಬೇಡಿಎಂದುನಾವುಹೇಳಲುಸಾಧ್ಯವಿಲ್ಲ. ಅದುಅವರಹಕ್ಕು. ಯಾರಾದರೂಮುಖ್ಯಮಂತ್ರಿ ಅಭ್ಯರ್ಥಿ ಎಂದುಹೇಳಿಕೊಳ್ಳಬಹುದು, ಆದರೆಅಂತಿಮವಾಗಿ, ಹೈಕಮಾಂಡ್ ನಿರ್ಧರಿಸುತ್ತದೆ.ನಾಯಕತ್ವ ಬದಲಾವಣೆಯ ವಿಷಯ ಏಕೆ ನಿರಂತರವಾಗಿ ಹೊರಹೊಮ್ಮುತ್ತಿದೆ ಎಂಬ ಮತ್ತೊಂದು ಪ್ರಶ್ನೆಗೆ ಉತ್ತರಿಸಿದ ಅವರು, ನೀವು (ಮಾಧ್ಯಮ) ಕೇಳುತ್ತಲೇ ಇರುವುದರಿಂದ ಈ ಪ್ರಶ್ನೆಗಳು ಉದ್ಭವಿಸುತ್ತಿವೆ ಎಂದು ಉತ್ತರಿಸಿದರು.

### ನೋಂದಣಿಯಾಗುವಂತೆ ನೋಡಿಕೊಳ್ಳಿ: ನಸೀಮ್

ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಜಿಲ್ಲೆಯಾದ್ಯಂತ ಸುಮಾರು 1961 ಕ್ಕೂ ಹೆಚ್ಚು ಮತದಾರರಿದ್ದಾರೆ.ಈಗಾಗಲೇಮತದಾರರವಿಶೇಷಮಿಂಚಿನನೋಂದಣಿಅಭಿಯಾನಆರಂಭಿಸಲಾಗಿದ್ದು, ದಿನಾಂಕ 27-10-25ರಿಂದ 30-10- 25ರವರೆಗೆ ಹಾಗೂ ದಿನಾಂಕ-3-11-25 ರಂದು ಅರ್ಹ ಪ್ರತಿ ಮತದಾರರನ್ನು ನೋಂದಣಿ ಮಾಡುವ ಕಾರ್ಯ ಮಾಡಬೇಕು.ಅಭಿಯಾನ ಮೇಲುಸ್ತುವಾರಿಯ ನೋಡಲ್ ಅಧಿಕಾರಿಗಳು ಹಾಗೂ ಸ್ವೀಪ್ ನೋಡಲ್ ಅಧಿಕಾರಿಗಳು ಹೆಚ್ಚಿನ ಮುತುವರ್ಜಿವಹಿಸುವಂತೆ ಅವರು ಸೂಚನೆ ನೀಡಿ ಬರುವ ನವೆಂಬರ್ 6ರೊಳಗೆ ಪ್ರತಿ ಅರ್ಹ ಮತದಾರ ನೋಂದಣಿಯಾಗುವಂತೆ ನೋಡಿಕೊಳ್ಳಲು ಅವರು ಸೂಚಿಸಿದರು.

ಅರ್ಹ ಮತದಾರರು ನಿರಂತರ ಮೂರು ವರ್ಷ ಸೇವೆ ಹಾಗೂ ಪೂರ್ಣಾವಧಿ ಶಿಕ್ಷಕರಾಗಿರಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಬಯಸುವ ಪ್ರತಿಯೊಬ್ಬರು ಅರ್ಜಿ ನಮೂನೆ 19 ನ್ನು ಭರ್ತಿ ಮಾಡಿ ಶೈಕ್ಷಣಿಕ ಸಂಸ್ಥೆಗಳಲ್ಲಿ 1ನೇ ನವಂಬರ್2025ಕ್ಕೆ ಮೊದಲು ಆರು ವರ್ಷಗಳ ಅವಧಿಯಲ್ಲಿ ಒಟ್ಟು ಕನಿಷ್ಠ ಮೂರು ವರ್ಷ ಬೋಧನಾ ವೃತ್ತಿಯಲ್ಲಿ ನಿರತರಾಗಿರುವ ಬಗ್ಗೆ ಆಯಾ ಶೈಕ್ಷಣಿಕ ಸಂಸ್ಥೆಗಳಿಂದ ಅನು ಬಂಧ- 2ರಲ್ಲಿ ಪ್ರಮಾಣ ಪತ್ರ ಸಲ್ಲಿಸಬೇಕು.ಆಯಾ ಪ್ರಾಂಶುಪಾಲರಿಂದ ದೃಢೀಕರಣ ಪತ್ರ ಸಲ್ಲಿಸಬೇಕೆಂದು ಅವರು ಸೂಚಿಸಿದರು.

ಈಗಾಗಲೇ ಈ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಸರ್ಕಾರಿ,ಅನುದಾನಿತ,ಅನುದಾನರಹಿತ ಶಾಲಾ,ಪಿ.ಯು ಕಾಲೇಜುಗಳು,ಮೆಡಿಕಲ್, ಪ್ಯಾರಾ ಮೆಡಿಕಲ್ ,ಇಂಜಿನಿಯರಿಂಗ್,ನರ್ಸಿಂಗ್,ಡೆಂಟಲ್ ಕಾಲೇಜು , ಪಾಲಿಟೆಕ್ನಿಕ್,ಪದವಿ ಕಾಲೇಜು , ಆಯುರ್ವೇದ ಕಾಲೇಜು ಹಾಗೂ ಇನ್ನಿತರ ಅರ್ಹ ಸಂಸ್ಥೆಗಳ ಅರ್ಹ ಮತದಾರರ ನ್ನು ತಪ್ಪದೇ ನೋಂದಾಯಿಸು ವಂತೆ ಅವರು ಸೂಚನೆ ನೀಡಿದರು. ತಾಲೂಕುವಾರು ನಿಯೋಜಿತ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು, ಸಹಾಯಕ ಮತದಾರರ ನೋಂದಣಾಧಿಕಾರಿಗಳುಹಾಗೂಚುನಾವಣಾಸಿಬ್ಬಂದಿಗಳುಮತದಾರರನೋಂದಣಿಗೆಸೂಕ್ತಕ್ರಮಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

## ಇಂದು ಸಚಿವ ಈಶ್ವರ ಖಂಡ್ರೆ ಬೀದರಗೆ

ಬೀದರ, ಅ.27 : ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಅಕ್ಟೋಬರ್.28 ರಂದು ಬೀದರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿರುತ್ತಾರೆ.

ಅ.28 ರಂದು ಬೆಳಿಗ್ಗೆ 10.30ಕ್ಕೆ ಭಾಲ್ಕಿ-ಭಾತಂಬ್ರಾ ರಸ್ತೆ ಕಾಮಗಾರಿ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 12.30ಕ್ಕೆ ಕಮಲನಗರ ತಾಲ್ಲೂಕು ಪ್ರಜಾಸೌಧ ಕಟ್ಟಡ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 1ಕ್ಕೆ ಕಮಲನಗರ ತಾಲ್ಲೂಕಿನ ಹೊರಂಡಿಯ ಡಾ.ಬಿ.ಆರ್.ಅಂಬೇಡ್ಕರ್ ವಸತಿ ಶಾಲೆ ಮತ್ತು ಬಲ್ಲೂರ (ಜೆ) ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಯ ನೂತನ ಕಟ್ಟಡಗಳ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಮಧ್ಯಾಹ್ನ 2.30ಕ್ಕೆ ಶ್ರೀ ಹನುಮಾನ ದೇವಸ್ಥಾನ ಸೇವಾನಗರ ಭಾಲ್ಕಿಯಲ್ಲಿ ಆಯೋಜಿಸಿರುವ ಶ್ರೀ ಹನುಮಾನ ದೇವಸ್ಥಾನದ ಜೀರ್ಣೋದ್ಧಾರ ಮತ್ತು ಶ್ರೀ ಹನುಮಾನ್ ಮೂರ್ತಿಯ ಪುನರ್ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸಂಜೆ 4 ಗಂಟೆಗೆ ಮಹರ್ಷಿ ವಾಲ್ಮೀಕಿ ಚೌಕಿ, ತ್ರಿಪೂರಾಂತ-ಬಸವಕಲ್ಯಾಣದಲ್ಲಿ ಆಯೋಜಿಸಿರುವ ಆದಿಕವಿ ಮಹರ್ಷಿ ವಾಲ್ಮೀಕಿ ಜಯಂತ್ಯೋತ್ಸವ ಹಾಗೂ ತಾಲ್ಲೂಕು ಮಟ್ಟದ ಟೋಕರೆ ಕೋಳಿ ಸಮಾಜ ಜನಜಾಗೃತಿ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ನಂತರ ಭಾಲ್ಕಿಗೆ ಪ್ರಯಾಣಿಸಿ ಅಲ್ಲಿಯೇ ವಾಸ್ತವ್ಯ ಹೂಡಲಿದ್ದಾರೆಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.1 ರಂದು ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.27 :ಜಿಲ್ಲಾಡಳಿತ ಬೀದರ ವತಿಯಿಂದ ನವೆಂಬರ್.1 ರಂದು ಬೆಳಿಗ್ಗೆ 9 ಗಂಟೆಗೆ ಬೀದರ ಜಿಲ್ಲಾ ನೆಹರು ಕ್ರೀಡಾಂಗಣದಲ್ಲಿ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕನ್ನಡ ರಾಜ್ಯೋತ್ಸವ ದಿನಾಚರಣೆಯಲ್ಲಿ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಬಿ.ಖಂಡ್ರೆ ಅವರು ಧ್ವಜಾರೋಹಣ ಮಾಡಲಿದ್ದಾರೆ.ಪೌರಾಡಳಿತ ಹಾಗೂ ಹಜ್ ಸಚಿವ ರಹೀಮ್ ಖಾನ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೀದರ ಲೋಕಸಭಾ ಸದಸ್ಯ ಸಾಗರ ಈಶ್ವರ ಖಂಡ್ರೆ, ಔರಾದ (ಬಿ) ಶಾಸಕ ಪ್ರಭು ಬಿ.ಚವ್ಹಾಣ್, ಬಸವಕಲ್ಯಾಣ ಶಾಸಕ ಶರಣು ಸಲಗರ, ಬೀದರ ದಕ್ಷಿಣ ಶಾಸಕ ಡಾ.ಶೈಲೇಂದ್ರ ಕೆ.ಬೆಲ್ದಾಳೆ, ಹುಮನಾಬಾದ ಶಾಸಕ, ಡಾ. ಸಿದ್ದು ಪಾಟೀಲ ಹಾಗೂ ವಿಧಾನ ಪರಿಷತ್ ಸದಸ್ಯರುಗಳಾದ ಡಾ.ಚಂದ್ರಶೇಖರ ಬಿ.ಪಾಟೀಲ, ಶಶೀಲ ಜಿ.ನಮೋಶಿ, ಭೀಮರಾವ ಬಿ.ಪಾಟೀಲ, ಡಾ.ಎಂ.ಜಿ.ಮೂಳೆ, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿನಿಗಮದ ಅಧ್ಯಕ್ಷ ಮಾಲಾ ನಾರಾಯಣರಾವ, ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ, ಕೃಷ್ಣಾ ಮೇಲ್ದಂಡೆ ಯೋಜನೆ (ಕಾಡಾ) ಭೀಮರಾಯನ ಗುಡಿ ಕಲಬುರಗಿಯ ಅಧ್ಯಕ್ಷರಾದ ಬಾಬು ಹೊನ್ನನಾಯ್ಕ, ಬೀದರ ನಗರಸಭೆ ಅಧ್ಯಕ್ಷ ಮಹಮ್ಮದ ಗೌಸ, ಬೀದರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ ಇವರುಗಳು ಭಾಗವಹಿಸಲಿದ್ದಾರೆ.

## ಅಮರೇಶ್ವರ ದೇವಸ್ಥಾನದ ಅಭಿವೃದ್ಧಿಗೆ ಕೋಟಿ ಅನುದಾನ



ಔರಾದ:ಅ.27: ಪಟ್ಟಣದ ಆರಾಧ್ಯದೈವ ಉದ್ಭವಲಿಂಗ ಶ್ರೀ ಅಮರೇಶ್ವರ ದೇವಸ್ಥಾನದ ಅಭಿವೃದ್ಧಿಗೆ ಸಂಸದರ ವಿಧಿಯಲ್ಲಿ ಸಂಸದ ಸಾಗರ ಖಂಡ್ರೆ ಅವರು 1 ಕೋಟಿ ಅನುದಾನ ನೀಡಿದ್ದಾರೆ ಎಂದು ನಿವೃತ್ತ ಸಿಎಂ ಅಪರ ಕಾರ್ಯದರ್ಶಿ, ಕಾಂಗ್ರೆಸ್ ಮುಖಂಡ ಡಾ. ಭೀಮಸೇನರಾವ ಶಿಂಧೆ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಅಮರೇಶ್ವರ ದೇವರ ಭಕ್ತಾದಿಗಳ ಬಹುದಿನಗಳ ಬೇಡಿಕೆಗೆ ಸಂಸದ ಖಂಡ್ರೆ ಅವರು ಸ್ಪಂದಿಸಿದ್ದಾರೆ. ಅಲ್ಲದೇ ಕಳೆದ ಅಗಸ್ಟ್ ತಿಂಗಳಲ್ಲಿ ಸಾಗರ ಖಂಡ್ರೆ ಅವರು ದೇವಸ್ಥಾನಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ನಾನು ದೇವಸ್ಥಾನದ ಮಹಾದ್ವಾರದ ಕಾಮಗಾರಿ ಸೇರಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಅನುದಾನ ನೀಡುವಂತೆ ಮನವಿ ಮಾಡಿದ್ದೇನೆ. ಅದಕ್ಕೆ ಸ್ಪಂದಿಸಿದ ಅವರು ಸಾರ್ವಜನಿಕವಾಗಿ ದೇವಸ್ಥಾನದ ಅಭಿವೃದ್ಧಿಗೆ ಕೋಟಿ ಅನುದಾನ ಘೋಷಣೆ ಮಾಡಿದ್ದರು. ನುಡಿದಂತೆ ನಡೆದ ಸಂಸದ ಸಾಗರ ಖಂಡ್ರೆ ಅವರು ದೇವಸ್ಥಾನದ ಅಭಿವೃದ್ಧಿಗೆ ಅವರ ಸಂಸದರ ನಿಧಿಯಲ್ಲಿ ಅನುದಾನ ನೀಡಿದ್ದಾರೆ. ಅಲ್ಲದೇ ಕಾಮಗಾರಿಯನ್ನು ಕೆಆರ್ ಐಡಿಎಲ್ ಗೆ ವಹಿಸಲಾಗಿದೆ. ನಾಲ್ಕು ಬಾರಿ ಶಾಸಕರಾಗಿ ಎರಡು ಬಾರಿ ಸಚಿವರಾದರು ಶಾಸಕ ಪ್ರಭು ಚವ್ಹಾಣ ಅವರಿಗೆ ದೇವಸ್ಥಾನಕ್ಕೆ ಅನುದಾನ ನೀಡಲು ಆಗಿಲ್ಲ. ಕಾಮಗಾರಿಯ ಹೆಸರಿನಲ್ಲಿ ಎರಡೆರಡು ಬಾರಿ ಪೂಜೆ ಮಾಡಿದ್ದಾರೆ. ಆದರೆ ಅಭಿವೃದ್ಧಿಯ ಬಗ್ಗೆ ಕಾಳಜಿ ವಹಿಸಿಲ್ಲ.ಇಲ್ಲಿಯ ಜನರಿಗೆ ನೀಡಿರುವ ಭರವಸೆ ಸಂಸದ ಸಾಗರ ಖಂಡ್ರೆ ಈಡೇರಿಸಿದ್ದಾರೆ ಎಂದರು. ಸದ್ಯದಲ್ಲಿಯೇ ಕಾಮಗಾರಿಗೆ ಸಂಸದರು ಚಾಲನೆ ನೀಡಲಿದ್ದಾರೆ. ಕಾಮಗಾರಿಯಿಂದ ದೇವಸ್ಥಾನಕ್ಕೆ ಹೊಸ ರೂಪ ಬರಲಿದ್ದು, ಭಕ್ತಾದಿಗಳಿಗೆ ಅನುಕೂಲವಾಗಲಿದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ತಾಲೂಕಿನ ಬಗ್ಗೆ ವಿಶೇಷ ಕಾಳಜಿ ವಹಿಸಿದ್ದಾರೆ. ಇದರಿಂದ ಸರಕಾರದ ಸರಕಾರದ ಹಂತದಲ್ಲಿ ಇರುವ ತಾಲೂಕಿನ ಕೆಲಸಗಳು ತ್ವರಿತವಾಗಿ ಆಗುತ್ತಿವೆ ಎಂದರು.

## ಕನ್ನಡ ಬಳಸದಿದ್ದರೆ ನಾಮಫಲಕಗಳಿಗೆ ಮಸಿ: ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 27: ನಗರದ ಅಂಗಡಿ ಮುಂಗಟ್ಟು, ಮಳಿಗೆ, ಆಸ್ಪತ್ರೆ, ಕಚೇರಿ ಮೊದಲಾದವುಗಳ ಮೇಲೆ ಕನ್ನಡನಾಮಫಲಕಅಳವಡಿಕೆಗೆ ಕ್ರಮ ಕೈಗೊಳ್ಳಬೇಕು ಎಂದು ನಮ್ಮ ಕರ್ನಾಟಕ ಸೇನೆ ಆಗ್ರಹಿಸಿದೆ. ನಾಮಫಲಕದಲ್ಲಿ ಶೇ 60 ರಷ್ಟು ಕನ್ನಡ ಬಳಸಬೇಕೆಂಬ ಸರ್ಕಾರದ ನಿಯಮನಗರದಲ್ಲಿಪಾಲನೆಯಾಗುತ್ತಿಲ್ಲ ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಪ್ರಕಟಣೆಯಲ್ಲಿ ತೀವ್ರಅಸಮಾಧಾನ ವ್ಯಕ್ತಪಡಿಸಿದ್ದಾರೆ.ನಾಮಫಲಕಗಳಲ್ಲಿ ನಿಯಮಾನುಸಾರ ಕನ್ನಡ ಬಳಕೆಗೆ ಕ್ರಮ ಕೈಗೊಳ್ಳದಿದ್ದರೆ ಬರುವ ದಿನಗಳಲ್ಲಿ ಕನ್ನಡ ಬಳಸದ ನಾಮಫಲಕಗಳಿಗೆ ಮಸಿ ಬಳಿಯಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.ನಗರದ ಸೌಂದರ್ಯ ಹೆಚ್ಚಿಸಲು ನಗರದಲ್ಲಿ ರಸ್ತೆ ವಿಭಜಕಗಳ ಮಧ್ಯೆ ಬೀದಿ ದೀಪಗಳನ್ನು ಅಳವಡಿಸಲಾಗಿದೆ. ಆದರೆ, ಅವುಗಳಿಗೆ ಕಾರ್ಯಕ್ರಮಗಳ ಬ್ಯಾನರ್ ಅಳವಡಿಸಲಾಗುತ್ತಿದೆ. ಬೀದಿ ದೀಪಗಳು ಬ್ಯಾನರ್ ಅಳವಡಿಕೆಗೆ ಸೀಮಿತವಾಗಿವೆ ಎಂದು ಬೇಸರ ಹೊರ ಹಾಕಿದ್ದಾರೆ ಬ್ಯಾನರ್‌ಗಳ ಮೇಲೆ ಕನ್ನಡ ಬಳಸದಿದ್ದರೂ ಮಹಾನಗರ ಪಾಲಿಕೆ ಅಧಿಕಾರಿಗಳು ಅವುಗಳ ಅಳವಡಿಕೆಗೆ ಹೇಗೆ ಪರವಾನಗಿ ಕೊಡುತ್ತಿದ್ದಾರೆ ಎನ್ನುವುದು ತಿಳಿಯುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ ಬ್ಯಾನರ್ ಅಳವಡಿಸಿ ಬೀದಿ ದೀಪಗಳ ಸೌಂದರ್ಯ ಹಾಳುಗೆಡುವುದನ್ನು ಸೇನೆ ಸಹಿಸುವುದಿಲ್ಲ. ಬೀದಿ ದೀಪಕ್ಕೆ ಅಳವಡಿಸುವ ಬ್ಯಾನರ್‌ಗಳನ್ನು ಹರಿದು ಹಾಕಲಾಗುವುದು ಎಂದು ತಿಳಿಸಿದ್ದಾರೆ.

## ಉನ್ನತ ನಾಗರೀಕತೆ ನಿರ್ಮಾಣದಲ್ಲಿ ಮಾತೃಭಾಷೆ ಹಾಗೂ ಸಂಸ್ಕೃತಿ ತಳಪಾಯ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಅ.27:ಉನ್ನತ ನಾಗರೀಕತೆ ನಿರ್ಮಾಣದಲ್ಲಿ ನಮ್ಮ ಮಾತೃಭಾಷೆ ಹಾಗೂ ಸಂಸ್ಕೃತಿ ತಳಪಾಯವಾಗಿರುತ್ತದೆ ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ನುಡಿದರು.

ಪಟ್ಟಣದ ಅಮರೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಸೋಮವಾರ ಕರ್ನಾಟಕ ರಾಜ್ಯೋತ್ಸವ ನಿಮಿತ್ತ ತಾಲೂಕು ಆಡಳಿತ ವತಿಯಿಂದ ಆಯೋಜಿಸಿರುವ ಕರುನಾಡು ಸಾಂಸ್ಕೃತಿಕ ಉತ್ಸವ ನಾಡು ನುಡಿ ಚಿಂತನೆ ಉಪನ್ಯಾಸ ಮಾಲಿಕೆಗೆ ಚಾಲನೆ ನೀಡಿ ಮಾತನಾಡಿದರು.

ವ್ಯಕ್ತಿತ್ವ ವಿಕಸನಕ್ಕೆ ಸಂಸ್ಕೃತಿ ಸಾಹಿತ್ಯ ಮುಖ್ಯ ಎಂದ ಅವರು, ಕನ್ನಡ ನಾಡು ನುಡಿಗೆ ಉತ್ತರ ಕರ್ನಾಟಕದ ಕೊಡುಗೆ ಮರೆಯುವಂತಿಲ್ಲ. ಕನ್ನಡದ ಶ್ರೀಮಂತಿಕೆಗೆ ಮಹತ್ವದ ಕಾಣಿಕೆ ಕೊಟ್ಟ ವಚನ ಸಾಹಿತ್ಯ ಮತ್ತು ದಾಸ ಸಾಹಿತ್ಯದ ಹುಟ್ಟು ನಮ್ಮ ನೆಲದಲ್ಲಿಯೇ.

ಭಾಷಾಪ್ರೇಮ, ಭಾಷಾಭಿಮಾನ ಮರೆತರೆ ದ್ವಿತಿಯ ದರ್ಜೆ ನಾಗರೀಕರಂತೆ ಬದುಕಬೇಕಾಗುತ್ತದೆ. ನಮ್ಮ ಗ್ರಾಮ, ನಮ್ಮ ಭಾಷೆಯ ಬಗ್ಗೆ ಅಭಿಮಾನವಿರಲಿ ಎಂದರು.

ಕಸಾಪ ಅಧ್ಯಕ್ಷ ಬಿ.ಎಂ ಅಮರವಾಡಿ ಮಾತನಾಡಿ, ಕನ್ನಡವೆಂದರೆ ಒಂದು ಭಾಷೆಯಲ್ಲ ಅದು ಸಮಗ್ರ ಜೀವನ ಮೌಲ್ಯಗಳ ಸಂಗಮವಾಗಿದೆ. ಕನ್ನಡಪರ ಕಾಳಜಿ ಇಟ್ಟುಕೊಂಡು ಗಡಿಯಲ್ಲಿ ಕನ್ನಡದ ಬೆಳವಣಿಗೆಗೆ ವಿಶಿಷ್ಟ ಕಾರ್ಯಕ್ರಮಗಳು ಹಮ್ಮಿಕೊಂಡ ತಾಲೂಕು ಆಡಳಿತದ ಕಾರ್ಯ ಶ್ಲಾಘನೀಯ ಎಂದರು.

ಅಮರೇಶ್ವರ ಪದವಿ ಕಾಲೇಜು ಪ್ರಾಚಾರ್ಯೆ ಡಾ. ಪ್ರೇಮಾ ಹೂಗಾರ, ಪದವಿಪೂರ್ವ ಕಾಲೇಜು ಪ್ರಾಚಾರ್ಯ ಆರ್.ಪಿ ಮಠ ಮಾತನಾಡಿದರು.

ಪತ್ರಕರ್ತ ಅಮರಸ್ವಾಮಿ ಸ್ಥಾವರಮಠ, ಕಸಾಪ ಸಂಚಾಲಕ ಅಶೋಕ ಶೆಂಬೆಳ್ಳಿ, ಉತ್ತಮ ಜಾಧವ, ಶಿವರಾಮ ರಾಠೋಡ, ಉತ್ತಮ ದಂಡೆ, ಸಿಕಂದರ್ ಚವ್ಹಾಣ, ಶೇಖ್ ಮುಜೀಬ್, ಪ್ರೀಯಾ ಮಿಲಿಂದ್ ಸೇರಿದಂತೆ ಇನ್ನಿತರರಿದ್ದರು.

ಬಾಕ್ಸ್‌ಮ್ಯಾಟರ್: ಸಮಾರಂಭದಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದ ತಹಸೀಲ್ದಾರ್ ಮಹೇಶ ಪಾಟೀಲ್, ಹಲವು ಕನ್ನಡದ ಪ್ರಶ್ನೆಗಳು ಕೇಳಿ ಮಕ್ಕಳಲ್ಲಿನ ಕನ್ನಡ ಜ್ಞಾನದ ಕುರಿತು ಪರಿಶೀಲಿಸಿದರು.

ಕನ್ನಡ ನಾಡು ನುಡಿ ವಿಚಾರಗಳು, ಕವಿಗಳು, ಲೇಖಕರು, ವಚನಕಾರರು, ಕೀರ್ತನೆಕಾರರು, ಕರ್ನಾಟಕ ಏಕೀಕರಣ, ರಾಜ್ಯೋತ್ಸವಕ್ಕೆ ಸಂಬಂಧಿಸಿದ ಪ್ರಶ್ನೆಗಳು ಕೇಳಿ ಕನ್ನಡ ಪ್ರಾಧ್ಯಾಪಕರಂತೆ ಕಂಡರು.

## ಗ್ಲೋಬಲ್ ಸೈನಿಕ ಅಕಾಡೆಮಿಯಲ್ಲಿ ಸಿಂಧೂರ್ ರಕ್ಷಕ ರನ್ ಮ್ಯಾರಥನ್




ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 27: ಬೀದರ್ ನಗರದ ಹೊರವಲಯದಲ್ಲಿರುವ ಗ್ಲೋಬಲ್ ಸೈನಿಕ್ ಅಕಾಡೆಮಿಯಲ್ಲಿ ಭಾನುವಾರ ಇಡೀ ಬೀದರ್ ಜನತೆ ಬೆರಗುಗೊಳ್ಳುವ ಹಾಗೆ ಬೃಹತ್ ಪ್ರಮಾಣದಲ್ಲಿ ಸಿಂಧೂರ್ ರಕ್ಷಕ ರನ್ ಮ್ಯಾರಥನ್ ಏರ್ಪಡಿಸಲಾಗಿತ್ತು. ಈ ಮ್ಯಾರಥನ್ ನಲ್ಲಿ 10, 6 ಮತ್ತು 3 ಕಿಲೋಮೀಟರ್ ಓಟ ಏರ್ಪಡಿಸಲಾಗಿತ್ತು. ಇದು ಗೋಬಲ್ ಸೈನಿಕ್ ಅಕಾಡೆಮಿ ಹಾಗೂ ರೋಟರಿ ಕ್ಲಬ್ ಸಂಯೋಗದೊಂದಿಗೆ ಎರ್ಪಡಿಸಲಾಯಿತು. ಕಾರ್ಯಕ್ರಮವನ್ನು ಸಂಸ್ಥೆಯ ಅಧ್ಯಕ್ಷ ಕರ್ನಲ್ ಶರಣಪ್ಪ ಸಿಕೇನಪುರ ಅವರ ಜೊತೆ ಕ್ಯಾಪ್ಟನ್ ಭೀಮ್ ಸಿಂಗ್ ಒಲಂಪಿಯನ್, ಇಂಡಿಯನ್ ಹೈ ಜಂಪ್ ರೆಕಾರ್ಡ್ ಹೊಲ್ಕರ್, ಅರ್ಜುನ್ ಅವಾರ್ಡ್. ಏಷಿಯಾಡ್, ಅಫಲು ಗೋಲ್ಡ್ ಮೇಡಲಿ ಅವರು ತಮ್ಮ ಅಮೃತ ಹಸ್ತದಿಂದ ಉದ್ಘಾಟಿಸಿದರು. ಇದು ಒಂದು ಅದ್ಭುತ ವಿಸ್ಮಯ, ಸ್ಮರಣಿಯ ಕಾರ್ಯಕ್ರಮವಾಗಿತ್ತು ಇದು ದೇಶಕ್ಕಾಗಿ ಓಟ, ನಮ್ಮ ಯೋಧರಿಗಾಗಿ ಓಟ ಸುಮಾರು 6000 ಹೆಚ್ಚು ಜನ ಓಟದಲ್ಲಿ ಹೆಸರನ್ನು ನೋಂದಣಿ ಮಾಡಿಕೊಡು ಹುಮ್ಮಸ್ಸಿನಿಂದ ಓಡುತ್ತಿರುವ ದೃಶ್ಯ ಜನರಲ್ಲಿರುವ ದೇಶ ಭಕ್ತಿಗೆ ಸಾಕ್ಷಿಯಾಗಿತ್ತು. ಮೈ ರೋಮಾಂಚನಗೊಳ್ಳವ ದೃಶ್ಯ ಗ್ಲೋಬಲ್ ಸೈನಿಕ್ ಅಕಾಡೆಮಿಯ ಆವರಣದಲ್ಲಿ ಕಾಣಬಹುದಾಗಿತ್ತು. 1081 ಮೀಟರ್, 6 ಕಿಲೋ ಮೀಟ-ರ್, 3 ಕಿಲೋಮೀಟರ್ ಓಟದ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಅದರಲ್ಲಿ ಪ್ರಥಮದ್ವಿತೀಯ, ತೃತೀಯ ಸ್ಥಾನ ಗಳು: 10 ಕಿ.ಮಿ ಪುರುಷರ ವಿಭಾಗದಲ್ಲಿ ಸ್ನಾನ ಪಡೆದಿರುವ ಪ್ರಥಮ ಸ್ನಾನ ಶಿವಾನಂದ್, ದ್ವಿತೀಯ ಸ್ನಾನ, ಈರಪ್ಪ ತೃತೀಯ ಸ್ಥಾನ. ಬಸವರಾಜ 1284 ಪಡೆದರು ಹಾಗೂ ಮಹಿಳೆಯರ ವಿಭಾಗದಲ್ಲಿ ಪ್ರಥಮ ಸ್ಥಾನ ಶಾಹೀನ್, ದ್ವಿತೀಯ ಸ್ಥಾನ ತೃತೀಯ ಸ್ಥಾನ ಅಂಜಲಿ ಪಡೆದರು

6 ಕಿ.ಮಿ ನಲ್ಲಿ ಪುರುಷರ ವಿಭಾಗದಲ್ಲಿ ಸ್ನಾನ ಪಡೆದಿರುವ ಪ್ರಥಮ ಸ್ಥಾನ. ಮನು ಸಾಗರ್ ದ್ವಿತೀಯ ಸ್ನಾನ, ಪ್ರಶಾಂತ ತೃತೀಯ ಸ್ನಾನ ನಿತಿನ್ ಮಹಿಳೆಯರ ವಿಭಾಗದಲ್ಲಿ ಪ್ರಥಮ ಸ್ನಾನ. ಸೋನು. ದ್ವಿತೀಯ ಸ್ನಾನ. ಬೇಬಿ ತೃತೀಯ ಸ್ನಾನ. ನಿರೀಕ್ಷಾತ 30 ಮಿ ಪುರುಷರ ವಿಭಾಗದಲ್ಲಿ ಸ್ಥಾನ ಪಡೆದಿರುವ ಪ್ರಥಮ ಸ್ನಾನ. ಭಾಗವತ ದ್ವಿತೀಯ ಸ್ನಾನ, ಎಂಡಿ ಇಸ್ಮಾಯಿಲ್ ತೃತೀಯ ಸ್ಥಾನ ಕರಣ ಮಹಿಳೆಯರ ವಿಭಾಗದಲ್ಲಿ ಪ್ರಥಮ ಸ್ಥಾನ. ಇರಾ ವಾಂಖಡೆ, ದ್ವಿತೀಯ ಸ್ನಾನ, ಖುಷಿ ತೃತೀಯ ಸ್ಥಾನ ಜಗದೇವಿ 10 ಕಿಲೋ ಮೀಟರ್ ಓಟದಲ್ಲಿ ಗೆದ್ದ ಪುರುಷರ ಮತ್ತು ಮಹಿಳೆಯರ ವಿಭಾಗದಲ್ಲಿ ಪ್ರಥಮ ಬಹುಮಾನ ಪದಕ, 10 ಸಾವಿರ ನಗದು, ಕಪ್, ದ್ವಿತೀಯ ಬಹುಮಾನ 8 ಸಾವಿರ ನಗದು, ಪದಕ ಕಪ್, ತೃತೀಯ 5 ಸಾವಿರ ನಗದು, ಕಪ್, ಪದಕ ನೀಡಿ ಪ್ರೋತ್ಸಾಹಿಸಲಾಯಿತು. ಶಿವಶರಣಪ್ಪ ವಾಲಿ ಹಿರಿಯ ಪತ್ರಕರ್ತ, ಉಖಂಯ ನಿರ್ದೇಶಕರುಗಳಾದ ರಮೇಶ ಪಾಟೀಲ್, ಆರ್ ಜಿ ಮಠಪತಿ, ಡಾ ರಘು ಕೃಷ್ಣಮೂರ್ತಿ, ಸುಮೀತ್ ಸಿಂದೋಲ್, ಕೆ ಕೆ ಅಟ್ಟಲ್. ಶ್ರೀನಿವಾಸರಾಜು ಸಾಗಿ, ಡಾ ಶಿಲ್ಪಾ ಬುಲ್ಲಾಡಾ ಶರಣ್ ಬುಳ್ಳಾ ಇವರೆಲ್ಲರು ಕಾರ್ಯಕ್ರಮದಲ್ಲಿ ಭಾಗವಹಿಸಿ ಮೆರಗು ತಂದು ಕೊಟ್ಟರು. ಅತಿಥಿಗಳಾದ ಕ್ಯಾಪ್ಟನ್ ಭೀಮ್ ಸಿಂಗ್ ಮಾತನಾಡಿ ಗ್ಲೋಬಲ್ ಸೈನಿಕ್ ಅಕಾಡಮಿಯು ಹತ್ತೇ ವರ್ಷದಲ್ಲಿ ಇಷ್ಟು ದೊಡ್ಡ ಸಾಧನೆ ಮಾಡಿರುವುದು ಹೊಗಳಿಕೆಗೆ ಅರ್ಹ ಎಂದರು ಮತ್ತು ಇನ್ನು ದೊಡ್ಡ ಕಾರ್ಯಕ್ರಮವನ್ನು ಆಯೋಜಿಸುವುದು ಶಾಂಗ್ಲಯನ .ಈ ವೇಳೆ ಕರ್ನಲ್ ಶರಣಪ್ಪ ಸಿಕೇನಪುದೆ ಅಧ್ಯಕ್ಷರು ಉಖಂ ಅವರು ಮಾತನಾಡಿ ಈ ಮ್ಯಾರಥಾನ್ ಓಟವು ಗ್ಲೋಬಲ್ ಸೈನಿಕ್ ಅಕಾಡಮಿಯ ದಶಮಾನೋತ್ಸವದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ. ಇಂದು ನನಗೆ ಬಹಳ ಸಂತೋಷವಾಗುತ್ತಿದೆ ಕಾರಣ ನಮ್ಮ ಈ ಮ್ಯಾರಥಾನ್ ಕರೆಗೆ ಒಕೊಟ್ಟು ಬೀದರ್ ಜನತೆಯು ಹೆಚ್ಚಿನ ಪ್ರಮಾಣದಲ್ಲಿ ಭಾಗವಹಿಸಿದ್ದು ಜನರ ಈ ಸ್ಪಂದನೆ ನೋಡಿ ಹರ್ಷವಾಗುತ್ತಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು. ಇದು ಒಂದು ದೇಶ ಭಕ್ತಿಯ ಸಂ-ಕೇತದ ಓಟವಾಗಿತ್ತು. ಇದು ನನ್ನ ಬಹು ದಿನದ ಕನಸಾಗಿತ್ತು ಎಂದರು. ಇಷ್ಟೇ ಅಲ್ಲದೆ ದಿನಾಂಕ 1-11-25 ರಂದು ಆಯೋಜಿಸಲಾದ ಕಾರ್ಯಕ್ರಮಕ್ಕೂ ಹೆಚ್ಚಿನ ಪ್ರಮಾನದಲ್ಲಿ ಜನರು ಸೇರುತ್ತಾರೆ ಎಂಬ ನಿರೀಕ್ಷೆ ಸರಿಸುಮಾರು ಹತ್ತು ಸಾವಿರ ಜನ ಸೇರಬಹುದು ಎಂಬ ನಿರೀಕ್ಷೆಯಿದೆ ಎಂದರು. ಈ ಕಾರ್ಯಕ್ರಮವನ್ನು ಉದ್ದೇಶಿಸಿ ಓಣಟಿ, ಜಿಲ್ಲಾ ಗವರ್ನರ್ ಎಂ.ಕೆ. ರವೀಂದ್ರುರವರು ಮಾತನಾಡಿದರು ಈ ವೇಳೆಯಲ್ಲಿ ಶಾಲಾ ಪ್ರಾಂಶುಪಾಲರಾದ ಶ್ರೀ ಸಮೋದ್ ಮೊಹನನ ವಂದನಾರ್ಪಣೆ ಮಾಡಿದರು,

ಮುಖ್ಯ ಗುರುಗಳಾದ ಜ್ಯೋತಿ ರಾಗಾ.ಪಿ. ಆರ್. ಓ ಶ್ರೀಮತಿ ಕಾರಂಜಿ ಸ್ವಾಮಿ, ಸುಬೇದಾರ್ ಮಡಪ್ಪ, ಸುಬೇದಾರ್ ಧನರಾಜ್, ಸುಬೇದಾರ್ ರಾಮ್ ಜಿ, ಸಂಯೋಜಕರು ಮತ್ತು ಶಿಕ್ಷಕ ವೃಂದ, ಪಾಲಕರು, ಬೀದರ ಜನತೆ, ವಿದ್ಯಾರ್ಥಿಗಳು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಸೂರ್ಯಕಾಂತ್ ಮುಂದಿನ ಸುಪ್ರಿಂ ಸಿಜೆಐ



ನವದೆಹಲಿ, ಅ. 27: ಭಾರತದ ಮುಖ್ಯ ನ್ಯಾಯಮೂರ್ತಿ ಬಿ.ಆರ್ ಗವಾಯಿ ಅವರು ಮುಂದಿನ ಸಿಜೆಐ ಆಗಿ ನ್ಯಾಯಮೂರ್ತಿ ಸೂರ್ಯಕಾಂತ್ ಅವರ ಹೆಸರನ್ನು ಕೇಂದ್ರಕ್ಕೆ ಶಿಫಾರಸು ಮಾಡಿದ್ದಾರೆ. ಸಿಜೆಐ ಗವಾಯಿ ಅವರನಂತರ ಸುಪ್ರಿ?ಂಕೋರ್ಟ್‌ನ ಎರಡನೇ ಅತ್ಯಂತ ಹಿರಿಯ ನ್ಯಾಯಾಧೀಶರಾದ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ನವೆಂಬರ್ 23 ರಂದು ಸಿಜೆಐ ಗವಾಯಿ ಅವರ ನಿವೃತ್ತಿಯ ನಂತರ ನವೆಂಬರ್ 24 ರಂದು 53 ನೇ ಸಿಜೆಐ ಆಗಲಿದ್ದಾರೆ. ಈ ವರ್ಷ ಮೇ 14 ರಂದು ಪ್ರಮಾಣವಚನ ಸ್ವಿ?ಕರಿಸಿದ ಸಿಜೆಐ ಗವಾಯಿ ಅವರು ನ್ಯಾಯಮೂರ್ತಿ ಸೂರ್ಯಕಾಂತ್ ಅವರನ್ನು ಮುಂದಿನ ಸಿಜೆಐ ಆಗಿ ನೇಮಿಸಲು ಕೇಂದ್ರ ಕಾನೂನು ಸಚಿವಾಲಯಕ್ಕೆ ಶಿಫಾರಸು ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಮೇ 24, 2019 ರಂದು ಸುಪ್ರಿ?ಂಕೋರ್ಟ್‌ನ ನ್ಯಾಯಾಧೀಶರಾಗಿ ಬಡ್ತಿ ಪಡೆದ ನ್ಯಾಯಮೂರ್ತಿ ಸೂರ್ಯಕಾಂತ್ ಅವರು ಸಿಜೆಐ ಆಗಿ 1.2 ವರ್ಷಗಳಿಗೂ ಹೆಚ್ಚು ಕಾಲ ಅಧಿಕಾರದಲ್ಲಿರುತ್ತಾರೆ. ಅವರು ಫೆಬ್ರವರಿ 9, 2027 ರಂದು ನಿವೃತ್ತರಾಗಲಿದ್ದಾರೆ. ಸುಪ್ರಿ?ಂಕೋರ್ಟ್ ನ್ಯಾಯಾಧೀಶರ ನಿವೃತ್ತಿ ವಯಸ್ಸು 65 ವರ್ಷಗಳು.

## ಮಾಹಿತಿ ತಂತ್ರಜ್ಞಾನದಿಂದ ಹೊಸ ಜಗತ್ತು ಸೃಷ್ಟಿ : ಮಲ್ಲಯ್ಯ ಹಿರೇಮಠ



(ವರದಿ.ಡಿ.ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:– ಅ 27 ಆಧುನಿಕ ಕಾಲದ ಹೊಸ ಜಗತ್ತು ಮಾಹಿತಿ ತಂತ್ರಜ್ಞಾನದಿಂದ ನಿರ್ಮಾಣವಾಗಿದೆ. ಕಂಪ್ಯೂಟರ್ ಶಿಕ್ಷಣ ಈ ಕಾಲಕ್ಕೆ ಅನಿವಾರ್ಯ ಮತ್ತು ಅಗತ್ಯ ಎಂದು ಬಿಡಿಪಿಸಿ ನಿರ್ದೇಶಕರಾದ ಮಲ್ಲಯ್ಯ ಸ್ವಾಮಿ ಹಿರೇಮಠ ಹೇಳಿದರು.

ಇಲ್ಲಿನ ಶ್ರೀ ಬಸವೇಶ್ವರ ಪದವಿ ಕಾಲೇಜಿನಲ್ಲಿ ಐಕ್ಯುಎಸಿ ಸಹಯೋಗದಲ್ಲಿ

ಬಿಸಿಎ ಮತ್ತು ಬಿಎಸ್ಸಿ ಕಂಪ್ಯೂಟರ್ ವಿಭಾಗದಿಂದ ಹಮ್ಮಿಕೊಂಡಿದ್ದ ಆಧುನಿಕ ಸಮಾಜದಲ್ಲಿ ಕಂಪ್ಯೂಟರ್ ಶಿಕ್ಷಣದ ಪಾತ್ರ ಕುರಿತ ಉಪನ್ಯಾಸ ಹಾಗೂ ಗಣಕಯಂತ್ರ ಪ್ರಯೋಗಾಲಯದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ವ್ಯಕ್ತಿ ವ್ಯಕ್ತಿಗಳಲ್ಲಿ ಸಹಜ ಸಂಪರ್ಕಕ್ಕೆ ಕಂಪ್ಯೂಟರ್ ಸೇತುವೆಯಾಗಿದೆ ಎಂದರು. ಈ ಕಾಲದ ಎಲ್ಲವನ್ನೂ ಮಾಹಿತಿ ತಂತ್ರಜ್ಞಾನದ ಮೇಲೆಯೇ ನಿಂತಿದೆ. ಎಲ್ಲ ಕ್ಷೇತ್ರದಲ್ಲಿ ಕಂಪ್ಯೂಟರ್ ಧನಾತ್ಮಕವಾಗಿ ಬಳಸಲಾಗುತ್ತಿದೆ. ಇಂದಿನ ಸಾಮಾಜಿಕ ಬದಲಾವಣೆಯಲ್ಲಿ ಗಣಕಯಂತ್ರದ ಪಾತ್ರ ಮಹತ್ವದ್ದು ಎಂದು ಹೇಳಿದರು.

ಬಿಡಿಪಿಸಿ ನಿರ್ದೇಶಕಿ ಪ್ರೊ. ವಿಜಯಲಕ್ಷ್ಮಿ ಗಡ್ಡೆ ಮಾತನಾಡಿ, ಸಮೂಹ ಮಾಧ್ಯಮ ಮತ್ತು ಸಂಪರ್ಕ ಮಾಧ್ಯಮಗಳ ಬೆಳವಣಿಗೆಯಲ್ಲಿ ಕಂಪ್ಯೂಟರ್ ಮಹತ್ವದ ಪಾತ್ರ ವಹಿಸುತ್ತವೆ. ವಿಜ್ಞಾನ ಮತ್ತು ತಂತ್ರಜ್ಞಾನದ ದೊಡ್ಡ ಭಾಗವಾದ ಕಂಪ್ಯೂಟರ್ ಶಿಕ್ಷಣ ಹೊಸ ಕ್ರಾಂತಿ ನಿರ್ಮಿಸಿದೆ ಎಂದರು.

ಪ್ರಾಚಾರ್ಯರಾದ ಡಾ. ಭೀಮಾಶಂಕರ ಬಿರಾದಾರ ಮಾತನಾಡಿ, ವೈಜ್ಞಾನಿಕ ಸಂಶೋಧನೆಗಳು, ಹೊಸ ಆವಿಷ್ಕಾರಗಳು ಈಗಿರುವ ಲೋಕವನ್ನು ತಂತ್ರಜ್ಞಾನದ ಜಗತ್ತಾಗಿ ರೂಪಿಸುತ್ತಿದೆ. ಶಿಕ್ಷಣ, ವೈದ್ಯಕೀಯ, ಆಡಳಿತ ಸೇರಿ ಮನುಷ್ಯ ಬದುಕಿನ ಬಹು ಭಾಗ ಗಣಕಯಂತ್ರಗಳೆ ಆವರಿಸಿಕೊಂಡಿವೆ. ಅದರ ಬಳಕೆಯ ವಿವೇಕ, ವಿವೇಚನೆಯ ಅರಿವು ಎಲ್ಲಕ್ಕಿಂತ ಮೊದಲು ಇರಬೇಕಾದ ಅಗತ್ಯವಿದೆ ಎಂದರು. ಬಿಡಿಪಿಸಿ ಅಧ್ಯಕ್ಷರಾದ ಬಸವರಾಜ ಕೋರಕೆ ಅಧ್ಯಕ್ಷತೆವಹಿಸಿದ್ದರು. ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಚಿರಡೆ, ಕೋಶಾಧ್ಯಕ್ಷ ರಾಜಕುಮಾರ ಹೊಳಕುಂದೆ, ಕಾರ್ಯದರ್ಶಿ ವಿವೇಕಾನಂದ ಹೊದಲೂರೆ, ನಿರ್ದೇಶಕರಾದ ವೀರಣ್ಣ ಹಲಶೆಟ್ಟೆ, ಸುಭಾಷ ಹೊಳಕುಂದೆ,, ಅಶೋಕ ನಾಗರಾಳೆ, ಕಾಶಪ್ಪ ಸಕ್ಕರಬಾವಿ, ಶ್ರೀಕಾಂತ ಬಡದಾಳೆ, ಆಡಳಿತಾಧಿಕಾರಿ ಡಾ. ಮಲ್ಲಿಕಾರ್ಜುನ ಲಕಶೆಟ್ಟೆ, ಬಿಸಿಎ ವಿಭಾಗದ ಮುಖ್ಯಸ್ಥೆ ಶೀತಲ್ ರೆಡ್ಡಿ, ಬಸವೇಶ್ವರ ಪಿಯು ಕಾಲೇಜಿನ ಪ್ರಾಚಾರ್ಯರಾದ ಡಾ ರುದ್ರಮಣಿ ಮಠಪತಿ, ಅಕ್ಕಮಹಾದೇವಿ ಮಹಿಳಾ ಕಾಲೇಜು ಪ್ರಾಚಾರ್ಯೆ ಮಾಯಾ ಮುರಾಳೆ, ಐಕ್ಯುಎಸಿ ಸಂಯೋಜಕ ಪವನ್ ಪಾಟೀಲ, ಉಪನ್ಯಾಸಕರಾದ ಶಶಿಧರ ಪಾಟೀಲ, ಅಶೋಕ ರೆಡ್ಡಿ, ಶ್ರೀನಿವಾಸ ಉಮಾಪುರೆ, ಡಾ. ಬಸವರಾಜ ಖಂಡಾಳೆ, ಎಂ.ಡಿ. ಸುಜಾವುದ್ದಿನ್, ನಾಗವೇಣಿ ವಟಗೆ, ಪ್ರಿಯಾ ಚೌಹಾಣ್, ವೀರೇಶ ಮಠಪತಿ, ರೋಶನ್ ಬಿ, ಶೃತಿ ನೀಲಮಠ, ಗಂಗಾಧರ ಸಾಲಿಮಠ, ಚನ್ನಬಸಪ್ಪಗೌರ, ಪ್ರವೀಣ್ ಬಿರಾದಾರ ಮೊದಲಾದವರು ಇದ್ದರು.

ಸನತ್ ರೆಡ್ಡಿ ಸ್ವಾಗತಿಸಿದರು. ಸಂಗೀತಾ ಮಹಾಗಾವೆ ನಿರೂಪಿಸಿದರು. ಡಾ. ಶಾಂತಲಾ ಪಾಟೀಲ ವಂದಿಸಿದರು.

## ನಂದಗಾಂವ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆ ಜರುಗಿತು

ಮಲ್ಲಮ್ಮ ನುಡಿ ವಾರ್ತೆ


ಹುಮನಾಬಾದ:– ತಾಲೂಕಿನ ನಂದಗಾಂವ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆ ರವಿವಾರ ಜರುಗಿ–ತ್ತು. ಪರಿಶಿಷ್ಟ ಜಾತಿ ವಿದ್ಯಾವತಿ ಗಂಡ ರುದ್ರಪ್ಪ, ಪರಿಶಿಷ್ಟ ಪಂಗಡ ಗಂಗಮ್ಮ ಗಂಡ ವಿಠಲ, ಹಿಂದುಳಿದ ಪ್ರವರ್ಗ (ಎ) ತಜಿಮಬೇಗಂ ಗಂಡ ಇಸ್ಮಾಯಿಲ್, ಹಿಂದುಳಿದ ಪ್ರವರ್ಗ (ಬಿ) ಗೌರಮ್ಮ ಗಂಡ ಸುಭಾಷ, ಮಹಿಳಾ ಸ್ಥಾನಕ್ಕೆ ಲಕ್ಷ್ಮಿಬಾಯಿ ಗಂಡ ನಾಗಪ್ಪ,



ಕಮಲಾಬಾಯಿ ಗಂಡ ಹೊನ್ನಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದರೆ. ಸಾಮಾನ್ಯ ಸ್ಥಾನಕ್ಕೆ ರವಿವಾರ ಸಂಘದ ಕಾರ್ಯಾಲಯದಲ್ಲಿ ಚುನಾವಣೆ ಜರುಗಿತ್ತು. ಸಾಮಾನ್ಯ ಸ್ಥಾನಕ್ಕೆ ರಜಿಯಾಬೀ ಗಂಡ ಗೋರಮಿಯಾ, ತುಕ್ಕಮ್ಮ ಗಂಡ ಶಿವರಾಜ, ಫರ್ಜನಾಬೀ ಗಂಡ ಸಮದಮಿಯಾ, ರೇಣುಕಾ ಗಂಡ ಶಿವಾನಂದ, ಕೌಸರ ಬೇಗಂ ಗಂಡ ರಹುಫಮಿಯಾ, ಶಿವಕಾಂತಾ ಗಂಡ ಭೀಮಣ್ಣ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಖುದ್ದುಸ್ ತಿಳಿಸಿದ್ದಾರೆ. ಜಿಲ್ಲಾ ಸಹಕಾರ ಸಂಘದ ಸಿಬ್ಬಂದಿಗಳಾದ ಶಿವಾನಂದ ಹಡಪದ, ಸಂಗಮೇಶ ಸಂಘದ ಕಾರ್ಯದರ್ಶಿ ತಿಪ್ಪಣ್ಣ ಜಮಾದರ್ ಇದ್ದರು.

## ಜೂಜಾಟ: 6 ಜನರ ಬಂಧನ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ,ಅ.27–ನಗರದ ಈದ್ಗಾ ಮೈದಾನ ಹತ್ತಿರವಿರುವ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಆರ್.ಜಿ.ನಗರ ಪೊಲೀಸ್ ಠಾಣೆ ಪಿಐ ಕುಬೇರ್ ಎಸ್. ರಾಯಮಾನೆ, ಸಿಬ್ಬಂದಿಗಳಾದ ಮಲ್ಲಣ್ಣಗೌಡ, ಉಮೇಶ್, ಶರಣಬಸವ ಅವರು ದಾಳಿ ನಡೆಸಿ 6 ಜನರನ್ನು ಬಂಧಿಸಿದ್ದಾರೆ. ಪ್ರದೀಪ್ ಜಮಾದಾರ, ಸಂಗಮೇಶ ಗುಳಗಿ, ನಂದಕುಮಾರ ಬಿರಾದಾರ, ರಾಹುಲ್ ಬಿರಾದಾರ, ಅರುಣಕುಮಾರ ಹದನೂರ, ಸಿದ್ದಾರೂಢ ಬಿರಾದಾರ ಎಂಬುವವರನ್ನು ಬಂಧಿಸಿ 3,360 ರೂ.ನಗದು ಮತ್ತು 52 ಇಸ್ಪೀಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ.

ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಶ್ರೀ ರಂಭಾಪುರಿ ಜಗದ್ಗುರುಗಳವರ ನವಂಬರ್ ಮಾಹೆಯ ಪ್ರವಾಸ ವಿವರ

ಮಲ್ಲಮ್ಮ ನುಡಿ ವಾರ್ತೆ

ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು) ಅಕ್ಟೋಬರ್–27– ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳವರ 2025ನೇ ಸಾಲಿನ ನವಂಬರ್ ಮಾಹೆಯ ಪ್ರವಾಸ ಕಾರ್ಯಕ್ರಮ ಈ ಕೆಳಗಿನಂತಿರುವುದಾಗಿ ಶ್ರೀ ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ತಿಳಿಸಿದ್ದಾರೆ.



ದಿನಾಂಕ 1ರಂದು ಬೆಳಿಗ್ಗೆ ಮಾನ್ವಿ ತಾಲೂಕ ಕರೆಗುಡ್ಡದಲ್ಲಿ ಶ್ರೀ ಮಹಂತೇಶ್ವರ ಮಠದ ಶ್ರೀಗಳವರ ಪಟ್ಟಾಧಿಕಾರದ ರಜತ ಮಹೋತ್ಸವ ಸಮಾರಂಭ ಸಂಜೆ 6 ಗಂಟೆಗೆ ಲಿಂಗಸುಗೂರಿನಲ್ಲಿ ಮಾತಾ ಮಾಣಿಕೇಶ್ವರಿ ಅಮ್ಮನವರ ನೂತನ ದೇವಾಲಯ ಉದ್ಘಾಟನಾ ಸಮಾರಂಭ, 2ರಂದು ಶಿಗ್ಗಾವಿ ತಾಲೂಕ ತೆವರಮೆಳ್ಳಿಹಳ್ಳಿಯಲ್ಲಿ ಶ್ರೀ ವೀರಭದ್ರೇಶ್ವರ ದೇವಸ್ಥಾನ ಉದ್ಘಾಟನೆ ಮತ್ತು ಪ್ರಾಣ ಪ್ರತಿಷ್ಠಾಪನಾ ಸಮಾರಂಭ, 3ರಂದು ಚಿಕ್ಕಮಗಳೂರು ಜಿಲ್ಲೆ ಬೀರೂರು ಪಟ್ಟಣದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂಗಲ ಭವನ ಉದ್ಘಾಟನೆ ಹಾಗೂ ಶ್ರೀ ಜಗದ್ಗುರು ಪಂಚ ಪೀಠಾಧೀಶ್ವರರ ಧರ್ಮ ಸಮ್ಮೇಳನದಲ್ಲಿ ಪಾಲ್ಗೊಳ್ಳುವರು. ದಿನಾಂಕ 4ರಂದು ತೀರ್ಥಹಳ್ಳಿ ತಾಲೂಕ ಮಳಲಿಮಠದಲ್ಲಿ ಕಾರ್ತಿಕ ದೀಪೋತ್ಸವ ಸಮಾರಂಭ, 5 ರಂದು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಕಾರ್ತಿಕ ದೀಪೋತ್ಸವ ಹಾಗೂ ಶ್ರೀ ವೀರಭದ್ರಸ್ವಾಮಿ ರಥೋತ್ಸವ ಸಮಾರಂಭ, 8ರಂದು ಹರಿಹರದಲ್ಲಿ ಮಹಾತಪಸ್ವಿ ಫೌಂಡೇಶನ್ ಅವರಿಂದ ಸಂಯೋಜಿಸಿದ ಧರ್ಮ ಸಮಾರಂಭ, 10ರಂದು ರಾಣೆಬೆನ್ನೂರು ತಾಲೂಕ ದೇವಗೊಂಡನಕಟ್ಟಿ ಗ್ರಾಮದಲ್ಲಿ ನೂತನ ದೇವಸ್ಥಾನದ ಉದ್ಘಾಟನಾ ಸಮಾರಂಭ, 12ರಂದು ಬೀದರ ಜಿಲ್ಲೆ ಹೊನ್ನಿಕೆರೆಯಲ್ಲಿ ಶ್ರೀ ಸಿದ್ಧೇಶ್ವರ ದೇವಸ್ಥಾನ ಕಳಸಾರೋಹಣ ಮತ್ತು ಲಕ್ಷ ದೀಪೋತ್ಸವ ಸಮಾರಂಭದ ಸಾನ್ನಿಧ್ಯವಹಿಸುವರು. 14ರಂದು ಮೈಸೂರಿನಲ್ಲಿ ವೀರಶೈವ ಸಾರ್ವಜನಿಕ ಸೇವಾ ಸಂಸ್ಥೆಯಿಂದ ಮಹಾಪೂಜಾ ಹಾಗೂ ಧರ್ಮ ಸಮಾರಂಭ, 16ರಂದು ದಾವಣಗೆರೆಯಲ್ಲಿ ಇಷ್ಟಲಿಂಗ ಮಹಾಪೂಜಾ, 17ರಂದು ಬೆಳಿಗ್ಗೆ ಹಾನಗಲ್ಲ ತಾಲೂಕ ಶಂಕರಿಕೊಪ್ಪದಲ್ಲಿ ಧರ್ಮ ಜಾಗೃತಿ ಸಮಾರಂಭ ಸಂಜೆ 7 ಗಂಟೆಗೆ ಹುಬ್ಬಳ್ಳಿಯಲ್ಲಿ ಕಾರ್ತಿಕ ದೀಪೋತ್ಸವ ಸಮಾರಂಭ, 18ರಂದು ಕಲಘಟಗಿಯಲ್ಲಿ ಲಿಂ. ಮಡಿವಾಳ ಶ್ರೀಗಳವರ ಪುಣ್ಯ ಸ್ಮರಣೊತ್ಸವ ಸಮಾರಂಭ, 19 ಮತ್ತು 20ರಂದು ಶಹಾಪುರ ತಾಲೂಕ ದೊಡ್ಡಸಗರದಲ್ಲಿ ಪುರಾಣ ಮಂಗಲ ಮತ್ತು ಸೋಮೇಶ್ವರ ಶ್ರೀಗಳವರ ಪಟ್ಟಾಧಿಕಾರದ ದ್ವಾದಶ ವರ್ಧಂತಿ ಮಹೋತ್ಸವ ಸಮಾರಂಭದ ಸಾನ್ನಿಧ್ಯವಹಿಸುವರು. ದಿನಾಂಕ 23ರಂದು ಅಫ್ಜಲಪುರ ತಾಲೂಕ ಬುಕ್ಕಾಂಬುಧಿಯಲ್ಲಿ ಲಿಂ. ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಶುಭಾಗಮನದ ಶತಮಾನೋತ್ಸವ ಸಮಾರಂಭ 27ರಂದು ಬಾಳೆಹೊನ್ನೂರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಲಿಂ. ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳ ಪೀಠಾರೋಹಣದ ಶತಮಾನೋತ್ಸವ ಸಮಾರಂಭ ಹಾಗೂ 29ರಂದು ಶಿಗ್ಗಾಂವಿ ತಾಲೂಕ ಬಿಸನಳ್ಳಿಯಲ್ಲಿ ಧರ್ಮ ಜಾಗೃತಿ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಧರ್ಮಾಭಿಮಾನಿಗಳು ಶ್ರೀ ರಂಭಾಪುರಿ ಜಗದ್ಗುರುಗಳವರ ಧಾರ್ಮಿಕ ಕಾರ್ಯಕ್ರಮಗಳ ಲಾಭವನ್ನು ಪಡೆದುಕೊಳ್ಳಬೇಕೆಂದು ಅವರು ವಿನಂತಿಸಿದ್ದಾರೆ.

## ಅಂತರಂಗದ ಪ್ರೀತಿಯ ಒಳಹರಿವಿನಿಂದ ಜಗಮುನ್ನಣೆ ಸಾಧಿಸಬಹುದೆಂದು : ಹಾರಕೂಡದ ಶ್ರೀಗಳು.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:–ಅ 27 ಅಂತರಂಗದ ಪ್ರೀತಿಯ ಒಳಹರಿವಿನಿಂದ ಜಗ ಮನ್ನಣೆ ಸಾಧಿಸಬಹುದೆಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಗ್ರಾಮದ ದಿ. ವೀರಯ್ಯಸ್ವಾಮಿ ಮಠಪತಿ ಪರಿವಾರದವತಿಯಿಂದ ಆಯೋಜಿಸಿದ ಗುರುವಂದನೆ ಹಾಗೂ 889ನೇ ತುಲಾಭಾರ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಸ್ವಾರ್ಥ ಮತ್ತು ತೋರಿಕೆ ಇಲ್ಲದ ವಿಶಾಲ ಮನೋಭಾವದ ಸ್ವಚ್ಛ ಪ್ರೀತಿಯಿಂದ ಜಗದ ಮನ್ನಣೆ ಸಾಧಿಸಬಹುದಾಗಿದೆ.

ಶುಭದೃಷ್ಟಿಯ ಪ್ರೀತಿ ದೇವರಿಗೆ ಸಮ ಎನ್ನುವ ಮಾತು ಯಾವತ್ತೂ ಉಲ್ಲೇಖನೀಯವಾಗಿದೆ.

ದ್ವೇಷದಿಂದ ಏನನ್ನೂ ಸಾಗಿಸಲಾಗದು, ದ್ವೇಷ, ಅಸೂಯೆ ತುಂಬಿಕೊಂಡವರಿಗೆ ನೆಮ್ಮದಿ ಕೇವಲ ಮರೀಚಿಕೆ ಅಷ್ಟೆ, ಪ್ರೀತಿಯ ಮುಂದುವರಿಸಿದ ಹಂತವೇ ಭಕ್ತಿಯಾಗಿದ್ದು, ಗುರುವಿನಲ್ಲಿ, ದೇವರಲ್ಲಿ ಇಡುವ ದೃಢ ಭಕ್ತಿಯಿಂದ ಮನುಷ್ಯ ದೇವಾಂಶ ತುಂಬಿದ ಮಾನವತ್ವದ ಮಜಲು ತಲುಪಲು ಸಾಧ್ಯ ಎಂದು ನುಡಿದರು.

ಮಠಪತಿ ಪರಿವಾರದವರು ಆಯೋಜಿಸಿದ ಈ ಧರ್ಮಕಾರ್ಯ ಅವರ ಪರಿವಾರದವರಿಗೂ ಹಾಗೂ ಎಲ್ಲರಿಗೂ ಶುಭವನ್ನುಂಟು ಮಾಡಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಮೇಘರಾಜ ನಾಗರಾಳೆ, ಶಂಕರರಾವ ಮಾಣಿಕೆ, ಧರ್ಮರಾಯ ಅಟ್ಟೂರೆ, ಸಂಗಯ್ಯ ಸ್ವಾಮಿ ಕೋರವಾರ, ಕಲ್ಲಯ್ಯ ಮಠಪತಿ, ಅಶೋಕ ಮಠಪತಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ರಾಮಲಿಂಗಯ್ಯ ಸ್ವಾಮಿ ಮಠಪತಿ ಸ್ವಾಗತಿಸಿದರು. ಹಾರ್ದಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ ಹಾಡಿದರು.

## ಸರ್ಕಾರಿ ಹುದ್ದೆ ಭರ್ತಿಯಲ್ಲಿ ಐದು ವರ್ಷ ವಯೋಮಿತಿ ಸಡಿಲಿಸಲು ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಅ.27: ರಾಜ್ಯದಲ್ಲಿ ಖಾಲಿಯಿರುವ ಹುದ್ದೆಗಳ ಭರ್ತಿಗಾಗಿ:ಹಾಗೂನೇಮಕಾತಿಯಲ್ಲಿ ಕನಿಷ್ಠ ಐದು ವರ್ಷ ವಯೋಮಿತಿ ಸಡಲಿಕೆಗಾಗಿ ಒತ್ತಾಯಿಸಿ ಡಿವೈಎಸ್‌ಪಿ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ಪ್ರತಿಭಟನೆ ಮಾಡಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲಾಯಿತು



ಭಾರತಪ್ರಜಾಸತ್ತಾತ್ಮಕಯುವಜನ ಫೆಡರೇಷನ್ (ಡಿವೈಎಸ್‌ಪಿ) ಬಳ್ಳಾರಿ ಜಿಲ್ಲಾ ಅಧ್ಯಕ್ಷರು ಯು. ಎರ್ರಿಸ್ವಾಮಿ ಮಾತನಾಡಿ, ,ಈ ಮೊದಲು ರಾಜ್ಯದಲ್ಲಿ ಆಡಳಿತ ನಡೆಸಿದ್ದ ಬಿಜೆಪಿ ಸರಕಾರವು ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೇ.

ಉದ್ಯೋಗಾಕಾಂಕ್ಷಿಯುವಜನರನ್ನು ವಂಚಿಸಿತ್ತು. ಬಿಜೆಪಿಯವೈಫಲ್ಯಗಳನ್ನು ಎತ್ತಿತೋರಿಸಿದ ತಮ್ಮ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಎಲ್ಲ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಭರವಸೆ ನೀಡಿದ್ದೀರಿ. ಆದರೆ ತಮ್ಮ ನೇತೃತ್ವದ ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಆಡಳಿತ ಚುಕ್ಕಾಣಿ ಹಿಡಿದು ಎರಡೂವರೆ ವರ್ಷವಾಗುತ್ತ ಬಂದರೂ ಖಾಲಿ ಹುದ್ದೆ ಭರ್ತಿಗೊಳಿಸಲು ಅಗತ್ಯಕ್ರಮ ಕೈಗೊಳ್ಳದಿರುವುದನ್ನು ಡಿವೈಎಸ್‌ಪಿ ತೀವ್ರವಾಗಿ ಖಂಡಿಸುತ್ತದೆ.

ರಾಜ್ಯದ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಸಾಕ್ಷರತಾ ಇಲಾಖೆಗಳಲ್ಲಿ 70,727 ಹುದ್ದೆಗಳು, ಉನ್ನತ ಶಿಕ್ಷಣ ಇಲಾಖೆಯಲ್ಲಿ 13,227 ಹುದ್ದೆಗಳು, ಆರೋಗ್ಯ ಇಲಾಖೆಯಲ್ಲಿ 37,069 ಹುದ್ದೆಗಳು, ಒಳಾಡಳಿತದಲ್ಲಿ 26128 ಹಾಗೂ ಪೋಲಿಸ್ ಇಲಾಖೆಯಲ್ಲಿ 8000 ಕ್ಕೂಅಧಿಕ ಹುದ್ದೆಗಳು ಸೇರಿದಂತೆ ರಾಜ್ಯದ 43 ಇಲಾಖೆಗಳಲ್ಲಿ 2,76,386 ಹುದ್ದೆಗಳು ಖಾಲಿಯಿವೆ! ಶಿಕ್ಷಕರು, ಪೋಲಿಸ್ ಹಾಗೂ ಇತರೆ ಹಲವು ಹುದ್ದೆಗಳು ಭರ್ತಿಯಾಗದಿರುವುದರಿಂದ ಉದ್ಯೋಗಾಕಾಂಕ್ಷಿಯುವಜನತೆ ಭರವಸೆ ಕಳೆದುಕೊಂಡು ಹತಾಶರಾಗುತ್ತಿದ್ದಾರೆ.

ಆದ್ದರಿಂದ ರಾಜ್ಯ ಸರಕಾರ ಪ್ರಸ್ತುತ ಮೂರು ವರ್ಷದ ವಯೋಮಿತಿ ಸಡಲಿಕೆಯನ್ನು ಮಾಡಿರುವುದು ಹಲವು ಉದ್ಯೋಗಾಕಾಂಕ್ಷಿಗಳಿಗೆ ನೆರವಾಗುವುದಿಲ್ಲ. ಪೊಲೀಸ್ ಕಾನ್ಸೆಬಲ್ ಸೇರಿ ಎಲ್ಲ ನೇಮಕಾತಿಗೆ ಕನಿಷ್ಠ 5 ವರ್ಷ ವಯೋಮಿತಿ ಸಡಿಲಿಕೆ ಮಾಡಬೇಕು. ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕೂಡಲೇ ಭರ್ತಿಗೊಳಿಸಲು ಅಗತ್ಯಕ್ರಮಗಳನ್ನು ಕೈಗೊಳ್ಳಬೇಕು ಎಂದು ಭಾರತ ಪ್ರಜಾಸತ್ತಾತ್ಮಕ ಯುವಜನ ಫೆಡರೇಷನ್ (ಡಿವೈಎಸ್‌ಪಿ) ಬಳ್ಳಾರಿ ಜಿಲ್ಲಾ ಸಮಿತಿಯು ಒತ್ತಾಯಿಸುತ್ತದೆ. ಇಲ್ಲವಾದಲ್ಲಿ ರಾಜ್ಯವ್ಯಾಪಿ ಹೋರಾಟವನ್ನು ತೀವ್ರಗೊಳಿಸಲಾಗುವುದು ಎಂದು ಡಿ.ವೈ.ಎಫ್.ಐ ಜಿಲ್ಲಾ ಅಧ್ಯಕ್ಷರು ಯು.ಎರ್ರಿಸ್ವಾಮಿ ಜಿಲ್ಲಾ ಉಪಾಧ್ಯಕ್ಷರು ಬೈಲಾ ಹನುಮಪ್ಪ ಜಿಲ್ಲಾ ಖಜಾಂಚಿ ಬಿಪಿ ನವೀನ್ ಕ್ರೀಡಾ. ಅಧ್ಯಕ್ಷರು ಜಿ.ಎನ್ ಎರ್ರಿಸ್ವಾಮಿ ತಾಲೂಕು ಅಧ್ಯಕ್ಷರು ಎ ತಿಪ್ಪೇರುದ್ರ, ಜಿ ನ ತಾಲೂಕು ಕಾರ್ಯದರ್ಶಿ ವರದರಾಜ ರಾಜೇಂದ್ರ ಪ್ರಸಾದ್.ಪರಮೇಶ್ ಹೆಚ್ ರಮೇಶ್ ಶ್ರೀನಿವಾಸ್ ಕೆ. ಶಿವಾನಂದ. ರೈಮಾನ್ ಶಿರಾಜ್ ಇತರರು

ಸರಕಾರವನ್ನು ಒತ್ತಾಯಿಸಿದ್ದಾರೆ.

## ಗದುಗಿನ ತೋಂಟದ ಸಿದ್ಧರಾಮ ಶ್ರೀಗಳನ್ನು ಹೆದರಿಸುವುದು ಬಿಟ್ಟು ಬಿಡಿ: ಸಂಗಮೇಶ ಎನ್ ಜವಾದಿ

ಮಲ್ಲಮ್ಮ ನುಡಿ ವಾರ್ತೆ



ಚಿಟಗುಪ್ಪ:– ಒಂದು ದೂರದರ್ಶನದ ಸಂದರ್ಶನದಲ್ಲಿ ಮಹಾರಾಷ್ಟ್ರ ಕನ್ನೇರಿ ಮಠದ ಕಾಡಸಿದ್ದೇಶ್ವರ ಶ್ರೀಗಳು ದೇಶದ ಭಾವೈಕ್ಯತೆಯ ಮಠ ಎಂದೆ ಪ್ರಸಿದ್ಧಿ ಪಡೆದ ಗದುಗಿನ ತೋಂಟದ ಸಿದ್ಧರಾಮ ಶ್ರೀಗಳ ಪೂರ್ವಾಶ್ರಮದ ಸಂಬಂಧಿಗಳಿಗೆ ಸಿದ್ಧರಾಮ ಶ್ರೀಗಳು 20 ತೊಲೆ ಬಂಗಾರ ಕೊಟ್ಟಿರುವುದಾಗಿ ಹೇಳಿಕೆ ನೀಡಿದ್ದಾರೆ ಎಂದು ತಿಳಿದು ಬಂದಿದೆ. ಈ ಆರೋಪ ಅತ್ಯಂತ ಶುದ್ಧ

ಸುಳ್ಳು ಎಂದು ಸಾಹಿತಿ, ಹೋರಾಟಗಾರರಾದ ಸಂಗಮೇಶ ಎನ್ ಜವಾದಿ ತಿಳಿಸಿದ್ದಾರೆ

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಂಗಮೇಶ ಎನ್ ಜವಾದಿ ರವರು ಹಸಿ ಹಸಿ ಸುಳ್ಳು ಆರೋಪಗಳನ್ನು ಮಾಡುವ ಮುಖಾಂತರ ಬಸವ ಸಂಸ್ಕೃತಿ ಅಭಿಯಾನದ ಮುಂಚೂಣಿಯಲ್ಲಿರುವ ಗದುಗಿನ ತೋಂಟದ ಸಿದ್ಧರಾಮ ಶ್ರೀಗಳನ್ನು ಹೆದರಿಸಿ ಹಿಂದೆ ಸರಿಸುವ ಪ್ರಯತ್ನ ಕನ್ನೇರಿ ಕಾಡಸಿದ್ದೇಶ್ವರ ಸ್ವಾಮಿಜಿಗಳು ಮಾಡುತ್ತಿದ್ದಾರೆ. ಇದು ಅಕ್ಷರಶಃ ಖಂಡನೀಯ ನಡೆಯಾಗಿದೆ.

ಯಾವುದೇ ಮದುವೆಯೆಲ್ಲಾಗಲಿ ಅಥವಾ ಯಾರಿಗೆ ಆಗಲಿ ಇಲ್ಲಿಯತನಕ ಬಂಗಾರ ಕೊಟ್ಟಿರುವುದಿಲ್ಲಾ. 20 ತೊಲಿ ಬಂಗಾರ ಹಾಕಿದರು ಎಂದು ಕನ್ನೇರಿ ಕಾಡಸಿದ್ದೇಶ್ವರ ಸ್ವಾಮಿಜಿಗಳು

ಹೇಳಿರುವುದು ತೋಂಟದ ಸಿದ್ಧರಾಮ ಶ್ರೀಗಳ ಚಾರಿತ್ರ್ಯಹನನದ ಭಾಗವಾಗಿದೆ. ಇದು ಪ್ರತಿಯೊಬ್ಬ ಬಸವಾಭಿಮಾನಿಗಳು ಉಗ್ರವಾಗಿ ಖಂಡಿಸುತ್ತೇವೆ ಎಂದರು.

ತೋಂಟದ ಸಿದ್ಧರಾಮ ಶ್ರೀಗಳು ಇಲ್ಲಿಯವರೆಗೂ ಅವರ ಪೂರ್ವಾಶ್ರಮ ಸಂಬಂಧಿಗಳ ಯಾವುದೇ ಮದುವೆಗೆ ಹೋದ ಉದಾಹರಣೆ ಇಲ್ಲ ಎಂದು ಈಗಾಗಲೇ ಸಿದ್ದರಾಮ ಶ್ರೀಗಳು ಸ್ಪಷ್ಟನೆ ನೀಡಿದ್ದಾರೆ.

ಅಭಿಯಾನದಲ್ಲಿ ಭಾಗವಹಿಸಿದ ತೋಂಟದ ಸಿದ್ಧರಾಮ ಶ್ರೀಗಳು ಸೇರಿದಂತೆ ಇನ್ನಿತರರು ಸ್ವಾಮಿಗಳು ದಾರು ಕುಡಿಯುತ್ತಾರೆ. ಮಾಂಸ ಭಂಜಕರಾಗಿದ್ದಾರೆ. ಕ್ರಾಪು ಬಿಟ್ಟು ಮೇಲೆ ಪೇಟಾ ಸುತ್ತುತ್ತಾರೆ ಎಂಬಂತಹ ಕನ್ನೇರಿ ಶ್ರೀಗಳ ಚಾರಿತ್ರ್ಯಹನನ ಮಾಡುವ ಸುಳ್ಳು ಮಾತುಗಳು ಯಾವ ಉದ್ದೇಶ ಹೊಂದಿವೆ ಎಂಬುದು ಇಡೀ ನಾಡಿನ ಜನತೆಗೆ ತಿಳಿದ ವಿಷಯವಾಗಿದೆ.

ಲಿಂಗಾಯತ ಸ್ವತಂತ್ರ ಧರ್ಮವಾದರೆ ಲಿಂಗಾಯತರು ಧಾರ್ಮಿಕ ಅಲ್ಪಸಂಖ್ಯಾತರಾಗುವ ಮೂಲಕ ಸಂವಿಧಾನದತ್ತವಾದ ಅನೇಕ ಸೌಲಭ್ಯಗಳನ್ನು ಪಡೆ–ಯುತ್ತಾರೆ. ಇದು ಲಿಂಗಾಯತರ ಭವಿಷ್ಯದ ಹಿತದೃಷ್ಟಿಯಿಂದ ನಡೆದ ಹೋರಾಟ. ಇದರಿಂದ ದೇಶ ಹಾಳಾಗುತ್ತದೆ ಎಂದು ಹೇಳುವುದು ಸರಿಯಲ್ಲ.

ಈ ಮೊದಲು ಭಾರತೀಯರೇ ಆಗಿರುವ ಬೌದ್ಧ ಧರ್ಮೀಯರಿಗೆ, ಸಿಖ್ಖ ಧರ್ಮದವರಿಗೆ ಮತ್ತು ಇತ್ತೀಚೆಗೆ ಜೈನಧರ್ಮದವರಿಗೆ ಸ್ವತಂತ್ರ ಧರ್ಮದ ಸ್ಥಾನ ನೀಡಲಾಗಿದೆ. ಇದರಿಂದ ದೇಶದ ಭದ್ರತೆಗೆ ಯಾವ ಹಾನಿಯಾಗಿದೆ? ಅದೇ ಮಾದರಿಯಲ್ಲಿ ದೇಶಪ್ರೇಮಿಗಳಾಗಿರುವ ಲಿಂಗಾಯತರ ಸಾಂವಿಧಾನಿಕ ಹಕ್ಕುಗಳನ್ನು ಪಡೆಯುವುದು ಲಿಂಗಾಯತ ಹೋರಾಟದ ಪ್ರಮುಖ ಉದ್ದೇಶವಾಗಿದೆ. ಇದರಲ್ಲಿ ಯಾವುದೇ ರೀತಿಯ ಸ್ವಾರ್ಥ ಇಲ್ಲವೇ ಇಲ್ಲ.

ಹೋರಾಟದ ಮುಂಚೂಣಿಯಲ್ಲಿರುವ ತೋಂಟದ ಸಿದ್ಧರಾಮ ಶ್ರೀಗಳನ್ನು ಗುರಿ ಮಾಡಿಕೊಂಡು ಸುಳ್ಳು ಆರೋಪ ಹೊರಿಸುವುದು ಎಷ್ಟು ಸರಿ? ಸಿದ್ಧಾರಮ ಶ್ರೀಗಳ ಮಠದ ಆಡಳಿತ ಅತ್ಯಂತ ಪಾರದರ್ಶಕವಾಗಿದೆ.

ಮಠದ ಎಲ್ಲ ವ್ಯವಹಾರಗಳನ್ನು ವ್ಯವಸ್ಥಾಪಕರು, ವಿದ್ಯಾಸಂಸ್ಥೆಗಳ ವ್ಯವಹಾರಗಳನ್ನು ಆಡಳಿತಾಧಿಕಾರಿಗಳು ಮೊದಲಿನಿಂದಲೂ ನೋಡಿಕೊಂಡು ಬರುತ್ತಿದ್ದಾರೆ. ಇದು ಪ್ರತಿಯೊಬ್ಬರಿಗೂ ತಿಳಿದ ವಿಚಾರವಾಗಿದೆ.

ತೋಂಟದ ಸಿದ್ಧರಾಮ ಶ್ರೀಗಳು ಅವರಿಗೆ ಬೇಕಾದವರನ್ನು ನೇಮಿಸಿಕೊಂಡು ಯಾವುದೇ ರೀತಿಯ ಭ್ರಷ್ಟ ವ್ಯವಹಾರ ಮಾಡಿಲ್ಲ ಎಂದು ಕನ್ನೇರಿ ಶ್ರೀಗಳಿಗೆ ಈ ಮೂಲಕ ಸ್ಪಷ್ಟಪಡಿಸುತ್ತೇವೆ. ಕಾರಣ ಈಗಲಾದರೂ ಹಸಿ ಹಸಿ ಸುಳ್ಳುಗಳನ್ನು ಹೇಳಿ ಜನರನ್ನು ಏಮಾರಿಸುವುದು ಕನ್ನೇರಿ ಕಾಡಸಿದ್ದೇಶ್ವರ ಶ್ರೀಗಳು ಈ ತಕ್ಷಣವೇ ಬಿಟ್ಟುಬಿಡಬೇಕು. ಇನ್ನು ಮೇಲಾದರೂ ಧರ್ಮಕ್ಕೆ ಧರ್ಮಾಧಿಕಾರಿಗಳಿಗೆ ಸಂಬಂಧಿಸಿದ ವಿಷಯವನ್ನು ತಾತ್ವಿಕ ನೆಲೆಯಲ್ಲಿ ಖಂಡಿಸಲಿ ಅದಕ್ಕೆ ಸ್ವಾಗತವಿದೆ. ಆದರೆ ಸುಳ್ಳು ಆರೋಪಗಳ ಮೂಲಕ ಚಾರಿತ್ರ್ಯಹನನ ಮಾಡುವ ಕೆಲಸ ಕನ್ನೇರಿ ಕಾಡಸಿದ್ದೇಶ್ವರ ಸ್ವಾಮಿಜಿಗಳು ಯಾವತ್ತೂ ಮಾಡಬಾರದು, ಇದು ಅವರಿಗೆ ಖಂಡಿತವಾಗಿಯೂ ಶೋಭೆ ತರುವಂತಹದ್ದಲ್ಲ.

ತೋಂಟದ ಸಿದ್ಧರಾಮ ಶ್ರೀಗಳು ಸೇರಿದಂತೆ ಲಿಂಗಾಯತ ಧರ್ಮದ ಹೋರಾಟದಲ್ಲಿ ಮುಂಚೂಣಿಯಲ್ಲಿರುವ ಲಿಂಗಾಯತ ಮಠಾಧೀಶರನ್ನು ಹಸಿ ಹಸಿ ಸುಳ್ಳುಗಳನ್ನು ಹೇಳಿ ಹೆದರಿಸುವುದು ಬಿಟ್ಟು ಬಿಡಬೇಕೆಂದು ಕನ್ನೇರಿ ಕಾಡಸಿದ್ದೇಶ್ವರ ಶ್ರೀಗಳಲ್ಲಿ ಸಂಗಮೇಶ ಎನ್ ಜವಾದಿ ವಿನಂತಿಸಿದ್ದಾರೆ.

## ಡಾ.ಖಮರ್ ಉಲ್ ಇಸ್ಲಾಂ ಸ್ಮರಣಾರ್ಥ ಉಚಿತ ಆರೋಗ್ಯ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಅ.27–ಮಾಜಿ ಸಚಿವ ಡಾ.ಖಮರ್ ಉಲ್ ಇಸ್ಲಾಂ ಅವರ ಸ್ಮರಣಾರ್ಥವಾಗಿ ಏಷ್ಯನ್ ಆಸ್ಪತ್ರೆಯಿಂದ ಉಚಿತ ಬೃಹತ್ ಆರೋಗ್ಯ ಶಿಬಿರವನ್ನು ಆಯೋಜಿಸಲಾಗಿತ್ತು, ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಂದ ನೂರಾರು ಜನರು ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೆಎಸ್‌ಐಸಿ ಅಧ್ಯಕ್ಷೆ ಮತ್ತು ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ, ಗೌರವ ಅತಿಥಿಗಳಾಗಿ ಕೆಪಿಸಿಸಿ ಸದಸ್ಯ ಫರಾಜ್ ಉಲ್ ಇಸ್ಲಾಂ ಭಾಗವಹಿಸಿದ್ದರು. ಡಾ.ಖಮರ್ ಉಲ್ ಇಸ್ಲಾಂ ಅವರು ಜನರಿಗೆ ನೀಡಿದ ಸೇವೆಯ ಅರ್ಥಪೂರ್ಣ ಮುಂದುವರಿಕೆಯಾಗಿ ಇಬ್ಬರೂಗಣ್ಯರು ಈ ಉಪಕ್ರಮವನ್ನು ಶ್ಲಾಘಿಸಿದರು. ಆರೋಗ್ಯ ಶಿಬಿರವು ಉಚಿತ ವೈದ್ಯಕೀಯ ಸಮಾಲೋಚನೆಗಳು, ಬಹು ವಿಶೇಷತೆಗಳಲ್ಲಿ ಸಾಮಾನ್ಯ ಆರೋಗ್ಯ ತಪಾಸಣೆಗಳು ಮತ್ತು ಸಾಮಾನ್ಯ ಔಷಧವನ್ನು ನೀಡಿತು. ಪ್ರತಿಯೊಬ್ಬ ಸಂದರ್ಶಕರಿಗೂ ಸರಿಯಾದ ಆರೈಕೆ ಮತ್ತು ಮಾರ್ಗದರ್ಶನ ದೊರೆಯುವುದನ್ನು ಖಚಿತಪಡಿಸಿಕೊಳ್ಳಲು ಏಷ್ಯನ್ ಆಸ್ಪತ್ರೆಯ ವೈದ್ಯರು ಮತ್ತು ಅರೆವೈದ್ಯಕೀಯ ಸಿಬ್ಬಂದಿಯ ತಂಡಗಳು ತಮ್ಮ ಸಮಯ ಮತ್ತು ಪರಿಣತಿಯನ್ನು ಮೀಸಲಿಟ್ಟವು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕಿ ಕನೀಜ್ ಫಾತಿಮಾ ಅವರು ಈ ಕಾರ್ಯಕ್ರಮವನ್ನು ಆಯೋಜಿಸಿದ್ದಕ್ಕಾಗಿ ಏಷ್ಯನ್ ಆಸ್ಪತ್ರೆಯನ್ನು ಶ್ಲಾಘಿಸಿದರು ಮತ್ತು ಎಲ್ಲರಿಗೂ ಸುಲಭವಾಗಿ ಸಿಗುವ ಆರೋಗ್ಯ ಸೇವೆಯ ಮಹತ್ವವನ್ನು ಒತ್ತಿ ಹೇಳಿದರು. ದಿವಂಗತ ಡಾ. ಖಮರ್ ಉಲ್ ಇಸ್ಲಾಂ ಅವರು ಯಾವಾಗಲೂ ಸಾರ್ವಜನಿಕ ಕಲ್ಯಾಣ ಮತ್ತು ಸಮುದಾಯದ ಉನ್ನತಿಗಾಗಿ ಶ್ರಮಿಸುತ್ತಿದ್ದರು, ಈ ಉಪಕ್ರಮವು ಅವರ ಸ್ಮರಣಾರ್ಥ ಸೂಕ್ತವಾದ ಗೌರವವಾಗಿದೆ ಎಂದು ಅವರು ಹೇಳಿದರು.

# ವೆಂಕಟೇಶ ಮೊರಖಂಡಿಕರ್‌ಗೆ ವಿಕಾಸ ವೇದಿಕೆ ಮಾಧ್ಯಮ ಮಿಲನ ಪ್ರಶಸ್ತಿ




ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 27: ಬೀದರ್ ಜಿಲ್ಲೆಯ ಹಿರಿಯ ಹಾಗೂ ಹೆಮ್ಮೆಯ ಪತ್ರಕರ್ತ ಹೊಸ ದಿಗಂತ ಕನ್ನಡ ದಿನಪತ್ರಿಕೆಯ ಜಿಲ್ಲಾ ವರದಿಗಾರ ವೆಂಕಟೇಶ ಮೊರಖಂಡಿಕರ್ ಅವರಿಗೆ ರಾಜ್ಯ ಮಟ್ಟದ ಸಮಾನ ಮನಸ್ಕ ಪತ್ರಕರ್ತರ ವಿಕಾಸ ವೇದಿಕೆಯ ಮಾಧ್ಯಮ ಮಿಲನ 2025,ಹುಬ್ಬಳ್ಳಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತ ದಿ. ದಿಗಂಬರ ಗರುಡ ಸ್ಮರಣಾರ್ಥ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈ ಕಾರ್ಯಕ್ರಮ ಹುಬ್ಬಳ್ಳಿಯ ಲಿಂಗರಾಜ ನಗರದ ಶ್ರೀ ಉತ್ತರಾದಿ ಮಠದ, ಪ್ರಮೋದಾತ್ಮ ಭವನದಲ್ಲಿ ಆಯೋಜಿಸಿಸಲಾಗಿತ್ತು.ಕಾರ್ಯಕ್ರಮದ ಉದ್ಘಾಟನೆಯನ್ನು ಸವದತ್ತಿಯಲ್ಲಮ್ಮ ಕ್ಷೇತ್ರದ ಶಾಸಕರಾದ ಶ್ರೀ ವಿಶ್ವಾಸ ವೈದ್ಯ, ಹುಬ್ಬಳ್ಳಿ ಆಯುರ್ವೇದ ಸೇವಾ ಸಮಿತಿಯ ಅಧ್ಯಕ್ಷರು ಹಾಗೂ ಖ್ಯಾತ ಉದ್ಯಮಿ ಶ್ರೀ ಗೋವಿಂದ ಜೋಶಿ, ಖ್ಯಾತ ಮನೋವೈದ್ಯ ಡಾ. ಆನಂದ ಪಾಂಡುರಂಗಿ ಧಾರವಾಡ ಮಾಡಿದರು. ಕಾರ್ಯಕ್ರಮದಲ್ಲಿ ವಿಜಯ ಕರ್ನಾಟಕ ಪತ್ರಿಕೆಯ ಸ್ಥಾನಿಕ ಸಂಪಾದಕ ಶ್ರೀ ಬಂಡು ಕುಲಕರ್ಣಿ, ಹೊಸ ದಿಗಂತ ಪತ್ರಿ-ಕೆಯ ಬ್ಯುರೋ ಮುಖ್ಯಸ್ಥರು ಶ್ರೀ ವಿಠ್ಠದಾಸ ಕಾಮತ್, ಸಂಯುಕ್ತ ಕರ್ನಾಟಕ ಮತ್ತು ಕನ್ನಡಪ್ರಭ ಪತ್ರಿಕೆಯ ಸಂಪಾದಕರಾದ ಶ್ರೀ ವೆಂಕಟನಾರಾಯಣ, ಧಾರವಾಡ ಆಕಾಶವಾಣಿ ಕೇಂದ್ರದ ನಿವೃತ್ತ ನಿರ್ದೇಶಕರಾದ ಶ್ರೀ ಸತೀಶ್ ಪರ್ವತೀಕರ್,ದಿನ ಹಿಂದೂ ಪತ್ರಿಕೆಯ ಹಿರಿಯ ಪತ್ರಕರ್ತ ಶ್ರೀ ಟಿ.ಎಸ್. ರಂಗಣ್ಣ,ಹಿರಿಯ ಪತ್ರಕರ್ತ ಹಾಗೂ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಪ್ರಥಮ ಅಧ್ಯಕ್ಷರಾದ ಶ್ರೀ ತೋ. ಚ.ಅನಂತಸುಬ್ಬಾರಾವ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

ಕಾರ್ಯಕ್ರಮವನ್ನು ಬೆಂಗಳೂರಿನ ಶ್ರೀ ಜಯತೀರ್ಥ ವಿದ್ಯಾಪೀಠದ ಪ್ರಾಂಶುಪಾಲರು ಪಂಡಿತ ಶ್ರೀ ಸತ್ಯಧ್ಯಾನಾಚಾರ್ಯ ಕಟ್ಟಿ,ಬ್ರಹ್ಮಾಂಡ ಬ್ರಾಹ್ಮಣ ಮಹಾಸಂಘ (ಕೇಂದ್ರ ಹಾಗೂ ರಾಜ್ಯ ಸರಕಾರಿ ನಿವೃತ್ತ ಅಧಿಕಾರಿಗಳ ರಾಷ್ಟ್ರೀಯ ಸಂಘಟನೆ), ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಧಾರವಾಡ ಜಿಲ್ಲೆ, ಅಗಸ್ತ್ಯ ವಾಹಿನಿ, ವಿಪ್ರ ಬ್ಯುಸಿನೆಸ್ ಫೋರಂ ಹುಬ್ಬಳ್ಳಿ, ವಿಶ್ವ ವಿಪ್ರ ಸೇವಾ ಟ್ರಸ್ಟ್, ಇವರುಗಳ ಸಂಯುಕ್ತ ಸಹಕಾರದಿಂದ ಆಯೋಜಿಸಲಾಗಿತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಉತ್ತರಾದಿ ಮಠದ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ.ಪಂಡಿತ್ ಪ್ರಸನ್ನಾಚಾರ್ಯ ಕಟ್ಟಿ ವಹಿಸಿದ್ದರು.

# ಅ.28 ರಂದು ಲೋಕಾಯುಕ್ತ ಅಹವಾಲು ಸಭೆ

ಬೀದರ, ಅ.27 : ಕರ್ನಾಟಕ ಲೋಕಾಯುಕ್ತ ಬೀದರನ ಪೊಲೀಸ್ ನಿರೀಕ್ಷಕ-3 ಬಾಬಾಸಾಹೇಬ ಪಾಟೀಲ (9364062674) ಅವರು ಅಕ್ಟೋಬರ್.28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಭಾಲ್ಕಿ ಪ್ರವಾಸಿ ಮಂದಿರದಲ್ಲಿ ಸಾರ್ವಜನಿಕ ಕುಂದು ಕೊರತೆ/ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ ಎಂದು ಕರ್ನಾಟಲ ಲೋಕಾಯುಕ್ತ ಪೊಲೀಸ್ ಠಾಣೆ ಬೀದರ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಸರ್ಕಾರಿ ಕಛೇರಿಗಳಲ್ಲಿ ಕೆಲಸಗಳನ್ನು ವಿಳಂಭ ಮಾಡುತ್ತಿದ್ದರೆ ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಛೇರಿಗೆ ಅಲೆದಾಡಿಸುತ್ತಿದ್ದರೆ ಅಲ್ಲದೆ, ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದರೆ ನಮ್ಮ ಗಮನಕ್ಕೆ ತರಬಹುದಾಗಿದೆ. ಕಾರಣ ಸಾರ್ವಜನಿಕರು

ಸಭೆಯ ಸದುಪಯೋಗಪಡೆದುಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9364062674, 08482-295445 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಇಂದು ವೀರವನಿತೆ ಒನಕೆ ಓಬವ್ವ ಜಯಂತಿ ಪೂರ್ವಸಿದ್ಧತಾ ಸಭೆ

ಯಾದಗಿರಿ : ಅ.27 : 2025ರ ನವೆಂಬರ್ 11 ರಂದು ವೀರವನಿತೆ ಒನಕೆ ಓಬವ್ವ ಜಯಂತ್ಯೋತ್ಸವ ಆಚರಣೆ ಹಿನ್ನೆಲೆ ಪೂರ್ವಸಿದ್ಧತಾ ಸಭೆಯನ್ನು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರು ಅಧ್ಯಕ್ಷತೆಯಲ್ಲಿ 2025ರ ಅಕ್ಟೋಬರ್ 28 ರಂದು ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.ವೀರವನಿತೆ ಒನಕೆ ಓಬವ್ವ ಜಯಂತ್ಯೋತ್ಸವ ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಿಲ್ಲಾ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿ ಪೂರ್ವಸಿದ್ಧತಾ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಉಪಸ್ಥಿತರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆ ಸಲ್ಲಿಸಲು ಅವಕಾಶ

ಬೀದರ, ಅ.27: 2025-26ನೇ ಸಾಲಿನ ಪ್ರಧಾನ ಮಂತ್ರಿ ಜನ ಜಾತಿ ಆದಿವಾಸಿ ನ್ಯಾಯ ಮಹಾ ಅಭಿಯಾನ (ಕಜ-ಎಂಓಂಂಓ) ದರ್ತಿ ಆಭಾ-ಜನ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ(ಆಂ-ಎಉಗಂ) ಅಡಿಯಲ್ಲಿ ಸಂಚಾರಿ ಆರೋಗ್ಯ ಘಟಕ ಔರಾದ ಇಲ್ಲಿಗೆ ಓರ್ವ ಶುಶ್ರೂಷಕ/ಕಿ ಹಾಗೂ ಓರ್ವ ಪ್ರಯೋಗ ಶಾಲಾ ತಂತ್ರಜ್ಞರ ಹುದ್ದೆಗೆ ದಿನಾಂಕ:15-09-2025 ರಿಂದ 16-09-2025 ರವರೆಗೆ ಅರ್ಜಿಗಳನ್ನು ಅಹ್ವಾನಿಸಲಾಗಿತ್ತು. ಮುಖ್ಯ ಕಾರ್ಯನಿರ್ವಹಕ ಅಧಿಕಾರಿಗಳು ಜಿ.ಪಂ ಬೀದರ ಅವರ ಅನುಮೊದನೆಯೊಂದಿಗೆ ಹಾಜರಾದ ಅಭ್ಯರ್ಥಿಗಳಲ್ಲಿನ ಗರಿಷ್ಟ ಪ್ರತಿಶತ ಹೊಂದಿರುವ ಅಭ್ಯರ್ಥಿಯನ್ನು ತಾತ್ಕಾಲಿಕವಾಗಿ ಆಯ್ಕೆ ಪಟ್ಟಿಯನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕಕ್ಕೆ ಪ್ರಕಟಿಸಲಾಗಿದೆ.

ಕಾರಣ ಸದರಿ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವವರು ದಿನಾಂಕ: 29-10-2025 ರವರೆಗೆ ಸಂಜೆ 5.30 ಗಂಟೆಯೊಳಗಾಗಿ ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಸಂತಕವಿ ಕನಕದಾಸ ಜಯಂತಿ ಪೂರ್ವಸಿದ್ಧತಾ ಸಭೆ

ಯಾದಗಿರಿ : ಅ 27 : 2025ರ ನವೆಂಬರ್ 8 ರಂದು ಸಂತಕವಿ ಕನಕದಾಸ ಜಯಂತ್ಯೋತ್ಸವ ಆಚರಣೆ ಹಿನ್ನೆಲೆ ಪೂರ್ವಸಿದ್ಧತಾ ಸಭೆಯು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ ಕೋಲಾರ ಅವರ ಅಧ್ಯಕ್ಷತೆಯಲ್ಲಿ ಇದೇ 2025ರ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ ಅವರು ತಿಳಿಸಿದ್ದಾರೆ.

ಸಂತಕವಿ ಕನಕದಾಸ ಜಯಂತ್ಯೋತ್ಸವವನ್ನು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಯಾದಗಿರಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗುತ್ತಿದ್ದು, ಈ ಜಯಂತಿಯ ಸಭೆಗೆ ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ಈ ಸಮಾಜದ ಬಾಂಧವರು, ಕನ್ನಡಪರ ಸಂಘಟನೆಗಳು ಮತ್ತು ಸಾರ್ವಜನಿಕರು ತಪ್ಪದೇ ಹಾಜರಿರುವಂತೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೆಕೆಆರ್‌ಟಿಸಿ ಬಸ್‌ಗಳಲ್ಲಿ ಕ್ಯಾಶ್‌ಲೆಸ್ ಟಿಕೆಟ್ ಸಿಸ್ಟಮ್ ಜಾರಿಗೊಳಿಸಿ: ನೆಹಾ ನಾಟೇಕರ್ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ,ಅ 27:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ (ಕೆಕೆಆರ್‌ಟಿಸಿ) ಬಸ್‌ಗಳಲ್ಲಿ ನಗದು ರಹಿತ ಟಿಕೆಟ್ ವ್ಯವಸ್ಥೆ (ಅಛಿಟಛಿ ಖಿಛಿಇ-ಜಿಣ ಖಥಿಣಜಟ) ಶೀಘ್ರವಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಬಿಎ ಎಲ್‌ಎಲ್‌ಬಿ ಕಾನೂನು ವಿದ್ಯಾರ್ಥಿನಿ ನೆಹಾ ಎಸ್. ನಾಟೇಕರ್ ಆಗ್ರಹಿಸಿದ್ದಾರೆ. ಪ್ರಸ್ತುತ ರಾಜ್ಯದ ಇತರ ಸಾರಿಗೆ ನಿಗಮಗಳು □ ಕೆಎಸ್‌ಆರ್‌ಟಿಸಿ, ಬಿಎಂಟಿಸಿ ಹಾಗೂ ವಾಯವ್ಯ ಸಾರಿಗೆ ನಿಗಮ □ಗಳಲ್ಲಿ ಈಗಾಗಲೇ ಯುಪಿಐ, ಫೋನ್‌ಪೇ, ಗೂಗಲ್‌ಪೇ, ಡೆಬಿಟ್ ಹಾಗೂ ಕ್ರೆಡಿಟ್ ಕಾರ್ಡ್ ಮೂಲಕ ಟಿಕೆಟ್ ಪಡೆಯುವ ವ್ಯವಸ್ಥೆ ಅಳವಡಿಸಲ್ಪಟ್ಟಿದೆ. ಆದರೆ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಇಂತಹ ಡಿಜಿಟಲ್ ಪೇಮೆಂಟ್ ಸೌಲಭ್ಯ ಇನ್ನೂ ಜಾರಿಯಾಗಿಲ್ಲ "ಎಲ್ಲವೂ ಡಿಜಿಟಲ್ ಆಗಿರುವ ಕಾಲದಲ್ಲಿ, ಕಲ್ಯಾಣ ಕರ್ನಾಟಕ ಸಾರಿಗೆ-ಯ ಬಸ್‌ಗಳಲ್ಲಿ ಪ್ರಯಾಣಿಕರು ನಗದು ಹಾಗೂ ಚಿಲ್ಲರೆಗಾಗಿ ಪರದಾಡಬೇಕಾದ ಸ್ಥಿತಿ ಇದೆ. ಈ ಪ್ರದೇಶದ ಪ್ರಯಾಣಿಕರು ಕೂಡಾ ನಗದು ರಹಿತ ಟಿಕೆಟ್ ಪಾವತಿ ವ್ಯವಸ್ಥೆಯ ಸೌಲಭ್ಯ ಪಡೆಯಬೇಕಾಗಿದೆ," ಎಂದು ಅವರು ಹೇಳಿದ್ದಾರೆ.ನೆಹಾ ಎಸ್. ನಾಟೇಕರ್ ಅವರು ಸಾರಿಗೆ ಸಚಿವರಾದ ರಾಮಲಿಂಗಾ ರೆಡ್ಡಿ ಅವರಿಗೆ ಈ ಕುರಿತು ಮನವಿ ಪತ್ರವನ್ನು ಭಾಲ್ಕಿ ತಹಶೀಲ್ದಾರ್ ಅವರ ಮುಖಾಂತರ ಸಲ್ಲಿಸಿದ್ದಾರೆ.ಈ ಮನವಿಯಲ್ಲಿ ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯಲ್ಲೂ ತಕ್ಷಣ ನಗದು ರಹಿತ ಬಸ್ ಟಿಕೆಟ್ ನೀಡುವ ವ್ಯವಸ್ಥೆ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ. ಅವರು ಮುಂದುವರಿಸಿ, "ಡಿಜಿಟಲ್ ಪೇಮೆಂಟ್ ವ್ಯವಸ್ಥೆ ಜಾರಿಯಾದರೆ ಪ್ರಯಾಣಿಕರಿಗೆ ಸುಲಭ, ವೇಗ ಮತ್ತು ಪಾರದರ್ಶಕ ಪಾವತಿ ವ್ಯವಸ್ಥೆ ಲಭ್ಯವಾಗುತ್ತದೆ. ಜೊತೆಗೆ ಚಿಲ್ಲರೆ ಸಮಸ್ಯೆ ನಿವಾರಣೆಯಾಗುತ್ತದೆ ಮತ್ತು ಡಿಜಿಟಲ್ ಇಂಡಿಯಾ ಉದ್ದೇಶಕ್ಕೂ ಸಹಾಯವಾಗುತ್ತದೆ," ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಡಿ.13 ರಂದು ರಾಷ್ಟ್ರೀಯ ಲೋಕ ಆದಾಲತ್: ಪೂರ್ವಭಾವಿ ಸಭೆಯನ್ನು

ಬೀದರ, ಅ.27 : ಗೌರವಾನ್ವಿತ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಅವರು ನಿರ್ದೇಶಿಸಿದಂತೆ, ಡಿಸೆಂಬರ್.13 ರಂದು ರಾಷ್ಟ್ರಾದ್ಯಾಂತ ರಾಷ್ಟ್ರೀಯ ಲೋಕ ಆದಾಲತನ್ನು ಹಮ್ಮಿಕೊಳ್ಳಲು ತಿಳಿಸಿರುವ ಪ್ರಯುಕ್ತ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಅವರ ಘನ ಅಧ್ಯಕ್ಷತೆಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬೀದರನ ಸಭಾಂಗಣದಲ್ಲಿ ವಿವಿಧ ಇಲಾಖೆಯ ಮುಖ್ಯಸ್ಥರು

ದಿನಾಂಕ: 29-10-2025, 30,10-2025, 31-10-2025, 03-11-2025, 04-11-2025, 05-11-2025, 06-11-2025, 07-11-2025 ರ ದಿನಾಂಕಗಳಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಅವರ ಘನ ಅಧ್ಯಕ್ಷತೆಯಲ್ಲಿ ರಾಷ್ಟ್ರೀಯ ಲೋಕ ಆದಾಲತನ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಈ ಮೇಲಿನ ದಿನಾಂಕದಂದು ನಿಗಧಿತ ಸಮಯಕ್ಕೆ ಸಂಬಂಧಿಸಿದ ಇಲಾಖೆಯ ಮುಖ್ಯಸ್ಥರು ಸಭೆಗೆ ತಪ್ಪದೇ ಭಾಗವಹಿಸಿ ಸಲಹೆ ಸಲೂಚನೆ ನೀಡಿ ಸಹಕರಿಸಿವಂತೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಉಸ್ತುವಾರಿ ಸಚಿವ ದರ್ಶನಾಪೂರ ಇಂದು ಕೆಂಭಾವಿಗೆ

ಯಾದಗಿರಿ : ಅ 27 : ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಅಕ್ಟೋಬರ್ 28ರ ಮಂಗಳವಾರ ರಂದು ಕೆಂಭಾವಿ, ಶಹಾಪೂರ ಭೇಟಿ ನೀಡಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿ ಡಾ.ಶ್ರೀಶೈಲ ಜಿ.ಬಿದರಕುಂದಿ ಅವರು ತಿಳಿಸಿದ್ದಾರೆ.

2025ರ ಅಕ್ಟೋಬರ್ 28ರ ಮಂಗಳವಾರ ರಂದು ಬೆಳಿಗ್ಗೆ 10 ಗಂಟೆಗೆ ಕೆಂಭಾವಿ ಆಗಮಿಸಿ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಮಧ್ಯಾಹ್ನ 2.30 ಗಂಟೆಗೆ ಶಹಾಪೂರ ಆಗಮಿಸಿ, ಸಾರ್ವಜನಿಕರ ಕುಂದುಕೊರತೆಗಳ ವಿಚಾರಣೆ ಆಲಿಸುವರು ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ತದನಂತರ ಸಂಜೆ 5 ಗಂಟೆಗೆ ಕಲಬುರಗಿಗೆ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಕ್ಫ್ ಆಸ್ತಿ : ದಾಖಲೆಗಳ ಅಪ್ಲೋಡ್‌ಗೆ ಸೂಚನೆ

ಯಾದಗಿರಿ : ಅ 27 : ಯಾದಗಿರಿ ಜಿಲ್ಲೆಯ ವಕ್ಫ್ ಆಸ್ತಿಯ ದಾಖಲೆಗಳನ್ನು ಪೋರ್ಟಲ್‌ನಲ್ಲಿ ಕಡ್ಡಾಯ ಅಪ್ಲೋಡ್ ಮಾಡುವಂತೆ ಯಾದಗಿರಿ ಕರ್ನಾಟಕ ರಾಜ್ಯ ಔಖಾಫ್ ಮಂಡಳಿ ಜಿಲ್ಲಾ ವಕ್ಫ್ ಅಧಿಕಾರಿ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿಗಳು, ಮುತವಲ್ಲಿಗಳು, ಆಡಳಿತಾಧಿಕಾರಿಗಳು ತಕ್ಷಣವೇ ಪೋರ್ಟಲ್ ವೆಬ್‌ಸೈಟ್ umeed.minorityaffairs.ರಠಡ. ುಟ/ಸರಟಿಟಿನಲ್ಲಿ ಮೇಕರ್ ಆಗಿ ನೋಂದಣಿ ಮಾಡಿ, ತಮ್ಮ ಸಂಬಂಧಪಟ್ಟ ವಕ್ಫ್ ಸಂಸ್ಥೆಯ

ಎಲ್ಲಾ ವಕ್ಫ್ ಆಸ್ತಿಗಳ ದಾಖಲೆಗಳನ್ನು 30 ದಿನಗಳ ಒಳಗೆ ಅಪ್ಲೋಡ್ ಮಾಡುವುದು ಕಡ್ಡಾಯವಾಗಿದೆ. ಹೆಚ್ಚಿನ ಮಾಹಿತಿಗಾಗಿ ಯಾದಗಿರಿ ಕರ್ನಾಟಕ ರಾಜ್ಯ ಔಖಾಫ್ ಮಂಡಳಿ ಜಿಲ್ಲಾ ವಕ್ಫ್ ಅಧಿಕಾರಿ ಕಛೇರಿಯನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ಎಸ್.ಸಿ ನರ್ಸಿಂಗ್ ಕೋರ್ಸ್ ಸೀಟು ಭರ್ತಿ ನೋಂದಣಿಗೆ ಆಹ್ವಾನ

ಯಾದಗಿರಿ : ಅ 27 : ಯಾದಗಿರಿ ಜಿಲ್ಲೆಯ 2025-26ನೇ ಸಾಲಿನ ಕೆಇಎ ಮೂಲಕ ಅಂತಿಮ ಸುತ್ತಿನ ಸೀಟು ಹಂಚಿಕೆಯ ನಂತರ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದಲ್ಲಿ ಭರ್ತಿಯಾಗದೆ ಉಳಿದಿರುವ ಬಿ.ಎಸ್.ಸಿ ನರ್ಸಿಂಗ್ ಸೀಟುಗಳನ್ನು ಭರ್ತಿ ನೋಂದಣಿಗೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಡೀನ್ & ನಿರ್ದೇಶಕರು ಅವರು ತಿಳಿಸಿದ್ದಾರೆ.

ಜಿಲ್ಲೆಯ ಯಿಮ್ಸ್ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ಬಿಎಸ್‌ಸಿ ನರ್ಸಿಂಗ್ ಕೋರ್ಸ್ಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಅಂತಿಮ ಸುತ್ತಿನ ಸಿಟುಹಂಚಿಕೆಯನ್ನು ವಾಕ್ ಇನ್ ಇಂಟರ್ವ್ಯೂ ಮೂಲಕ ಕೈಗೊಳ್ಳಲು ನಿರ್ದೇಶಕರು ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಆದೇಶಿಸಿದ್ದು, ಈ ಆದೇಶದಂತೆ 2025ರ ಅಕ್ಟೋಬರ್ 30 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯ ವರೆಗೆ ನೊಂದಣಿ ಮಾಡಲು ಅವಕಾಶವಿದ್ದು, ಹಾಗೂ ಮಧ್ಯಾಹ್ನ 1 ರಿಂದ ಸಂಜೆ 5 ಗಂಟೆಯ ವರೆಗೆ ನೊಂದಾಯಿತ ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟು ಆಯ್ಕೆ ಮಾಡಿ ಆಯ್ಕೆಯಾದ ಅಭ್ಯರ್ಥಿಗಳ ಪಟ್ಟಿಯನ್ನು ಮಹಾವಿದ್ಯಾಲಯದ ಸೂಚನಾ, ಫಲಕದಲ್ಲಿ ಪ್ರಕಟಿಸಲಾಗುವುದು ಪ್ರವೇಶಾತಿಗೆ ನೋಂದಾಯಿಸಲು ಅರ್ಜಿಯನ್ನು 2025ರ ಅಕ್ಟೋಬರ್ 27 ರಂದು ಯಾದಗಿರಿ ಯಿಮ್ಸ್ ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯದಲ್ಲಿ ನೀಡಲಾಗುತ್ತಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಮಲನಗರ: ಪ್ರಜಾಸೌಧ ಸ್ಥಳಕ್ಕೆ ಪ್ರಭು ಚವ್ಹಾಣ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಅ.27:ಕಮಲನಗರ ಪಟ್ಟಣದಲ್ಲಿ ನಿರ್ಮಾಣವಾಗುತ್ತಿರುವ ನೂತನ "ಪ್ರಜಾ ಸೌಧ" ತಾಲ್ಲೂಕು ಆಡಳಿತ ಕೇಂದ್ರದ ಸ್ಥಳಕ್ಕೆ ರವಿವಾರ ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ನಂತರ ಮಾತನಾಡಿ, ಕಮಲನಗರ ಹೊಸ ತಾಲ್ಲೂಕು ಕೇಂದ್ರವಾದ ನಂತರ ಎಲ್ಲ ಇಲಾಖೆಗಳು ಕಾರ್ಯಾರಂಭ ಮಾಡುವ ದಿಶೆಯಲ್ಲಿ ನಿರಂತರ ಶ್ರಮಿಸುತ್ತಿದ್ದೇನೆ. ತಾಲ್ಲೂಕು ಆಡಳಿತ ಜನರ ನಿಕಟ ಇಲಾಖೆಯಾಗಿರುವುದರಿಂದ ತಾಲ್ಲೂಕು ಆಡಳಿಯ ಕೇಂದ್ರ ನಿರ್ಮಿಸುವುದು ಅತ್ಯಂತ ಅವಶ್ಯವಾಗಿದೆ ಎಂದು ಸರ್ಕಾರಕ್ಕೆ ನಿರಂತರವಾಗಿ ಮನವರಿಕೆ ಮಾಡುತ್ತಾ ಬಂದಿದ್ದೇನೆ. ಅನೇಕ ಸಲ ಮುಖ್ಯಮಂತ್ರಿಗಳು, ಕಂದಾಯ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳನ್ನು ಖುದ್ದಾಗಿ ಭೇಟಿಯಾಗಿ ಬೇಡಿಕೆ ಸಲ್ಲಿಸಿದ್ದೇನೆ ಎಂದರು.

ನನ್ನ ನಿರಂತರ ಪ್ರಯತ್ನಗಳಿಂದಾಗಿ ಸರ್ಕಾರವು ಕಮಲನಗರದಲ್ಲಿ ನೂತನ "ಪ್ರಜಾಸೌಧ" ತಾಲ್ಲೂಕು ಆಡಳಿತ ಕೇಂದ್ರದ ಯೋಜನೆಗೆ ಅನುಮೋದನೆ ನೀಡಿದೆ. ಎರಡು ಅಂತಸ್ಥಿನ ಬೃಹತ್ ಕಟ್ಟಡ ನಿರ್ಮಾಣಕ್ಕಾಗಿ 15 ಕೋಟಿ ಒದಗಿಸಬೇಕೆಂದು ಬೇಡಿಕೆ ಸಲ್ಲಿಸಿದ್ದೆ. ಆದರೆ ಸರ್ಕಾರ 8.60 ಕೋಟಿಗೆ ಮಂಜೂರಾತಿ ನೀಡಿದೆ. ನಿವೇಶನದ ಸಮಸ್ಯೆಯಿತ್ತು. ರಾಜಕುಮಾರ ಪೊಲೀಸ್ ಪಾಟೀಲ 2.5 ಎಕರೆ ಜಮೀನು ದಾನವಾಗಿ ನೀಡಿದ್ದರಿಂದ ನಿವೇಶನ ಸಮಸ್ಯೆ ಕೊನೆಗೊಂಡು ಕಟ್ಟಡ ಕೆಲಸ ಸುಗಮವಾಗಿ ನಡೆಯಲು ಅನುಕೂಲವಾಗಿದೆ. ಮುಂದಿನ ದಿನಗಳಲ್ಲಿ ಬೇಡಿಕೆಗೆ ಅನುಗುಣ ಅನುದಾನ ತಂದು ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲಾಗುವುದೆಂದು ಹೇಳಿದರು.

ಕರ್ನಾಟಕ ಗೃಹ ಮಂಡಳಿಯಿಂದ ಕಾಮಗಾರಿ ಅನುಷ್ಠಾನಗೊಳಿಸಲಾಗುತ್ತಿದೆ. ಉಪ ಗುತ್ತಿಗೆ ನೀಡುವುದಾಗಲಿ, ಅನ್ಯರಿಗೆ ಕೆಲಸ ವಹಿಸುವುದಾಗಲಿ ಮಾಡದೇ ಮೂಲ ಗುತ್ತಿಗೆದಾರರಿಂದ ಕೆಲಸ ಮಾಡಿಸಬೇಕು. ಅಂದಾಜು ಪಟ್ಟಿಯಲ್ಲಿ ಇರುವಂತೆ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಕಾಮಗಾರಿ ಅನುಷ್ಠಾನದಲ್ಲಿ ಲೋಪವಾದರೆ ನಾನು ಸುಮ್ಮನೆ ಬಿಡುವುದಿಲ್ಲವೆಂದು ಅಧಿಕಾರಿಗಳಿಗೆ ಎಚ್ಚರಿಸಿದರು.

ಪ್ರಜಾಸೌಧಕ್ಕೆ ಹೋಗುವ ರಸ್ತೆ ಹಾಗೂ ಇನ್ನಿತರೆ ಅವಶ್ಯಕ ಕೆಲಸಗಳನ್ನು ಆದ್ಯತೆಗೆ ಅನುಗುಣವಾಗಿ ಮಾಡಿಸಬೇಕು. ಅವಶ್ಯಕತೆಯಿದ್ದಲ್ಲಿ ಅನುದಾನ ಒದಗಿಸುತ್ತೇನೆ. ಕಾಮಗಾರಿ ಗುಣಮಟ್ಟದಿಂದ ಮಾಡಬೇಕು. ಈ ದಿಶೆಯಲ್ಲಿ ತಹಸಿಲ್ದಾರರು ಕೂಡ ಮುತುವರ್ಜಿ ವಹಿಸಬೇಕು ಎಂದು ಸೂಚಿಸಿದರು28ರಂದು ಭೂಮಿ ಪೂಜೆ: ನೂತನ ಪ್ರಜಾಸೌಧ ತಾಲ್ಲೂಕು ಆಡಳಿತ ಕೇಂದ್ರಕ್ಕೆ ಅ.28ರ ಬೆಳಗ್ಗೆ 11 ಗಂಟೆಗೆ ಭೂಮಿ ಪೂಜೆ ನೆರವೇರಿಸಲಾಗುತ್ತಿದೆ. ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಆಗಮಿಸುತ್ತಿದ್ದಾರೆ. ಕಮಲನಗರದ ಮಹಾಜನತೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಾಸಕರಾದ ಪ್ರಭು ಚವ್ಹಾಣ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.ಶಾಸಕರು ಅಧಿಕಾರಿಗಳಿಂದ ಕಾಮಗಾರಿಯ ಬಗ್ಗೆ ಮಾಹಿತಿ ಪಡೆದರು. ತಹಸೀಲ್ದಾರರಾದ ಅಮಿತಕುಮಾರ ಕುಲಕರ್ಣಿ, ಕರ್ನಾಟಕ ಗೃಹ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶಶಿಕಾಂತ ಅವರು ಪ್ರಜಾಸೌಧ ಕಾಮಗಾರಿಯ ಕುರಿತು ವಿವರಣೆ ನೀಡಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾವ ಕೌಟಗೆ, ಮುಖಂಡರಾದ ಬಸವರಾಜ ಪಾಟೀಲ, ಶಿವಾನಂದ ವಡ್ಡೆ, ಶಿವು ಝುಳ್ಪೆ, ನಾಗೇಶ ಪತ್ರೆ, ಕಿರಣ ಪಾಟೀಲ, ರಂಗಾರಾವ ಜಾಧವ, ರಾಜಕುಮಾರ ಗಾಯಕವಾಡ, ರಾಜು ಅಲಬಿದೆ, ಬಂಟಿ ರಾಂಪೂರೆ, ಜಾಖೇರ್ ಶೇಖ್ಸೇ ಸೇರಿದಂತೆ ಇತರರಿದ್ದರು.

## ತಿಂಗಳಾದರೂ ವರದಿ ಸಲ್ಲಿಸದ ತನಿಖಾಧಿಕಾರಿಗಳು: ದೀಪಕ್ ಪಾಟೀಲ ಚಾಂದೋರಿ ಆರೋಪ

# ಕೆಕೆಆರ್‌ಡಿಬಿ ಕಾಮಗಾರಿಯಲ್ಲಿ ಕೋಟ್ಯಂತರ ರೂ. ಭ್ರಷ್ಟಾಚಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 27: ಔರಾದ್ ವಿಧಾನಸಭಾ ಕ್ಷೇತ್ರದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ ಅನುದಾನದ ಶಾಲಾ ಕಟ್ಟಡ ದುರಸ್ತಿ, ಸೋಲಾರ್ ಪ್ಯಾನೆಲ್ ಅಳವಡಿಕೆ ಹಾಗೂ ಕೊಳವೆಬಾವಿ ಕೊರೆಸುವ ಕಾಮಗಾರಿಗಳಲ್ಲಿ ಕೋಟ್ಯಂತರ ರೂ. ಭ್ರಷ್ಟಾಚಾರ ನಡೆದಿದೆ ಎಂದು ಔರಾದನ ಮುಖಂಡ ದೀಪಕ್ ಪಾಟೀಲ ಚಾಂದೋರಿ ಗಂಭೀರ ಆರೋಪ ಮಾಡಿದ್ದಾರೆ.

ಬಹುತೇಕ ಕಡೆಗಳಲ್ಲಿ ಕಾಮಗಾರಿ ಕಳಪೆಯಾಗಿದೆ. ಅನೇಕ ಕಡೆ ಶಾಲಾ ಕಟ್ಟಡ ದುರಸ್ತಿಪಡಿಸದೆ, ಸೋಲಾರ್ ಪ್ಯಾನೆಲ್ ಅಳವಡಿಸದೆ, ಕೊಳವೆಬಾವಿ ಕೊರೆಸದೆ ಹಣ ಎತ್ತಿ ಹಾಕಲಾಗಿದೆ ಎಂದು ದೂರಿದ್ದಾರೆ.ಮಂಡಳಿಯ ಮ್ಯಾಕ್ರೊ ಯೋಜನೆಯ ಅಕ್ಷರ ಅವಿಷ್ಕಾರ ಕಾರ್ಯಕ್ರಮ(ಎಸ್‌ಸಿಪಿ, ಟಿಎಸ್‌ಪಿ, ಸಾಮಾನ್ಯ)ದಡಿ 2023-24ನೇ ಸಾಲಿನಲ್ಲಿ ಔರಾದ್ ಕ್ಷೇತ್ರಕ್ಕೆ ರೂ. 20 ಕೋಟಿ ಹಾಗೂ 2024-25ನೇ ಸಾಲಿನಲ್ಲಿ ರೂ. 21 ಕೋಟಿ ಸೇರಿ ಒಟ್ಟು ರೂ. 41 ಕೋಟಿ ಅನುದಾನ ಒದಗಿಸಿದ್ದು, ಒಂದು ಶಾಲೆ ದುರಸ್ತಿಗೆ ರೂ. 25 ಲಕ್ಷದಿಂದ ರೂ. 30 ಲಕ್ಷ, ಕೊಳವೆಬಾವಿ ಕೊರೆಸಲು ತಲಾ ರೂ. 5 ಲಕ್ಷ ಅನುದಾನ ನಿಗದಿಪಡಿಸಲಾಗಿದೆ ಎಂದು ತಿಳಿಸಿದ್ದಾರೆ.ಸ್ಥಳೀಯ ಶಾಸಕರು ಕಾಮಗಾರಿಗಳನ್ನು ಕೆ.ಆರ್.ಐ.ಡಿ.ಎಲ್. ಗೆ ವಹಿಸಿಕೊಟ್ಟಿದ್ದಾರೆ. ಜನಪ್ರತಿನಿಧಿ, ಅಧಿಕಾರಿ ಹಾಗೂ ಗುತ್ತಿಗೆದಾರರ ಒಳ ಒಪ್ಪಂದದೊಂದಿಗೆ ಕಳಪೆ ಕಾಮಗಾರಿ ಕೈಗೊಂಡು ಸರ್ಕಾರದ ಅನುದಾನ ಕೊಳ್ಳೆಹೊಡೆಯಲಾಗಿದೆ ಎಂದು ಆಪಾದಿಸಿದ್ದಾರೆ. ಅನೇಕ ಶಾಲೆಯವರು ಸೋಲಾರ್ ಪ್ಯಾನೆಲ್ ಅಳವಡಿಕೆಯಾಗಿಲ್ಲ ಎಂದು ಹೇಳಿದ್ದಾರೆ. ಅನೇಕ ಕಡೆಗಳಲ್ಲಿ ಶಾಲೆ ಹೊರಾಂಗಣಕ್ಕಷ್ಟೇ ಬಣ್ಣ ಬಳಿದು, ಒಳಾಂಗಣ ಹಾಗೆಯೇ ಬಿಡಲಾಗಿದೆ. ಕೊರೆದ ಅನೇಕ ಕೊಳವೆಬಾವಿಗಳಲ್ಲಿ ನೀರು ಸಿಗದಿದ್ದರೂ, ನೀರು ಲಭಿಸಿದೆ ಎಂದು ಸುಳ್ಳು ಪ್ರಮಾಣ ಪತ್ರ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.


ಕೆಆರ್‌ಐಡಿಎಲ್‌ನಲ್ಲಿ ಇಇ ಹುದ್ದೆ ನಾಲ್ಕು ವರ್ಷಗಳಿಂದ ಖಾಲಿ ಇದೆ. ಆ ಹುದ್ದೆಗೆ ಬೇರೊಬ್ಬರು ಬಾರದಂತೆ ನೋಡಿಕೊಳ್ಳಲಾಗುತ್ತಿದೆ. ಎಇ ಹಾಗೂ ಇಇ ಒಬ್ಬರೇ ಇದ್ದಾರೆ. ಇಡೀ ಜಿಲ್ಲೆಯಲ್ಲಿ ಕೆಆರ್‌ಐಡಿಎಲ್ ಮೂಲಕ ಕೆಕೆಆರ್‌ಡಿಬಿಯ ಸುಮಾರು ರೂ. 200 ಕೋಟಿಯ ಕಾಮಗಾರಿಗಳು ನಡೆದಿದ್ದು, ಇವರು ದೊಡ್ಡ ಮಟ್ಟದಲ್ಲಿ ಅವ್ಯವಹಾರ ನಡೆದಿದ್ದಾರೆ ಎಂದು ಆರೋಪಿಸಿದ್ದಾರೆ. ಔರಾದ್ ಕ್ಷೇತ್ರದಲ್ಲಿನ ಅವ್ಯವಹಾರ ಕುರಿತು ಅಗತ್ಯ ದಾಖಲೆಗಳೊಂದಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿ, ಸಂಬಂಧಿಸಿದ ಇಲಾಖೆ, ಕೆಕೆಆರ್‌ಡಿಬಿ ಕಾರ್ಯದರ್ಶಿ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ದೂರು ಸಲ್ಲಿಸಿದ್ದೇನೆ ಎಂದು ಹೇಳಿದ್ದಾರೆ.

ಜಿ.ಪಂ. ಸಿಇಒ ಅವರು ಸೆಪ್ಟೆಂಬರ್ 15 ರಂದು ಮೂರನೇ ತಂಡದ ತನಿಖೆಗಾಗಿ ಬೀದರನ ಕೆಇಬಿ ಕಚೇರಿ ಸಮೀಪದ ಸದಾನಂದ ಎಂಜಿನಿಯರಿಂಗ್ ಸೊಲುಷನವರನ್ನು ನೇಮಕ ಮಾಡಿ ತನಿಖೆಗೆ ಆದೇಶಿಸಿದ್ದರು. ನಂತರ ಸೆಪ್ಟೆಂಬರ್ 18 ರಂದು ಔರಾದನ ಪಿಆರ್‌ಇ ಎಇಇ, ಆರ್‌ಡಬ್ಲ್ಯೂಎಸ್ ಎಇಇ ಹಾಗೂ ಬೀದರನ ಕೆಕೆಆರ್‌ಡಿಬಿ ಸೆಲ್‌ನ ಎಇಇ ಅವರನ್ನೊಳಗೊಂಡ ತಂಡ ರಚಿಸಿದ್ದರು. ಎರಡೂ ತಂಡಗಳಿಗೆ ತನಿಖೆ ನಡೆಸಿ ವಾರದೊಳಗೆ ವರದಿ ಸಲ್ಲಿಸಲು ಸೂಚಿಸಿದ್ದರು ಎಂದು ತಿಳಿಸಿದ್ದಾರೆ. ಒಂದು ತಿಂಗಳು ಕಳೆದರೂ ಈ ತಂಡಗಳು ತನಿಖೆ ನಡೆಸಿ, ವರದಿ ಕೊಟ್ಟಿಲ್ಲ. ಔರಾದ್ ಕ್ಷೇತ್ರದಲ್ಲಿ ಮೇಲಧಿಕಾರಿಗಳ ಆದೇಶಕ್ಕೂ ಕವಡೆ ಕಾಸಿನ ಕಿಮ್ಮತ್ತು ಇಲ್ಲದಿರುವುದಕ್ಕೆ ಇದು ನಿದರ್ಶನ. ಔರಾದ್ ಕ್ಷೇತ್ರದಲ್ಲಿ ಜನಪ್ರತಿನಿಧಿ ಜೊತೆಗಿದ್ದರೆ ಸಾಕು ಯಾರು ಏನೂ ಮಾಡಲು ಆಗುವುದಿಲ್ಲ ಎಂಬಂಥ ಮನಸ್ಥಿತಿ ಬೆಳೆದಿದೆ ಎಂದು ಹೇಳಿದ್ದಾರೆ.

ತನಿಖೆಗೆ ಆದೇಶಿಸಿದ ನಂತರವೂ ಯಾವುದೇ ಕಾಮಗಾರಿ ಬಿಲ್ ತಡೆ ಹಿಡಿದಿಲ್ಲ. ಎಲ್ಲವನ್ನೂ ಪಾವತಿಸಲಾಗಿದೆ. ಹೀಗಾದರೆ ತನಿಖೆ ನಡೆಸಿದ ನಂತರ ಲೋಪ ಕಂಡು ಬಂದರೆ ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳುವುದು ಹೇಗೆ, ಊರು ಕೊಳ್ಳೆ ಹೊಡೆದ ಮೇಲೆ ದಿಡ್ಡಿ ಬಾಗಿಲು ಹಾಕಿದಂತಾಗುದಿಲ್ಲವೆ ಪರಿಸ್ಥಿತಿ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ತಮ್ಮ ದೂರಿನ ಹಿನ್ನೆಲೆಯಲ್ಲಿ ಕೆಕೆಆರ್‌ಡಿಬಿ ಕಾರ್ಯದರ್ಶಿ ಅವರು ಜಿಲ್ಲಾಧಿಕಾರಿಗೆ ಸೂಕ್ತ ಕ್ರಮಕ್ಕಾಗಿ ಪತ್ರ ಬರೆದರೂ, ಜಿಲ್ಲಾಡಳಿತ ಈ ದಿಸೆಯಲ್ಲಿ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಔರಾದ್ ಕ್ಷೇತ್ರದಲ್ಲಿ ನಡೆದ ಭ್ರಷ್ಟಾಚಾರದ ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು. ಮೇಲಧಿಕಾರಿ ಆದೇಶದ ನಂತರವೂ ತನಿಖಾ ವರದಿ ಸಲ್ಲಿಸಿ ಅಧಿಕಾರಿಗಳ ವಿರುದ್ಧವೂ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ನ್ಯಾಯಾಲಯ ಹಾಗೂ ಲೋಕಾಯುಕ್ತದ ಮೊರೆ ಹೋಗಲಾಗುವುದು ಎಂದು ಎಚ್ಚರಿಸಿದ್ದಾರೆ.

# ಗ್ಯಾರಂಟಿ ಅನುಷ್ಠಾನ ಸಮಿತಿ ವತಿಯಿಂದ ಜಾಗೃತಿ ಅಭಿಯಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಅ. 27 : ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಯಾಕತಾಪೂರ ಗ್ರಾಮದಲ್ಲಿ* ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ,

ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ. ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ.

ಯುವನಿಧಿ, ಗೃಹ ಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಶಿವಕುಮಾರ ಕುತ್ತಾಬಬಾದ್, ಮೊಹಮ್ಮದ್ ಖುದ್ದುಸ, ಮುಖಂಡರಾದ , ಬೀದರ್ ದಕ್ಷಿಣ ಪ್ರಚಾರ ಸಮಿತಿ ಅಧ್ಯಕ್ಷರಾದ ಶ್ರೀ ನರಸಪ್ಪ ಜಾನಕೇನೂರ, ಬೀದರ್ ದಕ್ಷಿಣ ಅಲ್ಪಸಂಖ್ಯಾತರ ಕಾರ್ಯದರ್ಶಿಗಳಾದ ಶ್ರೀ ಗೌಸ್, ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

## 'ಸಹಕಾರ ರತ್ನ' ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ಕ್ರಿಸ್ತ್‌ಸಾಲಿಗೆರಾಜ್ಯ ಸರ್ಕಾರವುಶ್ರೇಷ್ಠಸಹಕಾರಿಗಳಿಗಳನ್ನು ಗುರುತಿಸಿ 'ಸಹಕಾರಿ ರತ್ನ' ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದ್ದು, ಅರ್ಹ ಸಹಕಾರಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಹಕಾರಕ್ಷೇತ್ರದಲ್ಲಿ ಕನಿಷ್ಠ 10 ವರ್ಷಗಳ ನಿಷ್ಕಳಂಕ ಸೇವೆ ಸಲ್ಲಿಸಿರುವ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ನಿವಾಸಿಗಳು ತಮ್ಮ ವೈಯಕ್ತಿಕ ಪರಿಚಯ, ಸಹಕಾರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವುದರ ವಿವರ, ಸಹಕಾರ ಚಳುವಳಿಯಲ್ಲಿ ತೊಡಗಿಸಿಕೊಂಡಿರುವ ವಿವರ ಹಾಗೂ ಪೂರಕ ಮಾಹಿತಿಯನ್ನು ಅಗತ್ಯ ದಾಖಲೆಗಳೊಂದಿಗೆ ಬಳ್ಳಾರಿಯ ಸಹಕಾರ ಸಂಘಗಳ ಉಪ ನಿಬಂಧಕರ ಕಚೇರಿಗೆ ಅಕ್ಟೋಬರ್ 30 ರ ಸಂಜೆ 05.30 ರೊಳಗಾಗಿ ಸಲ್ಲಿಸಬೇಕು ಎಂದು ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಡಿಗೆ ವಾಹನ ಪಡೆಯಲು ದರಪಟ್ಟಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ನಗರದ ಜಿಲ್ಲಾ ವಕ್ಫ್ ಕಚೇರಿಗೆ ದೈನಂದಿನ ಅಧಿಕೃತ ಕೆಲಸಗಳ ನಿರ್ವಹಣೆಗಾಗಿ ಒಂದು ವರ್ಷದ ಅವಧಿಗೆ ಬಾಡಿಗೆ ಆಧಾರದ ಮೇಲೆ ಲಘು ವಾಹನ ಪಡೆಯಲು ದರಪಟ್ಟಿ ಆಹ್ವಾನಿಸಲಾಗಿದೆ.

ಟಾಟಾ ಇಂಡಿಗೋ, ವಿಸ್ಟಾ ಟಾಯೋಟಾ ಇಟಯೋಸ್, ಮಾರುತಿ ಸುಜುಕಿ, ಸ್ವಿಫ್ಟ್ ಡಿಜೈರ್ ಹಾಗೂ ಇತರೆ ವಾಹನ ಒದಗಿಸಲು ಷರತ್ತುಗೊಳಪಡಿಸಿ ದರಪಟ್ಟಿ ಕರೆಯಲಾಗಿದೆ.

ಆಸಕ್ತಿಯುಳ್ಳವರು ನಗರದ ಕೌಲ್ ಬಜಾರ್ ನ 1ನೇ ರೈಲ್ವೇ ಗೇಟ್ ಹತ್ತಿರದ ಜಿಲ್ಲಾ ವಕ್ಫ್ ಕಚೇರಿಯಲ್ಲಿ ದರಪಟ್ಟಿ ನಮೂನೆ ಪಡೆದು ದರ ನಮೂದಿಸಿ ಸೀಲುಮಾಡಿದ ಲಕೋಟೆಯನ್ನು ಅ.29 ರೊಳಗಾಗಿ ಇದೇ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ವಕ್ಫ್ ಅಧಿಕಾರಿಗಳು ತಿಳಿಸಿದ್ದಾರೆ.

## ಮಕ್ಕಳ ಕಲ್ಯಾಣ ಸಮಿತಿ ಹಾಗೂ ಬಾಲನ್ಯಾಯ ಮಂಡಳಿಗಳಿಗೆ ಸದಸ್ಯರ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ಜಿಲ್ಲಾ ಮಕ್ಕಳ ರಕ್ಷಣಾ ಘಟಕ ವತಿಯಿಂದ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ & ರಕ್ಷಣೆ) ಕಾಯ್ದೆ-2015 ತಿದ್ದುಪಡಿ 2021 ಹಾಗೂ ಮಕ್ಕಳ ನ್ಯಾಯ (ಮಕ್ಕಳ ಪೋಷಣೆ & ರಕ್ಷಣೆ) ಮಾದರಿ ನಿಯಮಗಳು - 2016 ತಿದ್ದುಪಡಿ-ಮಾದರಿ ನಿಯಮಗಳು -2022ರನ್ವಯ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷರು ಮತ್ತು ಸದಸ್ಯರು, ಬಾಲ ನ್ಯಾಯ ಮಂಡಳಿಗೆ ಇಬ್ಬರು ಸಮಾಜ ಕಾರ್ಯಕರ್ತರನ್ನು 3 ವರ್ಷಗಳ ಅವಧಿಗೆ ನೇಮಕ ಮಾಡಲಾಗಿದೆ. ಜಿಲ್ಲೆಯಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾಗಿ ತ್ರಿವೇಣಿ ಪತ್ತಾರ್, ಸದಸ್ಯರಾಗಿ ಚಟ್ಲ ವೆಂಕಟೇಶ್, ಸಣ್ಣ ಕೇಶವ, ಚಂದ್ರಕಲಾ, ಎಫ್.ಗೌಸಿಯಾ ಹಾಗೂ ಬಾಲನ್ಯಾಯ ಮಂಡಳಿಯ ಸದಸ್ಯರಾಗಿ ನರಹರಿ ಕಲಾವತಿ ಇವರುಗಳು ಆಯ್ಕೆಯಾಗಿದ್ದಾರೆ.

ಸೋಮವಾರ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿಯಲ್ಲಿ ವರದಿ ಮಾಡಿಕೊಂಡಿದ್ದಾರೆ. ಈ ವೇಳೆ ನಿಕಟಪೂರ್ವ ಅಧ್ಯಕ್ಷರು, ಸದಸ್ಯರು ಹಾಗೂ ಮಕ್ಕಳ ಪಾಲನಾ ಸಂಸ್ಥೆಯ ಅಧೀಕ್ಷಕರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಅ.29 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-1ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಬ್ಯಾಂಕ್-2ನ ಫೀಡರ್ ಎಫ್-34 ರಲ್ಲಿ "ಲಿಂಕ್ ಲೈನ್ ಕಾಮಗಾರಿ" ಹಮ್ಮಿಕೊಂಡಿರುವುದರಿಂದ ಅ.29 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ನಗರದ ರೈಲ್ವೆ ಫಸ್ಟ್ ಗೇಟ್, ಕೊರಚ ಸ್ಟ್ರೀಟ್, ಉರ್ದು ಟ್ರೈನಿಂಗ್ ಸ್ಕೂಲ್, ಕಡಪಗೆರೆ, ಟೈಲರ್ ಸ್ಟ್ರೀಟ್, ವಡ್ಡೆ ನಾಗಪ್ಪ ಕಾಲೋನಿ, ತಿಲಕ್ ನಗರ್, ವಿನಾಯಕ ನಗರ, ಐಶ್ವರ್ಯ ಕಾಲೋನಿ, ಐಟಿಐ ಕಾಲೇಜ್, ರೇಡಿಯೋ ಪಾರ್ಕ್, ಕೌಲ್ ಬಜಾರ್ ಮೇನ್ ರೋಡ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಹಾಗಾಗಿ ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ.30 ರಂದು ಡೆಂಗ್ಯೂ ರೋಗ ಮುಂಜಾಗ್ರತಾ ಮತ್ತು ನಿಯಂತ್ರಣ ಕುರಿತು ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ಜಿಲ್ಲಾ ಆರೋಗ್ಯ ಇಲಾಖೆಯ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಘಟಕ ವತಿಯಿಂದ ಡೆಂಗ್ಯೂ ರೋಗ ಮುಂಜಾಗ್ರತ ಮತ್ತು ನಿಯಂತ್ರಣ ಕಾಯ್ದೆಯಡಿ ಜಿಲ್ಲೆಯ ಡೆಂಗ್ಯೂ ರೋಗ ನಿಯಂತ್ರಣಾ ಕ್ರಮವನ್ನು ಉಲ್ಲಂಘನೆ ಮಾಡಿದ ಸಾರ್ವಜನಿಕರು ಹಾಗೂ ವಿವಿಧ ಮಾಲೀಕತ್ವದಾರರುಗಳಿಗೆ ನೋಟಿಸ್ ನೀಡುವುದು ಮತ್ತು ದಂಡ ವಸೂಲಿ ಮಾಡುವ ಅಧಿಕಾರವನ್ನು ವಿವಿಧ ಹಂತದ ಅಧಿಕಾರಿಗಳಿಗೆ ನೀಡುವ ಕುರಿತು ಚರ್ಚಿಸಲು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಅ.30 ರಂದು ಮಧ್ಯಾಹ್ನ 12.30 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಡೆಂಗ್ಯೂ ರೋಗ ಮುಂಜಾಗ್ರತಾ ಮತ್ತು ನಿಯಂತ್ರಣ ಸಭೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

## ಪತ್ರೇಶ್ವರನ ದೇವಾಲಯದ ನೂತನ ಕಟ್ಟಡದ ಭೂಮಿ ಪೂಜಾ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಕುಕನೂರು ತಾಲೂಕಿನ ಯರೇಹಂಚಿನಾಳ ಗ್ರಾಮದ ಹೊರವಲಯದಲ್ಲಿ ಇರುವ ಶ್ರೀ ಪತ್ರೇಶ್ವರ ದೇವಸ್ಥಾನ ದಕ್ಷಿಣ ಭಾರತ ಕಾಶಿ ಎಂದು ಪ್ರಸಿದ್ಧಿ ಪಡೆದ ಬಿಲ್ಲು ಪತ್ರಿವನದ ಆರಾಧ್ಯ ದೈವ ಶ್ರೀ ಪತ್ರೇಶ್ವರನ ದೇವಾಲಯದ 2.ಕೋಟಿ.ರೂ.ವೆಚ್ಚದಲ್ಲಿ ನಿರ್ಮಿಸುವ ನೂತನ ಕಟ್ಟಡದ ಭೂಮಿ ಪೂಜಾ ಕಾರ್ಯಕ್ರಮವನ್ನು ಭೂ ವಿಜ್ಞಾನ ಮತ್ತು ಸಮಾಜ ಕಲ್ಯಾಣ ಇಲಾಖೆ ಮಾಜಿ ಸಚಿವ ಹಾಲಪ್ಪ ಆಚಾರ ಇವರು ಭೂಮಿ ಪೂಜಾ ನೆರವೇರಿಸಿ ಮಾತನಾಡಿದರು.

ಮಹಿಳೆಯರು ಗ್ರಾಮದಿಂದ ಶ್ರೀ ಪತ್ರೇಶ್ವರ ದೇವಸ್ಥಾನದವರಿ ಹೂವಿನ ಸುರಿಮಳೆಯಿಂದ ಪರಮ ಪೂಜ್ಯ ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳಿಗೆ ಅದ್ದೂರಿಯಾಗಿ ಸ್ವಾಗತಿಸಿಕೊಂಡರು.

ಕೊಪ್ಪಳ ಜಿಲ್ಲೆ ಗವಿಸಿದ್ದೇಶ್ವರ ಶಾಖಾ ಮಠದ ಹೂವಿನಹಡಗಲಿ ಪರಮ ಪೂಜ್ಯ ಶ್ರೀ ಮ.ನಿ.ಪ್ರ. ಡಾ. ಹಿರಿಶಾಂತವೀರ ಶ್ರೀಗಳ ರವರು ದಿವ್ಯ ಸಾನಿಧ್ಯ ಹಾಗೂ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದರು.

ಈ ಸಮಾರಂಭದಲ್ಲಿ ವಿವಿಧ ಗ್ರಾಮದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈಶಪ್ಪ ಆರೇರ. ಹಾಗೂ ಶಿವಣ್ಣ ಯಾಳಗಿ ಈ ಕಾರ್ಯಕ್ರಮ ನಿರೂಪಿಸಿದರು. ಎಂದು ಈ ಸಮಾರಂಭದಲ್ಲಿ ಭಾಗವಹಿಸಿದ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ಕೋಳೂರ ಇವರು ತಿಳಿಸಿದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕನ್ನಡ ಉಪನ್ಯಾಸಕರು ಮತ್ತು ಖ್ಯಾತ ಜಾನಪದ ನಿವೃತ್ತ ಸಾಹಿತಿಗಳಾದ ಡಾ. ಶಂಭು ಬಳಿಗಾರ. ಕನ್ನಡ ಉಪನ್ಯಾಸಕರು ನಿವೃತ್ತಿಹೊಂದಿದ ಡಾ. ದಾನಯ್ಯ ಎಂ. ಹಿರೇಮಠ.ಕರಬಸಪ್ಪ ವಿ. ಹಂಚಿನಾಳ ಸಿಂಗಟಾಲೂರು ಶ್ರೀ ವೀರಭದ್ರೇಶ್ವರ ಟ್ರಸ್ಟ್ ಅಧ್ಯಕ್ಷರು & ಮುಖಂಡರು,ಕಳಕನಗೌಡು ಕಲ್ಲೂರು ಮತ್ತು ಜಿಲ್ಲಾ ಅಧ್ಯಕ್ಷರು ವೀರಶೈವ ಮಹಾಸಭಾ ಕೊಪ್ಪಳ, ಕಳಕಪ್ಪ ಕಂಬಳಿ ಮುಖಂಡರು ಹಾಗೂ ಸಮಾಜ ಸೇವಕರು, ಈರಪ್ಪ ಬ. ಬಿಸನಳ್ಳಿ ಪ್ರಥಮ ದರ್ಜೆ ಗುತ್ತಿಗೆದಾರರು, ಸಿ ವಿ ಚಂದ್ರಶೇಖರ್,.ಎ.ಕೆ.ಹೊಸಅಂಗಡಿ ಪ್ರಥಮ ದರ್ಜೆ ಗುತ್ತಿಗೆದಾರರು, ಮಹಾದೇವಪ್ಪ ಬಟ್ಟೂರು ಪ್ರಥಮ ದರ್ಜೆ ಗುತ್ತಿಗೆದಾರರು, ಪ್ರಕಾಶ ಯರೇಹಂಚಿನಾಳ, ಗ್ರಾಮದ ಪ್ರೌಢ ಶಾಲೆಯ ಹಳೆ ವಿದ್ಯಾರ್ಥಿ ಸಿದ್ದಪ್ಪ ಮದ್ದೂರು ತಾಲೂಕ ಪಿಎಸ್‌ಐ ಅಧಿಕಾರಿ.ಹಾಗೂ ರಾಮನಗೌಡ ದೇಸಾಯಿ ಮುಖಂಡರು ಹಾಗೂ ಸಮಾಜ ಸೇವಕರು.ಉಮೇಶ ಎತ್ತಿನಮನಿ, ಮಲ್ಲಿಕಾರ್ಜುನ ಬಿನ್ನಾಳ, ವಿಜಯಕುಮಾರ ಕಾಶಿಮಠ ನಿವೃತ್ತ ನಿರ್ದೇಶಕರರು, ಕೆ.ಎಮ್.ಎಫ್ ವಿಜಯಪುರ. ಪಿ.ಆರ್. ಚಿಕ್ಕೊಪ್ಪ ನಿವೃತ್ತ ಅಧಿಕಾರಿಗಳು ಇಂಡಿಯನ್ ಆಯಿಲ್. ಹಾಗೂ ನಮ್ಮ ಪೆಟ್ರೋಲ್ ಪಂಪ್ ಮಾಲಿಕರು ಯರೇಹಂಚಿನಾಳ, ದ್ರಾಕ್ಷಾಯಣಿ ಸಂಗಪ್ಪ ತಹಶೀಲ್ದಾರ ಗ್ರಾಮ ಪಂಚಾಯಿತಿ ಅಧ್ಯಕ್ಷರು. ಊರಿನ ಗಣ್ಯರು ಯುವಕರು ಮಹಿಳೆಯರು ಈ ಇನ್ನಿತರರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಪ್ರಾಥಮಿಕ ಕೃಷಿಪತ್ತಿನ ಸಹಕಾರ ಅಧ್ಯಕ್ಷರಾಗಿ ಸಿದ್ದಯ್ಯ ಕಳ್ಳಿಮಠ ಪ್ರಮಾಣವಚನ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ: ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಪದಗ್ರಹಣ ಕಾರ್ಯಕ್ರಮವನ್ನು ಸೋಮವಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಲ್ಲಿ ಹಮ್ಮಿಕೊಳ್ಳಲಾಯಿತು.

ಪದಗ್ರಹಣ ಕಾರ್ಯಕ್ರಮದಲ್ಲಿ 12 ಜನ ಸದಸ್ಯರು ಸೇರಿ ಅವಿರೋಧವಾಗಿ ಸಿದ್ದಯ್ಯ ಕಳ್ಳಿಮಠ ಅವರನ್ನು ಅಧ್ಯಕ್ಷರನ್ನಾಗಿ ಹಾಗೂ ಉಪಾಧ್ಯಕ್ಷರಾಗಿ ಭರಮಪ್ಪ ತಳವಾರ್ ಅವರನ್ನು ಆಯ್ಕೆ ಮಾಡಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಸಿದ್ದಯ್ಯ ಕಳ್ಳಿಮಠ ಮಾತನಾಡುತ್ತಾ ಎಲ್ಲಾ ನನ್ನ ಸೇರುದಾರರು 12 ಜನ ಸದಸ್ಯರು ನಮ್ಮ ಮೇಲೆ ನಂಬಿಕೆ ಮತ್ತು ವಿಶ್ವಾಸ ಇಟ್ಟು ನನ್ನನ್ನು ಅಧ್ಯಕ್ಷರನ್ನಾಗಿ ಹಾಗೂ ಭರಮಪ್ಪ ತಳವಾರ ಅವರನ್ನು ಉಪಾಧ್ಯಕ್ಷರನ್ನಾಗಿ ಆಯ್ಕೆಮಾಡಿದ್ದೀರಿ ನಿಮ್ಮ ನಂಬಿಕೆ ವಿಶ್ವಾಸ ಉಳಿಸುವ ಪ್ರಾಮಾಣಿಕ ಸಹಕಾರಿ ಸಂಘದ ಕಾರ್ಯಗಳನ್ನು ನಾವು ಮಾಡುತ್ತೇವೆ ರೈತರಿಗೆ ಬೀಜ, ಗೊಬ್ಬರ, ಬಡ್ಡಿರಹಿತ ಸಾಲ ಸಣ್ಣ ಪುಟ್ಟ ವ್ಯಾಪಾರಸ್ಥರ ಬೀದಿ ಬದಿ ವ್ಯಾಪಾರಸ್ಥರಗೆ ನಮ್ಮ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದಿಂದ ಸಾಲ ಸೌಲಭ್ಯ ಕೊಡುವ ಕಾರ್ಯವನ್ನು ಮಾಡುತ್ತಾ ಸಹಕಾರಿ ಸಂಘವನ್ನು ಉತ್ತಮವಾಗಿ ಅಭಿವೃದ್ಧಿ ಪಡಿಸುವ ಯೋಜನೆಯನ್ನು ಕೈಗೊಳ್ಳುತ್ತೇವೆ ಎಂದು ಹೇಳಿದರು.

ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರು ಹಾಗೂ ಸಿಎಂ ಆರ್ಥಿಕ ಸಲಹೆಗಾರರಾದ ನಮ್ಮ ನೆಚ್ಚಿನ ನಾಯಕ ಬಸವರಾಜ ರಾಯ-ರೆಡ್ಡಿ ಹಾಗೂ ಗುರು ಹಿರಿಯರ ಮಾರ್ಗದರ್ಶನದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಕಾರ್ಯಗಳನ್ನು ಮಾಡುತ್ತೇವೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಆಡಳಿತ ಮಂಡಳಿಯ ಸದಸ್ಯರಾದ ಕಳಕಪ್ಪ ಸಂಗಪ್ಪ ಕುಂಬಾರ ನಿರ್ದೇಶಕರು, ದಸ್ತಗೀರ ಸಾಬ್ ಜಿ. ರಾಜೂರ ನಿರ್ದೇಶಕರು, ರಾಮಪ್ಪ ಭೀಮಪ್ಪ ಭಜಂತ್ರಿ ನಿರ್ದೇಶಕರು, ಶ್ರೀನಿವಾಸ ರಾವ್ ಎಚ್ ದೇಸಾಯಿ ನಿರ್ದೇಶಕರು, ಗುಡ್ಲಪ್ಪ ಸಣ್ಣ ಈರಪ್ಪ ಚಲವಾದಿ ನಿರ್ದೇಶಕರು, ಬಸವರಾಜ ವಿ ನೋಟಗಾರ ನಿರ್ದೇಶಕರು, ಮಲ್ಲಿಕಾರ್ಜುನ ಎನ್ ಅದಿಯವರ ನಿರ್ದೇಶಕರು, ರತ್ನಮ್ಮ ಸಂಗಪ್ಪ ಗದಗ ನಿರ್ದೇಶಕರು, ಶಂಶಾದ ಬೇಗಂ ಆರ್ ಕಟ್ಟಿಮನಿ ನಿರ್ದೇಶಕರು, ಬಸಪ್ಪ ಮಲ್ಲಪ್ಪ ಈಬೇರಿ ನಿರ್ದೇಶಕರು ಮು. ಕಾ. ನಿ. ಪಾ. ಸ. ಸಂ. ನಿ. ಎಮ್ ಎಚ್ ಗಾಂಜಿ. ಡಿ. ಸಿ. ಎಮ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ರೈತರು ಸಿಬ್ಬಂದಿಗಳು ಇದ್ದರು.

## ಅ.30 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ಅ.30 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ವಾಕ್ ಇನ್ ಇಂಟರ್‌ವ್ಯೂವ್ ಅನ್ನು ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಬೆಂಗಳೂರಿನ ಪೋನೋರೆಂಜ್ ಪ್ರೈವೇಟ್ ಲಿಮಿಟೆಡ್ ಕಂಪನಿಯು ತಮ್ಮಲ್ಲಿನ ಖಾಲಿ ಹುದ್ದೆಗಳನ್ನು ನೇರ ಸಂದರ್ಶನದ ಮೂಲಕ ನೇಮಕಾತಿ ಮಾಡಿಕೊಳ್ಳಲಿದ್ದು, ಭಾಗವಹಿಸಲು ಯಾವುದೇ ಶುಲ್ಕ ಇರುವುದಿಲ್ಲ ಎಲ್ಲರಿಗೂ ಉಚಿತ ಪ್ರವೇಶವಿರುತ್ತದೆ. ಎಸ್.ಎಸ್.ಎಲ್.ಸಿ ಪಾಸ್ ಅಥವಾ ಫೇಲ್, ಐ.ಟಿ.ಐ (ಆಲ್ ಟ್ರೇಡ್ಸ್), ಪಿ.ಯು.ಸಿ ಅಥವಾ ತತ್ಸಮಾನ, ಮೇಲ್ಪಟ್ಟ ವಿದ್ಯಾಭ್ಯಾಸ ಹೊಂದಿರುವ ನಿರುದ್ಯೋಗಿ ಯುವಕ ಮತ್ತು ಯುವತಿಯರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ ಹಾಗೂ ಪಾಸ್ ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಕೊಪ್ಪಳ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಈಶಾನ್ಯ ಶಿಕ್ಷಕರ ಕ್ಷೇತ್ರದ ಮತದಾರರ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಅ.27-ಕರ್ನಾಟಕ ವಿಧಾನ ಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಮತದಾರರ ನೋಂದಣಿ ಪ್ರಕ್ರಿಯೆ ಈಗಾಗಲೇ ಆರಂಭವಾಗಿದ್ದು, ನಿರೀಕ್ಷಿತ ಮಟ್ಟದಲ್ಲಿ ನೋಂದಣಿಗೆ ಅಧಿಕಾರಿಗಳು ಮುತುವರ್ಜಿ ವಹಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಕರ್ನಾಟಕ ವಿಧಾನಪರಿಷತ್ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ-2026 ಅಂಗವಾಗಿ ವಿಶೇಷ ಮಿಂಚಿನ ನೋಂದಣಿ ಅಭಿಯಾನ ಪ್ರಗತಿ ಕುರಿತು ಸೋಮವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ನೋಂದಣಿ ಕಾರ್ಯದಲ್ಲಿ ಎಲ್ಲಾ ಅಧಿಕಾರಿಗಳು, ನೋಡಲ್ ಅಧಿಕಾರಿಗಳು ಪ್ರೌಢಶಾಲೆ, ವಿಶ್ವವಿದ್ಯಾಲಯ, ಕೃಷಿ, ವೈದ್ಯಕೀಯ ಕಾಲೇಜು, ತಾಂತ್ರಿಕ ಕಾಲೇಜು, ಪದವಿಪೂರ್ವ, ಪದವಿ ಕಾಲೇಜುಗಳಲ್ಲಿ ವ್ಯಾಪಕ ಪ್ರಚಾರ ಮಾಡಿ ನೋಂದಣಿ ಸಂಖ್ಯೆಯನ್ನು ಹೆಚ್ಚಿಸಬೇಕು. ಅಗತ್ಯವಿದ್ದಲ್ಲಿ ಭರ್ತಿ ಮಾಡುವ ವಿಧಾನ ಕುರಿತು ತರಬೇತಿ ನೀಡಬೇಕು ಎಂದು ನಿರ್ದೇಶನ ನೀಡಿದರು.

ಭಾರತ ಚುನಾವಣಾ ಆಯೋಗ ಹಾಗೂ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರ ನಿರ್ದೇಶನದಂತೆ ಬರುವ ನವೆಂಬರ್ 06 ರೊಳಗೆ ಮತದಾರರ ನೋಂದಣಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿದೆ. ಅಧಿಕಾರಿಗಳು ಯಾವುದೇ ರೀತಿಯಲ್ಲಿ ನಿರ್ಲ್ಯಕ್ಷಿಸುವಂತಿಲ್ಲ. ಸಂಬಂಧಿಸಿದ ಅಧಿಕಾರಿಗಳು ಶಾಲೆ-ಕಾಲೇಜು ಸಮಷ್ಟೆಗಳಿಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಬೇಕು ಎಂದು ತಿಳಿಸಿದರು.

ಎಲ್ಲಾ ಅರ್ಹ ಮತದಾರರ ನೋಂದಣಿಯನ್ನು ಮಾಡಿಸಲು ಅಕ್ಟೋಬರ್ 27, 30 ಹಾಗೂ ನವೆಂಬರ್ 03ರಂದು ಮತದಾರರ ಮಿಂಚಿನ ನೋಂದಣಿ ಅಭಿಯಾನ ಆಯೋಜಿಸಲಾಗಿದೆ. ಅಭಿಯಾನದ ದಿನಗಳಂದು ತಮ್ಮ ಕ್ಷೇತ್ರವ್ಯಾಪ್ತಿಗೆ ಒಳಪಡುವ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳ ಸೇವೆಯನ್ನು ಪಡೆದು ಅರ್ಹ ಶಿಕ್ಷಣ ಸಂಸ್ಥೆಗಳನ್ನು ಗುರುತಿಸಿ ಅಲ್ಲಿ ನೋಂದಣಿಗಾಗಿ ಅರ್ಹರಿರುವ ಮತದಾರರನ್ನು ಕಚೇರಿ ಮುಖ್ಯಸ್ಥರ ಮುಖಾಂತರ ಸಂಪರ್ಕಿಸಿ, ನಿಗದಿಪಡಿಸಿದ ಸಮಯದೊಳಗೆ ನಿಯಮಾನುಸಾರ ನಮೂನೆ-19ರ ಅರ್ಜಿಯೊಂದಿಗೆ ಪೂರಕ ದಾಖಲೆಗಳನ್ನು ಸ್ವೀಕರಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದಲ್ಲಿ ಸಂಬಂಧಿಸಿದ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆಯ ಅಧಿಕಾರಿಗಳು, ವಿಶ್ವವಿದ್ಯಾನಿಲಯದ ಕುಲಸಚಿವರು ಹಾಗೂ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ನೋಡಲ್ ಅಧಿಕಾರಿಗಳೆಂದು ನೇಮಕ ಮಾಡಿ ಆದೇಶಿಸಲಾಗಿದ್ದು, ಈ ಎಲ್ಲಾ ಅಧಿಕಾರಿಗಳು ಕೂಡಲೇ ಅರ್ಹ ಮತದಾರರನ್ನು ಗುರುತಿಸಿ ನೋಂದಣಿಗಾಗಿ ಅರ್ಜಿಗಳನ್ನು ಸ್ವೀಕರಿಸಲು, ಈ ಕುರಿತು ವ್ಯಾಪಕ ಪ್ರಚಾರ ನೀಡಲು ಮತ್ತು ಅರ್ಜಿ ಸ್ವೀಕೃತಿ ಸಂಖ್ಯೆಯನ್ನು ಹೆಚ್ಚಿಸುವಂತೆ ಎಂದು ತಿಳಿಸಿದರು.

ಜಿಪಂ ಉಪಕಾರ್ಯದರ್ಶಿ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಶಾಲಾ-ಕಾಲೇಜು, ವಿದ್ಯಾಸಂಸ್ಥೆ, ವಿಶ್ವವಿದ್ಯಾಲಯಗಳಿಗೆ ಈಗಾಗಲೇ ನಮೂನೆ-19 ಅರ್ಜಿಗಳನ್ನು ವಿತರಣೆ ಮಾಡಲಾಗಿದೆ. ತ್ವರಿತವಾಗಿ ಅರ್ಹತೆ ಇರುವ ಎಲ್ಲಾ ಶಿಕ್ಷಕರನ್ನು ನೋಂದಾಯಿಸಿಕೊಳ್ಳಲು ಸೂಚಿಸಬೇಕು ಎಂದರು.

ಈಶಾನ್ಯ (ಕಲಬುರಗಿ) ವ್ಯಾಪ್ತಿಯ ಎಲ್ಲಾ ಜಿಲ್ಲೆಗಳ ಅರ್ಹ ಶಿಕ್ಷಕರಿಗೆ ಅರ್ಜಿ ನಮೂನೆ-19 ನೀಡಬಹುದಾಗಿದೆ ಮತ್ತು ಅವರಿಂದ ಭರ್ತಿ ಮಾಡಿಸಿಕೊಂಡು ಅರ್ಜಿ ಸ್ವೀಕರಿಸಬಹುದಾಗಿದೆ. ಉಳಿದ ಜಿಲ್ಲೆ ಹಾಗೂ ಹೊರ ರಾಜ್ಯದವರು ಅನರ್ಹರಾಗಿರುತ್ತಾರೆ ಎಂದು ಸ್ಪಷ್ಟಪಡಿಸಿದರು.

ಸಂಬಂಧಿಸಿದ ಅಧಿಕಾರಿಗಳು ಪ್ರತಿ ದಿನ ಮಾಹಿತಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ನೀಡಿ ಅದರ ವರದಿಯನ್ನು ಕಡ್ಡಾಯ ಸಲ್ಲಿಸಬೇಕು ಎಂದ ಅವರು, ಹಾಗೆಯೇ ನೋಂದಣಿಗೆ ಭರ್ತಿಯಾಗದೇ ಉಳಿದ ಅರ್ಜಿ ನಮೂನೆಗಳನ್ನು ಹಿಂದಿರುಗಿಸಬೇಕು ಎಂದರು.

ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಗೋಪಾಲಸ್ವಾಮಿ, ಜಿಲ್ಲಾ ಪಂಚಾಯತ್ ಸಹಾಯಕ ನಿರ್ದೇಶಕ ಬಸವರಾಜ್ ಹಿರೇಮಠ ಸೇರಿದಂತೆ ಜಿಲ್ಲೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಬಿಆರ್‌ಪಿ-ಸಿಆರ್‌ಪಿ ಅಧಿಕಾರಿಗಳು, ವಿವಿಧ ಶಾಲಾ-ಕಾಲೇಜು, ವಿದ್ಯಾಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

## ಸಂಕುಚಿತ ಭಾವನೆ ತೊರೆದು ಮುಕ್ತ ಮನಸ್ಸಿನಿಂದ ವಿದ್ಯಾಭ್ಯಾಸ ಮಾಡಿ : ಡಾ.ಹನಸಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಸಕಾರಾತ್ಮಕವಾಗಿ ಯೋಚಿಸುವ ವ್ಯಕ್ತಿ ಮಾತ್ರ ಬದುಕಿನಲ್ಲಿ ನೆಮ್ಮದಿಯಿಂದ ಇರುತ್ತಾನೆ. ನಮ್ಮಲ್ಲಿರುವ ಜ್ಞಾನಬಲ ಸದ್ಬಳಕೆ ಮಾಡಿಕೊಳ್ಳುವ ಮೂಲಕ ಯಶಸ್ಸಿಗೆ ವಿದ್ಯಾರ್ಥಿಗಳು ಪ್ರಯತ್ನಿಸಬೇಕು ಎಂದು ಪ್ರಾಚಾರ್ಯ ಡಾ.ಬಸವರಾಜ ಹನಸಿ ಹೇಳಿದರು.

ಪಟ್ಟಣದ ಶಿವಪ್ರೀಯಾ ಕಾನೂನ ಮಹಾ ವಿದ್ಯಾಲಯದಲ್ಲಿ ಜರುಗಿದ ತೃತೀಯ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳಿಂದ ಪ್ರಥಮ ವರ್ಷದ ಕಾನೂನು ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಅತಿಥಿಗಳಿಗೆ ಸ್ವಾಗತಿಸುವುದು ಹಾಗೂ ಬೀಳ್ಕೊಡುವ ಪದ್ಧತಿ ಇದೆ. ಅದರಂತೆ ಪ್ರಥಮ ವರ್ಷಕ್ಕೆ ಬಂದ ವಿದ್ಯಾರ್ಥಿಗಳಿಗೆ ಹಿರಿಯ ವಿದ್ಯಾರ್ಥಿಗಳು ಆತ್ಮೀಯವಾಗಿ ಸ್ವಾಗತಿಸುವ ಕಾರ್ಯ ಶ್ಲಾಘನೀಯ. ವಿದ್ಯಾರ್ಥಿಗಳು ಸತತ ಅಧ್ಯಯನದಲ್ಲಿ ತೊಡಗಿಸಿಕೊಂಡು ಸಾರ್ಥಕ ಬದುಕು ರೂಪಿಸಿಕೊಳ್ಳಿ' ಎಂದು ಸಲಹೆ ನೀಡಿದರು.

ರಾಜ್ಯ ಬಾರ್ ಕೌನ್ಸಿಲರ್ ಕೃಷ್ಣಪ್ಪ ನಾಯ್ಕ್ ಭೀಮಪ್ಪ

ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, 'ಇಂದಿನ ಯುವಜನತೆ ಪುಸ್ತಕಕ್ಕೆ ಸೀಮಿತವಾಗದೆ, ಸಮಾಜದಲ್ಲಿನ ಓರೆಕೋರೆಗಳನ್ನು ಅರಿತುಕೊಳ್ಳಲು ಪ್ರಯತ್ನಿಸಬೇಕು. ಸಮಾಜದಲ್ಲಿ ಬರುವ ನಕರಾತ್ಮಕ ಯೋಚನೆಗಳಿಗೆ ಆದ್ಯತೆ ನೀಡದೆ ಮಹಾತ್ಮರ ಚಿಂತನೆಗಳಿಂದ ಪ್ರೇರಣೆ ಪಡೆದು ಆತ್ಮಸ್ಥೈರ್ಯದಿಂದ ಬದುಕು ಕಟ್ಟಿಕೊಳ್ಳಬೇಕು'

'ಆಧುನಿಕ ತಂತ್ರಜ್ಞಾನ ಯುಗದಲ್ಲಿ ಎಲ್ಲ ಕ್ಷೇತ್ರದಲ್ಲಿ ಹೆಚ್ಚು ಸ್ಪರ್ಧೆ ಇದೆ. ವಿದ್ಯಾರ್ಥಿಗಳು ಕಾಲೇಜಿನಲ್ಲಿರುವ ಗ್ರಂಥಾಲಯ ಪುಸ್ತಕ, ಕಂಪ್ಯೂಟರ್‌ಗಳ ಸದ್ಬಳಕೆ ಮಾಡಿಕೊಂಡು ಹೆಚ್ಚಿನ ಜ್ಞಾನ ಸಂಪಾದಿಸಬೇಕು. ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲಿ ಸ್ವಯಂ ಪ್ರೇರಣೆಯಿಂದ ಭಾಗವಹಿಸಬೇಕು' ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಹಿರಿಯ ವಕೀಲರು ಹಾಗೂ ಕಾಲೇಜೀನ ಉಪಾಧ್ಯಕ್ಷರಾದ ರಾಘವೇಂದ್ರ ಪಾನಘಂಟಿ, ಪ್ರಶಾಂತಿ ಶಿಕ್ಷಣ ಸಂಸ್ಥೆ ರಾಣೆಬೆನ್ನೂರಿನ ಡಾ.ಮನೋಜ ಸಾಹುಕಾರ, ಕೊಪ್ಪಳ ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಅಧ್ಯಕ್ಷ ಸೋಮಶೇಖರ್ ಹಿಟ್ನಾಳ, ಸುಸ್ಮೀತಾ ಜಗನ್ನಾಥ, ಅಣ್ಣಪ್ಪ, ನರೇಂದ್ರ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ಹಾಗೂ ಕಾನೂನು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಶಿಕ್ಷಕ ಸದಾ ವಿದ್ಯಾರ್ಥಿ ಆಗಿರಬೇಕು : ಸುರೇಶ ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಏನು ಅರ್ಥ ಆಗಿಲ್ಲ ಅದನನ್ನು ತಿಳಿಸುವ ಕಾರ್ಯ ಶಿಕ್ಷಕರು ಮಾಡಬೇಕಾಗಿದೆ . ಹೊಸತನ ತಿಳಿದು ಕೊಳ್ಳುವದರ ಜೊತೆಗೆ ಬೆಳೆಯಬೇಕು. ಕ್ಷಣಕ್ಷಣ-ಕ್ಕೂ ನವನವಿನ ವಿಷಯವನ್ನು ಹೇಳುವವನೆ ನಿಜವಾದ ಶಿಕ್ಷಕರು ಎಂದು ಧಾರವಾಡದ ಶಿಕ್ಷಣ ತಜ್ಞರು ಹಾಗೂ ಅಂತರಾಷ್ಟ್ರೀಯ ಸಂಪನ್ಮೂಲ ವ್ಯಕ್ತಿ ಸುರೇಶ ಕುಲಕರ್ಣಿರವರು ಹೇಳಿದರು. ಯಲಬುರ್ಗಾ ಪಟ್ಟಣದ ಎಸ್.ಎ.ನಿಂಗೋಜಿ ಬಿ.ಇಡಿ. ಕಾಲೇಜಿನಲ್ಲಿ ಆಯೋಜಿಸಿದ ಪೌರತ್ವ ತರಬೇತಿ ಸಮಾರಂಭ ನಿಂಗೋಜಿರೂಪ ಕೊಟ್ಟು ಶಿಕ್ಷಣ ನೀಡುತ್ತಾಸೆ. ಆತ್ಮ ವಿಶ್ವಾಸ ಮೂಡಿಸುವ ಕೆಲಸ ಶಿಕ್ಷಣದಿಂದ ಸಾಧ್ಯ .ಕ್ರೀಯಾ ಶೀಲತೆಯಿಂದ ಜ್ಞಾನ ಹೆಚ್ಚಿಸ ಕೊಳ್ಳಬೇಕು.ನಮ್ಮಲ್ಲಿರುವ ಜ್ಞಾನದ ಅರಿವುನ್ನೂ ಹೆಚ್ಚಿಸಿಕೊಳ್ಳಬೇಕು. ನಿಮ್ಮಲ್ಲಿರುವ ಶಕ್ತಿಯನ್ನು ಅರ್ಥೈಸಿಕೊಂಡು ಹೊರಹಾಕಬೇಕು ಆವಾಗ ನಿಮ್ಮನ್ನು ಜನರು ಗುರುತಿಸುತ್ತಾರೆ. ಶಿಕ್ಷಕರು ಸದಾ ವಿದ್ಯಾರ್ಥಿಗಳಾಗಿರ ಬೇಕು.ಕಲಿಯಲಿಕ್ಕೆ ವಯಸ್ಸು ಅಡ್ಡಿ ಆಗಬಾರದು.ಓದಿ, ಬರೆದು, ಚರ್ಚೆ ಮಾಡುವ ಮೂಲಕ ಜ್ಞಾನಾರ್ಜನೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದರು. ಮನುಷ್ಯನಿಗೆ ಭಾವನೆ ಗಳುಮುಖ್ಯ ಶಿಕ್ಷಣದ ಮಹತ್ವವನ್ನು ಪ್ರಾಯೋಗಿಕ ವಾಗಿ ತಿಳಿಸಿದ ಅವರು ಪ್ರತಿಯೊಬ್ಬರು ಜ್ಞಾನ ತಿಳುವಳಿಕೆ ಯನ್ನು ಅಳವಡಿಸಿಕೊಂಡು

ಅಪ್ಪ,ಅಮ್ಮ,ಗುರುಗಳು,ಸಮಾಜಕ್ಕೆ ಹಾಗೂ ನಿಂಗೋಜಿ ಶಿಕ್ಷಣ ಸಂಸ್ಥೆಗೆ ಕೀರ್ತಿತರಬೇಕು ಎಂದು ಆಶಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಯಲಬುರ್ಗಾದ ಮುರುಡಿ ಹಿರೇಮಠದ ಬಸವಲಿಂಗೇಶ್ವರ ಸ್ವಾಮೀಜಿ,ಶಶಿಕಾಂತ ನಿಂಗೋಜಿ ,ರತ್ನಮ್ಮ , ಗೀತಾ,ರಾಜಶೇಖರ ,ರವಿ ಪ್ರಕಾಶ ಹಾಗೂ ಎಲ್ಲಾ ಪ್ರಾಧ್ಯಾಪಕರು ಭಾಗವಹಿಸಿದ್ದರು. ಸಂಗೀತಗಾರರಾದ ಲಿಂಗರಾಜ ತೊಂಡಿಹಾಳ ಹಾಗೂ ಖಾನಸಾಬ ಕಲ್ಲೂರ ರವರ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

# ಬಿ.ವಿ.ವಿ ಸಂಘದ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯ ಪೂಜೆ
## ಸಾರ್ವಜನಿಕರಿಗೆ ಅತ್ಯುತ್ತಮ ವೈದ್ಯಕೀಯ ಸೇವೆ: ಡಾ.ಚರಂತಿಮಠ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27–ನಗರದ ಬಿ.ವಿ.ವಿ ಸಂಘದಡಿ ಬಾಗಲಕೋಟೆ ಜಿಲ್ಲೆಯಲ್ಲಿ ಅತ್ಯಾಧುನಿಕ ಸುಪರ್ ಸ್ಪೆಷಾಲಿಟಿ ಆಸ್ಪತ್ರೆ ಸ್ಥಾಪಿಸುವುದು ಬಹುದಿನಗಳ ಕನಸಾಗಿತ್ತು. ಆ ಕನಸು ಈಗ ನನಸಾಗುತ್ತಿದೆ. ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮೂಲಕ ಸಾರ್ವಜನಿಕರಿಗೆ ಅತ್ಯುತ್ತಮ ವೈದ್ಯಕೀಯ ಸೇವೆ ದೊರೆಯಲಿದೆ ಎಂದು ಬಿ.ವಿ.ವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಸಿ.ಚರಂತಿಮಠ ಹೇಳಿದರು.

ಸೋಮವಾರ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದ ಆವರಣದಲ್ಲಿ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯ ನೂತನ ಕಟ್ಟಡದ ಪೂಜಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯಲ್ಲಿ ಈಗಾಗಲೇ ಸುಪರ್ ಸ್ಪೆಷಾಲಿಟಿ ವಿಭಾಗಗಳು ಕಾರ್ಯನಿರ್ವಹಿಸುತ್ತಿದ್ದು ತಜ್ಞ ವೈದ್ಯರನ್ನು ನೇಮಕ ಮಾಡಿಕೊಳ್ಳಲಾಗಿದೆ. ಸುಪರ್ ಸ್ಪೆಷಾಲಿಟಿಯ ವಿಸ್ತೃತ ಸೇವೆ ಒದಗಿಸುವ ಉದ್ದೇಶದಿಂದ 3.5 ಲಕ್ಷ ಚದುರಡಿಗಳ ವಿಸ್ತೀರ್ಣದಲ್ಲಿ 250 ಕೋಟಿ ರೂಪಾಯಿಗಳ ವೆಚ್ಚದಲ್ಲಿ 400 ಹಾಸಿಗೆಗಳ ಸುಸಜ್ಜಿತ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನು ಸ್ಥಾಪಿಸಲಾಗಿದೆ ಎಂದರು.

ಸುಸಜ್ಜಿತ 8 ಶಸ್ತ್ರಚಿಕಿತ್ಸಾ ಕೊಠಡಿಗಳÀ(Modular O.T) ಮತ್ತು ಕ್ಯಾಥ್‌ಲ್ಯಾಬ್ ಸೌಲಭ್ಯ ಆಸ್ಪತ್ರೆಯಲ್ಲಿ ದೊರೆಯಲಿದೆ. ಕಾರ್ಡಿಯಾಲಜಿ, ಎಂಡೊಕ್ರೈನಾಲಜಿ, ಗ್ಯಾಸ್ಟ್ರೊಎಂಟ್ರಾಲಜಿ, ನೆಫ್ರಾಲಜಿ, ನ್ಯೂರಾಲಜಿ, ನ್ಯೂರೊಸರ್ಜರಿ, ಪಿಡಿಯಾಟ್ರಿಕ್ ಸರ್ಜರಿ, ಪ್ಲಾಸ್ಟಿಕ್ ಸರ್ಜರಿ, ಯುರಾಲಜಿ ಮತ್ತು ಕಾರ್ಡಿಯೊ ಥೊರಾಸಿಕ್ ವ್ಯಾಸ್ಕ್ಯುಲರ್ ಸರ್ಜರಿ ಈ ಎಲ್ಲ ವಿಭಾಗಗಳನ್ನು ಹೊಸ ಆಸ್ಪತ್ರೆಯಲ್ಲಿ ಸ್ಥಾಪಿಸಲಾಗಿದೆ. ಪ್ರತಿ ವಿಭಾಗದಲ್ಲಿ ಅಗತ್ಯದ ಅತ್ಯಂತ ಆಧುನಿಕ ವೈದ್ಯಕೀಯ ಉಪಕರಣಗಳನ್ನು ಖರೀದಿಸಲಾಗಿದೆ. ಒಟ್ಟಾರೆ ಈ ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಅತ್ಯುತ್ತಮ ವೈದ್ಯಕೀಯ ಸೇವೆ ಸಾರ್ವಜನಿಕರಿಗೆ ಲಭ್ಯವಾಗಲಿದ್ದು, ಸಾರ್ವಜನಿಕರು ಸುಪರ್ ಸ್ಪೆಷಾಲಿಟಿ ಚಿಕಿತ್ಸೆಗಾಗಿ ದೂರದ ಬೆಂಗಳೂರು, ಹುಬ್ಬಳ್ಳಿ ಮತ್ತು ಮಿರಜ್ ನಗರಗಳಿಗೆ ಅಲೆದಾಡುವ ಸಮಸ್ಯೆ ನಿವಾರಣೆಯಾಗಲಿದೆ ಎಂದರು.

ಸಾವಳಗಿಮಠದ ಶ್ರೀ ಶಿವಲಿಂಗೇಶ್ವರ ಸ್ವಾಮಿಗಳಿಂದ ಪೂಜಾಸಮಾರಂಭ ನೆರವೇರಿತು. ಪೂಜೆ ನೆರವೇರಿಸಿದ ಸ್ವಾಮಿಗಳು ಬಿ.ವಿ.ವಿ ಸಂಘದ ಈ ಸುಪರ್ ಸ್ಪೆಷಾಲಿಟಿ ಆಸ್ಪತ್ರೆ ರಾಜ್ಯದಲ್ಲೇ ಒಂದು ಮಾದರಿ ಆಸ್ಪತ್ರೆಯಾಗಲಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕೋಟೆಕಲ್ಲಿನ ಅಮರೇಶ್ವರಮಠದ ಶ್ರೀ ನೀಲಕಂಠ ಶಿವಾಚಾರ್ಯ ಸ್ವಾಮಿಗಳು, ಬಾಗಲಕೋಟೆ ಲೋಕಸಭಾ ಸದಸ್ಯ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ, ಬಿ.ವಿ.ವಿ ಸಂಘದ ಗೌರವ ಕಾರ್ಯದರ್ಶಿ ಮಹೇಶ ಎನ್.ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ (ಬೇವೂರ), ಕಟ್ಟಡ ಸಮಿತಿ ಕಾರ್ಯಾಧ್ಯಕ್ಷ ಮಹೇಶ ಕಕರಡ್ಡಿ, ಬಿ.ವಿ.ವಿ ಸಂಘದ ಗೌರವಾನ್ವಿತ ಸದಸ್ಯರು, ಮೆಡಿಕಲ್ ಕಾಲೇಜ್ ಪ್ರಾಚಾರ್ಯೆ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಮಧುಮೇಹ ತಜ್ಞ ಮತ್ತು ಸುಪರ್ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ.ನವೀನ ವಿ.ಚರಂತಿಮಠ, ಸುಪರ್ ಸ್ಪೆಷಾಲಿಟಿ ತಜ್ಞ ವೈದ್ಯರು, ವಿವಿಧ ಆರೋಗ್ಯ ಸಂಸ್ಥೆಗಳ ಪ್ರಾಚಾರ್ಯರು, ವೈದ್ಯರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗ್ಯಾರಂಟಿಗಳಿಂದ ಮಹಿಳೆಯರ
## ಸ್ವಾವಲಂಬನೆಗೆ ಬಲ : ಸಚಿವ ತಿಮ್ಮಾಪೂರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27–ರಾಜ್ಯಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಸ್ವಾವಲಂಬಿ ಜೀವನ ನಡೆಸಲು ಸಹಾಯವಾಗುತ್ತಿದ್ದು, ವಿಶ್ವಮಟ್ಟದಲ್ಲಿ ಈ ಯೋಜನೆಗಳು ದಾಖಲೆಯನ್ನೂ ನಿರ್ಮಿಸಿವೆ ಎಂದು ಅಬಕಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ಜಿಲ್ಲಾಡಳಿತ ಭವನದ ಆವರಣದ ಸಭಾಭವನದಲ್ಲಿ ಸೋಮವಾರ ಜರುಗಿದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ನೂತನ ಜಿಲ್ಲಾ ಅಧ್ಯಕ್ಷ ಅನಿಲಕುಮಾರ ದಡ್ಡಿ ಅವರ ಪದಗ್ರಹಣ ಅವರು ಮಾತನಾಡಿ, ಜಿಲ್ಲೆಯಲ್ಲಿ ಯೋಜನೆಗಳಿಗೆ ಉತ್ತಮ ಪ್ರತಿಕ್ರಿಯೆ ದೊರೆತಿದ್ದು, ಪ್ರತಿ ತಿಂಗಳು ರೂ.121 ಕೋಟಿ ಮೊತ್ತದ ಹಣ ಯೋಜನೆಗಳಿಗೆ ಬಳಕೆಯಾಗುತ್ತಿದೆ. ಗ್ರಾಮೀಣ ಮಟ್ಟದಲ್ಲಿ ಯೋಜನೆಗಳ ಅನುಷ್ಠಾನ ಮತ್ತು ಅವುಗಳಿಂದ ದೊರೆಯುವ ಉಪಯೋಗಗಳ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಜವಾಬ್ದಾರಿ ನೂತನ ಅಧ್ಯಕ್ಷರ ಮೇಲಿದೆ ಎಂದು ಹೇಳಿದರು.

ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷ ಹಾಗೂ ಬೀಳಗಿ ಶಾಸಕ ಜೆ.ಟಿ. ಪಾಟೀಲ್ ಮಾತನಾಡಿ, ಕೇವಲ ಕಛೇರಿಯ ಮಟ್ಟದಲ್ಲಿ ಸಭೆ ನಡೆಸುವುದರಿಂದ ಫಲಿತಾಂಶ ಸಿಗದು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸಭೆಗಳನ್ನು ನಡೆಸಿದರೆ ಹೆಚ್ಚು ಪರಿಣಾಮಕಾರಿ ಫಲ ಸಿಗುತ್ತದೆ. ತಾಲೂಕು ಅಧ್ಯಕ್ಷರು ತಮ್ಮ ವ್ಯಾಪ್ತಿಯ ಎಲ್ಲಾ ಹಳ್ಳಿಗಳಿಗೆ ಭೇಟಿ ನೀಡಿ ಜನರಲ್ಲಿ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ತಾಲೂಕು ಮಟ್ಟದಲ್ಲಿ ಉತ್ತಮ ಕಾರ್ಯನಿರ್ವಹಣೆ ಮಾಡಿದ ಮೊದಲ ಅಧ್ಯಕ್ಷರಿಗೆ ವೈಯಕ್ತಿಕವಾಗಿ ರೂ.25 ಸಾವಿರ ಬಹುಮಾನ ಘೋಷಿಸಿದರು.

ನೂತನ ಅಧ್ಯಕ್ಷ ಅನಿಲಕುಮಾರ ದಡ್ಡಿ ಅಧಿಕಾರ ಸ್ವೀಕರಿಸಿ ಮಾತನಾಡಿ, ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ತಾಲೂಕು ಪದಾಧಿಕಾರಿಗಳ ಸಹಕಾರ ಅಗತ್ಯ. ಮುಂದಿನ ದಿನಗಳಲ್ಲಿ ಫಲಾನುಭವಿಗಳಿಗೆ ಯೋಜನೆಗಳ ಸದುಪಯೋಗ ತಲುಪುವಂತೆ ಶ್ರಮಿಸುತ್ತೇನೆ ಎಂದು ಹೇಳಿದರು.

ವಿಧಾನಪರಿಷತ್ ಸದಸ್ಯೆ ಉಮಾಶ್ರೀ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ್ ಕುರೇರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ಎಸ್.ಆರ್.ಪಾಟೀಲ್ ಸೇರಿದಂತೆ ತಾಲೂಕು ಪದಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಅನ್ನಭಾಗ್ಯ ಯೋಜನೆಗೆ ಉಚಿತ ಅಕ್ಕಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27–ಜಿಲ್ಲೆಯಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಡಿ 747 ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿದ್ದು, ಒಟ್ಟು 4,82,882 ಪಡಿತರ ಚೀಟಿಗಳ ಮೂಲಕ 15,25,588 ಫಲಾನುಭವಿಗಳು ಅನ್ನಭಾಗ್ಯ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ.

ಜುಲೈ 2023ರಿಂದ ಡಿಸೆಂಬರ್ 2024ರವರೆಗೆ ಬಿಪಿಎಲ್ ಹಾಗೂ ಅಂತ್ಯೋದಯ ಪಡಿತರ ಚೀಟಿ–ದಾರರಿಗೆ ಹೆಚ್ಚುವರಿಯಾದ 5 ಕೆ.ಜಿ. ಆಹಾರಧಾನ್ಯದ ಬದಲಿಗೆ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ರೂ.170ರಂತೆ ಒಟ್ಟು ರೂ.390.44 ಕೋಟಿ ಮೊತ್ತವನ್ನು ಡಿಬಿಟಿ ಮೂಲಕ ಜಮೆ ಮಾಡಲಾಗಿದೆ.

ಫೆಬ್ರವರಿ 2025ರಿಂದ ನೇರ ನಗದು ವರ್ಗಾವಣೆಯ ಬದಲಿಗೆ ಪ್ರತಿಫಲಾನುಭವಿಗೆ ಕೇಂದ್ರ ಸರ್ಕಾರದ 5 ಕೆ.ಜಿ. ಧಾನ್ಯಕ್ಕೆ ಸೇರ್ಪಡೆವಾಗಿ ರಾಜ್ಯ ಸರ್ಕಾರದಿಂದ ಇನ್ನೂ 5 ಕೆ.ಜಿ. ಅಕ್ಕಿ ಉಚಿತವಾಗಿ ವಿತರಿಸಲಾಗುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಳಸಿಗೇರಿ ಆಂಜನೇಯ ದೇವಸ್ಥಾನದ ಅಭಿವೃದ್ಧಿಗೆ ಕ್ರಮ
## ಕ್ರಿಯಾ ಯೋಜನೆ ರೂಪಿಸಲು ಜೆ.ಟಿ.ಪಾಟೀಲ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27–ಐತಿಹಾಸಿಕ ತುಳಸಿಗೇರಿ ಆಂಜನೇಯ ದೇವಸ್ಥಾನ ಮೂಲ ಸೌಲಭ್ಯ ಅಭಿವೃದ್ದಿಗೆ 1.70 ಕೋಟಿ ರೂ.ಗಳ ವೆಚ್ಚದ ಕ್ರೀಯಾ ಯೋಜನೆ ರೂಪಿಸಲು ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರಾದ ಜೆ.ಟಿ.ಪಾಟೀಲ ಸೂಚನೆ ನೀಡಿದರು.

ಸೋಮವಾರ ತುಳಸಿಗೇರಿ ಆಂಜನೇಯ ದೇವಸ್ಥಾನಕ್ಕೆ ಭೇಟಿ ನೀಡಿ ಆಂಜನೇಯನ ದರ್ಶನ ಪಡೆದು ದೇವಸ್ಥಾನದಲ್ಲಿ ಹಾಗೂ ದೇವಸ್ಥಾನದ ಸುತ್ತ ಮುತ್ತಲಿನ ಮೂಲ ಸೌಲಭ್ಯಗಳನ್ನು ಪರಿಶೀಸಿ ಮಾತನಾಡಿದ ಅವರು ನೆರಯ ಬೇರೆ ಬೇರೆ ರಾಜ್ಯಗಳಿಂದ ಭಕ್ತರೂ ತುಳಿಸಿಗೇರಿಗೆ ಆಗಮಿಸುತ್ತಿದ್ದು, ಪ್ರತಿ ವರ್ಷ ದೇವಸ್ಥಾನಕ್ಕೆ 30 ರಿಂದ 35 ಲಕ್ಷ ರೂ.ಗಳ ಆದಾಯ ಬರುತ್ತಿದೆ. ದೇವರ ದರ್ಶನಕ್ಕೆ ಬರುವ ಭಕ್ತರಿಗೆ ಮೂಲಭೂತ ಸೌಕರ್ಯಗಳ ಕೊರತೆ ಇದ್ದು, ದೇವಸ್ಥಾನದಿಂದ ಸಂಗ್ರಹವಾದ 1.70 ಕೋಟಿ ರೂ.ಗಳ ಅನುದಾನದಲ್ಲಿ ಅದರ ವ್ಯವಸ್ಥಿತ ಬಳಕೆ ಕುರಿತಂತೆ ಜಿಲ್ಲಾಧಿಕಾರಿಗಳು, ಉಪವಿಭಾಗಾಧಿಕಾರಿ ಮತ್ತು ತಹಶೀಲ್ದಾರರೊಂದಿಗೆ ಚರ್ಚಿಸಿ ಕಾಮಗಾರಿ ಪ್ರಾರಂಭಿಸಲು ತಿಳಿಸಿದರು. ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಮೂಲಭೂತ ಸೌಲಭ್ಯಗಳಾದ ಶೌಚಾಲಯ, ಸ್ನಾನದ ಗೃಹ, ವ್ಯವಸ್ಥಿತ ಪಾರ್ಕಿಂಗ್ ನಿರ್ಮಾಣ, ಕಂಪೌಂಡ ನಿರ್ಮಾಣ, ದೇವಸ್ಥಾನಕ್ಕೆ ಬಣ್ಣ ಹಾಗೂ ವಿದ್ಯುತ್ ಸೇರಿದಂತೆ ಇತರೆ ಸೌಲಭ್ಯಗಳ ಕಾಮಗಾರಿ ಕೈಗೊಳ್ಳಲು ಶೀಘ್ರವಾಗಿ ಸೂಕ್ತ ಕ್ರೀಯಾ ಯೋಜನೆ ರೂಪಿಸಲು ಸೂಚಿಸಿದರು. ಕಾಮಗಾರಿ ರೂಪಿಸುವ ನಿಟ್ಟಿನಲ್ಲಿ ಸ್ಥಳೀಯ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು. ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಶಾಸಕರು ಹೇಳಿದರು.

ಈ ಸಮಯದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಹಿತ್ತಲಮನಿ, ತಹಶೀಲ್ದಾರ ವಾಸುದೇವ ಸ್ವಾಮಿ, ಉಪ ತಹಶೀಲ್ದಾರ ಆರ್.ಆರ್.ಕುಲಕರ್ಣಿ, ಕಂದಾಯ ನಿರೀಕ್ಷಕ ಎಂ.ವಾಯ್. ಮಲಕ್ಕನವರ, ಭೂ ದಾಖಲೆಯ ಸಹಾಯಕ ನಿರ್ದೇಶಕ ಮಹೇಶ ಪತ್ತಾರ, ತಹಶೀಲ್ದಾರ ಕಚೇರಿಯ ಶಿರಸ್ತೇದಾರ ನಾಗರಾಜ ಕುಲಕರ್ಣಿ ಸೇರಿದಂತೆ ನಿರ್ಮಿತಿ ಕೇಂದ್ರದ ಅಭಿಯಂತರರು ಇದ್ದರು.

# ಅಲ್ಪಸಂಖ್ಯಾತರ ಸರಳ ವಿವಾಹಕ್ಕೆ ಧನಸಹಾಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27–ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಲ್ಪಸಂಖ್ಯಾತ ಸಮುದಾಯದವರ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ) ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಸ್ವಯಂಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳಲ್ಲಿ ಭಾಗವಹಿಸುವ ಪ್ರತಿಜೋಡಿಗೆ ರೂ.50,000 ನೀಡಲು ಅರ್ಜಿಗಳನ್ನು ಆಹ್ವಾನಿಸಿದೆ.

ಅರ್ಜಿದಾರರು ಕರ್ನಾಟಕ ರಾಜ್ಯದ ನಿವಾಸಿಗಳಾಗಿರಬೇಕು. ವಧುವಿನ ವಯಸ್ಸು 18ರಿಂದ 42 ವರ್ಷಗಳು, ವರನ ವಯಸ್ಸು 21ರಿಂದ 45 ವರ್ಷಗಳ ನಡುವೆ ಇರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.5 ಲಕ್ಷ ಮೀರಬಾರದು. ಜೀವನದಲ್ಲಿ ಒಮ್ಮೆ ಮಾತ್ರ ಈ ಸೌಲಭ್ಯ ಲಭ್ಯ. ಕನಿಷ್ಠ 10 ಜೋಡಿಗಳ ಸಮೂಹ ವಿವಾಹ ಆಯೋಜನೆಯಾಗಿರಬೇಕು. ನೊಂದಾಯಿತ ಟ್ರಸ್ಟ್‌ಗಳು, ಸಂಘಗಳು, ಸೊಸೈಟಿಗಳು, ವಕ್ಫ್ ಸಂಸ್ಥೆಗಳು ಹಾಗೂ ದೇವಸ್ಥಾನ ಟ್ರಸ್ಟ್‌ಗಳು ಆಯೋಜಕರಾಗಬಹುದು. ಆಯೋಜಕರಿಗೆ ಪ್ರತಿಜೋಡಿಗೆ ರೂ.5,000 ವೆಚ್ಚ ಸಹಾಯ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ, ಮೌಲಾನಾ ಆಜಾದ್ ಭವನ, ನವನಗರ ಬಾಗಲಕೋಟೆ (ದೂರವಾಣಿ: 08354–200044) ಸಂಪರ್ಕಿಸಬಹುದು ಎಂದು ಇಲಾಖೆಯ ಪ್ರಕಟಣೆ ತಿಳಿಸಿದೆ.

ಎಸ್.ಐ.ಆರ್. ಮೂಲಕ ಮತದಾನ ಹಕ್ಕು ಕಸಿಯುವ ಬಿ.ಜೆ.ಪಿ. ಹುನ್ನಾರ – ಡಾ. ಕೆ. ಪ್ರಕಾಶ

# ಸಿ.ಪಿ.ಐ.(ಎಂ) ನೇತೃತ್ವದ
## ದುಂಡುಮೇಜು ಸಭೆಯಲ್ಲಿ ತೀರ್ಮಾನ



ರಾಯಚೂರು, ಅ.27–ಭಾರತ ಚುನಾವಣಾ ಆಯೋಗದ ಮೂಲಕ ಜಾರಿಗೆತರಲಾಗುತ್ತಿರುವ ಎಸ್.ಐ.ಆರ್. (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆ ಪ್ರಜಾಪ್ರಭುತ್ವವ್ಯವಸ್ಥೆಗೆ ಮಾರಕವಾಗಿದ್ದು, ಇದರ ಹಿಂದೆ ಬಿ.ಜೆ.ಪಿ. ಪಕ್ಷದ ಜನವಿರೋಧಿ ಹುನ್ನಾರ ಅಡಗಿದೆ ಎಂದು ಸಿ.ಪಿ.ಐ.(ಎಂ) ರಾಜ್ಯ ಕಾರ್ಯದರ್ಶಿ ಡಾ. ಕೆ. ಪ್ರಕಾಶ ಹೇಳಿದ್ದಾರೆ. ನಗರದ ಸರಕಾರಿ ನೌಕರರ ಭವನದಲ್ಲಿ ಸಿ.ಪಿ.ಐ.(ಎಂ), ಕಾಂಗ್ರೆಸ್, ಸರ್ವೋದಯ ಪಕ್ಷ, ಸಿ.ಪಿ.ಐ.(ಎಂ.ಎಲ್.), ಬಿ.ಎಸ್.ಪಿ., ಪ್ರಗತಿಪರ ರೈತ, ಕಾರ್ಮಿಕ, ಮಹಿಳಾ ಮತ್ತು ದಲಿತಪರ ಸಂಘಟನೆಗಳ ನೇತೃತ್ವದಲ್ಲಿ ನಡೆದ ದುಂಡುಮೇಜು ಸಭೆಯಲ್ಲಿ ಅವರು ಮಾತನಾಡಿದರು.

"ಭಾರತ ಚುನಾವಣಾ ಆಯೋಗಕ್ಕೆ ಪೌರತ್ವವನ್ನು ಪ್ರಶ್ನಿಸುವ ಅಧಿಕಾರವಿಲ್ಲ ಎಂದು ಸುಪ್ರೀಂ ಕೋರ್ಟ್ ಈಗಾಗಲೇ ಸ್ಪಷ್ಟವಾಗಿ ಹೇಳಿದೆ. ಆದರೂ ಎಸ್.ಐ.ಆರ್. ಪ್ರಕ್ರಿಯೆಯ ಹೆಸರಿನಲ್ಲಿ ಮತದಾನ ಹಕ್ಕು ಕಸಿಯುವ ಕೆಲಸ ನಡೆಯುತ್ತಿದೆ. ಇದು ಬಿ.ಜೆ.ಪಿ. ಪಕ್ಷದ ಹಿಡನ್ ಅಜೆಂಡಾದ ಭಾಗವಾಗಿದೆ," ಎಂದು ಅವರು ಹೇಳಿದರು.

ಅವರು ಮುಂದುವರೆದು, "ಎಸ್.ಐ.ಆರ್. ಪ್ರಕ್ರಿಯೆ ಬಡವರು, ದಲಿತರು, ಆದಿವಾಸಿಗಳು, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರನ್ನು ಗುರಿಯಾಗಿಸಿಕೊಂಡು ಮತದಾರ ಪಟ್ಟಿಯಿಂದ ಹೊರಗಿಡುವ ಪ್ರಯತ್ನವಾಗಿದೆ. ಕೇರಳ ಸರ್ಕಾರದ ಮಾದರಿಯಲ್ಲಿ ಕರ್ನಾಟಕ ರಾಜ್ಯ ಸರ್ಕಾರವು ಈ ಪ್ರಕ್ರಿಯೆಯನ್ನು ತಡೆಗಟ್ಟಬೇಕು," ಎಂದು ಒತ್ತಾಯಿಸಿದರು.

ಸಭೆಯಲ್ಲಿ ಕೆ.ಪಿ.ಸಿ.ಸಿ. ಮಾಧ್ಯಮ ವಕ್ತಾರ ರಜಾಕ್ ಉಸ್ತಾದ್ ಮಾತನಾಡಿ, "ಕೇಂದ್ರ ಬಿ.ಜೆ.ಪಿ. ಸರ್ಕಾರವು ಜನವಿರೋಧಿ ನೀತಿಗಳನ್ನು ಅನುಸರಿಸುತ್ತಿದೆ. ಎಸ್.ಐ.ಆರ್. ಮೂಲಕ ಮತ್ತೆ ಜನರ ಹಕ್ಕು ಕಸಿಯುವ ಪ್ರಯತ್ನ ನಡೆಯುತ್ತಿದೆ," ಎಂದು ಹೇಳಿದರು.

ಸರ್ವೋದಯ ಪಕ್ಷದ ಚಾಮರಾಜ ಮಾಲಿಪಾಟೀಲ ಅವರು, ರೈತರ ಹಿತದ್ರೋಹಿ ನೀತಿಗಳ ನಂತರ ಈಗ ಮತದಾನ ಹಕ್ಕಿಗೂ ಅಪಾಯ ಎದುರಾಗಿದೆ ಎಂದು ಹೇಳಿದರು.

ಜನಸಂಗ್ರಾಮ ಪರಿಷತ್‌ನ ರಾಘವೇಂದ್ರ ಕುಷ್ಟಗಿ ಅವರು, "ಎಸ್.ಐ.ಆರ್. ಹೆಸರಿನಲ್ಲಿ ನಡೆಯುತ್ತಿರುವ ಈ ಕೃತ್ಯ ಪ್ರಜಾಪ್ರಭುತ್ವದ ಅಂತ್ಯ ಘೋಷಣೆಯಂತಾಗಿದೆ. ರಾಜ್ಯದಲ್ಲಿ ಬಲಿಷ್ಠ ಚಳುವಳಿ ನಿರ್ಮಾಣ ಅಗತ್ಯ," ಎಂದು ಹೇಳಿದರು.

ಬಿ.ಎಸ್.ಪಿ. ಪಕ್ಷದ ಜಿಲ್ಲಾ ಅಧ್ಯಕ್ಷ ಜೈಭೀಮ್, ಆಬ್ ಪಕ್ಷದ ಶ್ರೀನಿವಾಸ, ಖಾಜಾ ಅಸ್ಲಂ, ದಲಿತಪರ ಮುಖಂಡ ಎಂ.ಆರ್. ಬೇರಿ, ಎಸ್. ದೇವೇಂದ್ರ ಗೌಡ, ಸಿಐಟಿಯು ಜಿಲ್ಲಾ ಅಧ್ಯಕ್ಷೆ ಹೆಚ್. ಪದ್ಮಾ ಸೇರಿದಂತೆ ಹಲವು ನಾಯಕರೂ ಮಾತನಾಡಿ ಎಸ್.ಐ.ಆರ್. ಪ್ರಕ್ರಿಯೆಯನ್ನು ವಿರೋಧಿಸಿದರು. ಸಭೆಯ ಅಂತ್ಯದಲ್ಲಿ "ಮತಾಧಿಕಾರ ರಕ್ಷಣಾ ಜಾಗೃತಿ ವೇದಿಕೆ" ರಚಿಸಿ, ಅದರ ನೇತೃತ್ವದಲ್ಲಿ ಚಳುವಳಿ ರೂಪಿಸಲು ನಿರ್ಧರಿಸಲಾಯಿತು. ರಾಜ್ಯ ಸರ್ಕಾರವು ಎಸ್.ಐ.ಆರ್. ಜಾರಿಯನ್ನು ತಡೆಗಟ್ಟಬೇಕು ಎಂಬ ನಿರ್ಣಯ ಸಭೆಯಲ್ಲಿ ಅಂಗೀಕರಿಸಲಾಯಿತು. ಕಾರ್ಯಕ್ರಮದಲ್ಲಿ ಕರಿಯಪ್ಪ ಅಚೊಳ್ಳಿ, ಮಾರೆಪ್ಪ ಹರವಿ, ಅಂಜಿನಯ್ಯ ಕುರುಬದೊಡ್ಡಿ, ರಂಗಪ್ಪ ಯಾಪಲದಿನ್ನಿ, ಬಸವಂತರಾಯ ಗೌಡ, ರಮೇಶ್ ವೀರಾಪೂರ, ಜಿಲಾನಿ ಪಾಶಾ, ಎಂ. ರವಿ, ಡಿ.ಎಸ್. ಶರಣಬಸವ, ಕೆ.ಇ. ಕುಮಾರ, ಜಾನ್ ವೆಸ್ಲಿ, ನಸರತ್ ಸೇರಿದಂತೆ ವಿವಿಧ ಪಕ್ಷ ಮತ್ತು ಸಂಘಟನೆಯ ಮುಖಂಡರು ಭಾಗವಹಿಸಿದರು.

# ಪೊಲೀಸ್ ಸಿಬ್ಬಂದಿಗಳಿಗೆ ತರಬೇತಿ ಕಾರ್ಯಾಗಾರ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು:ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ. ಅವರ ನೇತೃತ್ವದಲ್ಲಿ ರವಿವಾರ ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಮಾನಸಿಕ ಆರೋಗ್ಯ ಕಾಯ್ದೆ 2017ರ ಕಾನೂನು ನಿಯಮಗಳ ಕುರಿತು ವಿಶೇಷ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ರಿಮ್ಸ್ ಆಸ್ಪತ್ರೆಯ ಮನಃಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಪ್ರಾಧ್ಯಾಪಕ ಡಾ. ರಮೇಶ್ ಬಾಬು ಹಾಗೂ ಅವರ ತಂಡದ ಸದಸ್ಯರು ಭಾಗವಹಿಸಿ, ಕಾಯ್ದೆಯ ಉದ್ದೇಶ, ಅದರ ಜಾರಿಗೆ ಸಂಬಂಧಿಸಿದ ಕಾನೂನು ಬದ್ಧ ಅಂಶಗಳು ಮತ್ತು ಮಾನಸಿಕ ಅಸ್ವಸ್ಥ ವ್ಯಕ್ತಿಗಳ ಹಕ್ಕುಗಳ ಕುರಿತು ವಿವರವಾದ ಉಪನ್ಯಾಸ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಮಾತನಾಡಿ, "ಮಾನಸಿಕ ಆರೋಗ್ಯ ಕಾಯ್ದೆ ಬಗ್ಗೆ ಪೊಲೀಸರಿಗಿರುವ ಅರಿವು ಸಮಾಜದಲ್ಲಿ ಮಾನವೀಯತೆ ಮತ್ತು ನ್ಯಾಯಬದ್ಧತೆ ಹೆಚ್ಚಿಸಲು ಸಹಕಾರಿಯಾಗುತ್ತದೆ" ಎಂದು ಹೇಳಿದರು.

ತರಬೇತಿ ಕಾರ್ಯಾಗಾರದಲ್ಲಿ ವಿವಿಧ ಠಾಣೆಗಳ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಸಕ್ರಿಯವಾಗಿ ಪಾಲ್ಗೊಂಡಿದ್ದರು

# ಮನ್ನಲಾಪೂರ ಗ್ರಾಮದ ರಸ್ತೆಗೆ ಶ್ರೀ ಸಿದ್ದಲಿಂಗೇಶ್ವರ ದೇವಸ್ಥಾನ ಸುಕ್ಷೇತ್ರ ಮನ್ನಲಾಪೂರ ರಸ್ತೆ ಎಂದು ನಾಮಕರಣಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು,ಅ.27–ತಾಲೂಕಿನ ಮನ್ನಲಾಪೂರ ಗ್ರಾಮದ ರಸ್ತೆಗೆ ಶ್ರೀ ಸಿದ್ದಲಿಂಗೇಶ್ವರ ದೇವಸ್ಥಾನ ಸು–ಕ್ಷೇತ್ರ ಮನ್ನಲಾಪೂರ ರಸ್ತೆ ಎಂದು ನಾಮಕರಣ ಮಾಡುವ ಮೂಲಕ ನಾಮಫಲಕ ಅಳವಡಿಸಬೇಕು ಎಂದು ಒತ್ತಾಯಿಸಿ ಮನ್ನಲಾಪೂರ ಗ್ರಾಮ ಪಂಚಾಯತಿ ಅಧ್ಯಕ್ಷರು ಹಾಗೂ ಗ್ರಾಮಸ್ಥರ ನೇತೃತ್ವದಲ್ಲಿ ಇಂದು ಮಹಾನಗರ ಪಾಲಿಕೆ ಆಯುಕ್ತರಿಗೆ ಮನೆ ಸಲ್ಲಿಸಿ ಒತ್ತಾಯಿಸಿದೆ. ನಗರದ ಗೋಶಾಲೆ ರಸ್ತೆಗೆ ಹೊಂದಿಕೊಂಡಿರುವ ಮನ್ನಲಾಪೂರ ಗ್ರಾಮಕ್ಕೆ ಹೋಗುವ ರಸ್ತೆಗೆ ಬೇರೆ ಯಾವುದೇ ಹೆಸರು ಇಡದೇ ಶ್ರೀ ಸಿದ್ಧಲಿಂಗೇಶ್ವರ ದೇವಸ್ಥಾನ ಸುಕ್ಷೇತ್ರ ಮನ್ನಲಾಪೂರ ರಸ್ತೆ ಎಂದೇ ನಾಮಕರಣ ಮಾಡಬೇಕು ಎಂದು ಆಗ್ರಹಿಸಲಾಯಿತು. ಬೇರೆ ಯಾವುದೇ ಹೆಸರು ನಾಮಕರಣಕ್ಕೆ ಅವಕಾಶ ಮಾಡಿಕೊಡಬಾರದು ಎಂದು ಆಯುಕ್ತರ ಗಮನಕ್ಕೆ ತರಲಾಯಿತು. ನಗರದಿಂದ ಕೇವಲ 4 ಕಿ.ಮೀ. ಅಂತರದಲ್ಲಿ ಈ ಗ್ರಾಮದಲ್ಲಿ ಐತಿಹಾಸಿಕ ಪರಂಪರೆಯ ದೇವಾಲಯಗಳು ಇವೆ. ಶ್ರೀಶೈಲ ಪೀಠದ ರೀತಿಯಲ್ಲಿ ಪ್ರಸಿದ್ಧಿ ಹೊಂದಿದ ಪುರಾತನ ಶ್ರೀ ಸಿದ್ಧಲಿಂಗೇಶ್ವರ ದೇವಸ್ಥಾನ ಇರುವುದರಿಂದ ಇತಿಹಾಸದಲ್ಲಿ ಮನ್ನಲಾಪೂರ ಎಂಬ ಗ್ರಾಮದ ರಸ್ತೆ ಇದೆ ಎಂಬುದು ಹಾಗೆಯೇ ಉಳಿಯಲು ಮತ್ತು ಪುರಾತನ ಕಾಲದಿಂದಲೂ ಬಂದಂತಹ ಮನ್ನಲಾಪೂರ ಗ್ರಾಮದ ರಸ್ತೆ ಎಂದು ಗುರುತಿಸಲು ದಿ.28 ರಂದು ನಡೆಯುವ ಮಹಾನಗರ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ಕೂಲಂಕುಶವಾಗಿ ಚರ್ಚಿಸಿ ತೀರ್ಮಾನಿಸಿ, ಮನ್ನಲಪೂರು ಗ್ರಾಮದ ರಸ್ತೆಗೆ ಶ್ರೀ ಸಿದ್ದಲಿಂಗೇಶ್ವರ ದೇವಸ್ಥಾನ ಸು–ಕ್ಷೇತ್ರ ಮನ್ನಲಾಪೂರ ರಸ್ತೆ ಎಂದು ನಾಮಕರಣ ಮಾಡಬೇಕೆಂದು ಒತ್ತಾಯಿಸಲಾಗಿದೆ.

ಈ ಸಂದರ್ಭದಲ್ಲಿ ಗ್ರಾಂ ಪಂ. ಅಧ್ಯಕ್ಷರಾದ ರಾಘವೇಂದ್ರ ಬೋರೆಡ್ಡಿ, ಉಪಾಧ್ಯಕ್ಷರು ಉಮಾ ಸಿದ್ದಲಿಂಗಯ್ಯ, ಸದಸ್ಯರಾದ ಈಶ್ವರಿ ಆಂಜನೇಯ, ನಾಗಮ್ಮ, ಬೂದೆಪ್ಪ ಸರ್ವ ಸದಸ್ಯರು ಇದ್ದರೂ.

# ಅ.29ರಂದು ವಿವಿಧ ಜಯಂತಿಗಳ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಅಕ್ಟೋಬರ್ 27–ಇಲ್ಲಿನ ಜಿಲ್ಲಾಡಳಿತದ ವತಿಯಿಂದ ಇದೇ ನವಂಬರ್ 8ರಂದು ಕನಕ ಜಯಂತಿ ಹಾಗೂ 11ರಂದು ವೀರವನಿತೆ ಒನಕೆ ಓಬವ್ವ ಜಯಂತಿ ಆಚರಣೆ ಕುರಿತು ಪೂರ್ವಭಾವಿ ಸಭೆಯನ್ನು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಅಕ್ಟೋಬರ್ 29ರ ಬೆಳಿಗ್ಗೆ 11ಗಂ–ಟೆಗೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ವಿವಿಧ ಸಮಾಜದ ಮುಖಂಡರು ಸಭೆಗೆ ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ವಿಪತ್ತು ನಿರ್ವಹಣಾ ತರಬೇತಿ ಶಿಬಿರ:
## ರೋವರ್ ಮತ್ತು ರೇಂಜರ್ ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ದೊಡ್ಡಬಳ್ಳಾಪುರದ ಡಾ. ಅನಿಬೆಸೆಂಟ್ ಸ್ಕೌಟ್ – ಗೈಡ್ ರಾಜ್ಯ ತರಬೇತಿ ಮತ್ತು ಶಿಬಿರ ಕೇಂದ್ರದಲ್ಲಿ ಅಕ್ಟೋಬರ್ 14 ರಿಂದ 20 ರವರೆಗೆ ಯುವ ಆಪದ ಮಿತ್ರ ಯೋಜನೆಯ ಅಡಿಯಲ್ಲಿ ನಡೆದ " ವಿಪತ್ತು ನಿರ್ವಹಣಾ ತರಬೇತಿ ಶಿಬಿರ" ದಲ್ಲಿ ಲಿಂಗಸುಗೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರೋವರ್ – ರೇಂಜರ್ ವಿದ್ಯಾರ್ಥಿಗಳು ಪಾಲ್ಗೊಂಡು ಯಶಸ್ವಿಯಾಗಿ ತರಬೇತಿ ಪೂರಸಿ ಬಂದರು.

ತರಬೇತಿ ಪೂರೈಸಿ ಬಂದ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಪ್ರಾಂಶುಪಾಲ ಡಾ. ವೆಂಕಟನಾರಯಣ ಎಮ್ ಅವರು ವಿಪತ್ತು ನಿರ್ವಹಣ ತರಬೇತಿ ನಮ್ಮ ವಿದ್ಯಾರ್ಥಿಗಳಿಗೆ ಅವಶ್ಯವಾಗಿತ್ತು. ಈ ತರಬೇತಿ ಪಡೆದ ವಿದ್ಯಾರ್ಥಿಗಳು ಪ್ರವಾಹ, ಅಗ್ನಿ ಅವಘಡ ಇನ್ನಿತರ ಅಪಘಾತದ ಸಂದರ್ಭದ ಆಪತ್ಕಾಲದಲ್ಲಿ ಸ್ವಯಂ ಸೇವಕರಾಗಿ ಕೆಲಸ ಮಾಡುವ ಮೂಲಕ ಆಪತ್ತಿನಲ್ಲಿ ಇರುವವರನ್ನು ರಕ್ಷಿಸಲು ಸಹಾಯವಾಗುವುದು. ಸ್ವಯಂ ಪ್ರೇರಣೆಯಿಂದ ತಮ್ಮ ಜೀವ ಪಣಕ್ಕೊಡ್ಡಿ ಕೆಲಸ ಮಾಡಿದಾಗ ಈ ತರಬೇತಿ ಸಾರ್ಥಕತೆ ಆಗುವುದು. ಯುವಕರು ಇಂತಹ ತರಬೇತಿಗಳಿಂದ ಪ್ರೇರಿತರಾಗಿ ಸಮಾಜ ಸೇವೆ ಮಾಡಬೇಕೆಂದರು. ಯಶಸ್ವಿಯಾಗಿ ತರಬೇತಿ ಪೂರೈಸಿದ ರೋವರ್ ರೇಂಜರ್ ಅವರನ್ನು ಶ್ಲಾಘಿಸಿ ಅಭಿನಂದಿಸಿದರು.

## ಮೆಣಸಿನಕಾಯಿ ಬೆಳೆಯ ರಾಷ್ಟ್ರೀಯ ಸಮ್ಮೇಳನ

# ವೈಜ್ಞಾನಿಕ ರೀತಿ ಮೆಣಸಿನಕಾಯಿ ಬೆಳೆಯಲು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಅ.27-ರೈತರು ವೈಜ್ಞಾನಿಕಪದ್ದತಿಯಲ್ಲಿಮೆಣಸಿನಕಾಯಿ ಬೆಳೆಯಲು ಮುಂದಾಗಬೇಕು. ಅಂದಾಗ ಮಾತ್ರ ಹೆಚ್ಚಿನ ಇಳುವರಿ ಪಡೆಯಬಹುದಲ್ಲದೇಉತ್ತಮಬೆಲೆ ಸಿಗಲುಸಾಧ್ಯವಾಗಲಿದೆಎಂದುರಾಜ್ಯ ಕೃಷಿಬೆಲೆಆಯೋಗದಅಧ್ಯಕ್ಷಅಶೋಕ ದಳವಾಯಿ ಹೇಳಿದರು.

ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಸಭಾಭವನದಲ್ಲಿ ಭಾರತೀಯತೋಟಗಾರಿಕೆಅಕಾಡೆಮಿ, ಅಡ್ವಾನ್ಸ ಡ್‌ಟ್ರೇನಿಂಗ್‌ಇನ್‌ಪ್ಲಾಂಟ್ ಬ್ರೀಡಿಂಗ್‌ಸಹಯೋಗದಲ್ಲಿಹಮ್ಮಿಕೊಂಡ ಮೆಣಸಿನಕಾಯಿರಾಷ್ಟ್ರೀಯಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಉತ್ಪಾದನೆ ಜೊತೆಗೆ ಗುಣಮಟ್ಟ ಕಾಯ್ದುಕೊಳ್ಳುವುದುಮುಖ್ಯವಾಗಿದೆ. ಮೊದಲು ಗುಣಮಟ್ಟದ ಬೀಜ ಮಾರುಕಟ್ಟೆಯಲ್ಲಿಲಭ್ಯವಾಗಬೇಕು.

ರೈತರುಸಹಗುಣಮಟ್ಟದಬೀಜವನ್ನು ಖರೀದಿಸುವತ್ತ ಗಮನಹರಿಸುವ ಕೆಲಸವಾಗಬೇಕು ಎಂದರು. ವಾತಾವರಣಕೂಡಾಬೆಳೆಯಮೇಲೆ ಪರಿಣಾಮಬೀರಲಿದ್ದು,ರೋಗಗಳನ್ನು ನಿಯಂತ್ರಿಸುವುದು ಅಗತ್ಯವಾಗಿದೆ. ವೈಜ್ಞಾನಿಕಪದ್ಧತಿಯಲ್ಲಿಬೆಳೆಬೆಳೆದಲ್ಲಿ ಮಾತ್ರಲಾಭದಾಯಕಬೆಳೆಯಾಗಲಿದೆ. ಅತಿಯಾದ ರಾಸಾಯನಿಕ ಬಳಕೆ ಮಾಡುವುದನ್ನುಬಿಡಬೇಕು.ಇದರಿಂದ ಗುಣಮಟ್ಟದ ಬೆಳೆ ಬೆಳೆಯಲು ಸಾಧ್ಯವಾಗುತ್ತದೆ.ಉತ್ಪಾದನೆಜೊತೆ ಗುಣಮಟ್ಟ ಕಾಯ್ದುಕೊಳ್ಳುವುದು ಮುಖ್ಯವಾಗುತ್ತದೆ.ಭಾರತದೇಶಕೃಷಿ ಉತ್ಪಾದನೆಯಲ್ಲಿಮುಂಚೂಣಿಯಲ್ಲಿದ್ದು, ಮೆಣಸಿನಕಾಯಿಯನ್ನುಶೇ.40ರಷ್ಟು ಬೆಳೆಯಲಾಗುತ್ತಿದೆ.ವಿವಿಧದೇಶಗಳಿಗೆ ರಫ್ತು ಮಾಡಲಾಗುತ್ತಿದೆ. ದೇಶದ ಆಂಧ್ರ,ತೇಲಂಗಾಣ,ಮಧ್ಯಪ್ರದೇಶ, ಕೋರಿಯಾಹಾಗೂಒಡಿಸ್ಸಾ ರಾಜ್ಯಗಳಲ್ಲಿ ಮೆಣಸಿನಕಾಯಿಬೆಳೆಯಲಾಗುತ್ತಿದೆ ಎಂದು ದಳವಾಯಿ ತಿಳಿಸಿದರು.

ನವದೆಹಲಿಯ ಐಸಿಎಸ್‌ಆರ್‌ನ ಮಾಜಿಡಿಡಿಜಿಡಾ.ಎನ್.ಕೆ.ಕೃಷ್ಣಕುಮಾರ ಮಾತನಾಡಿ,ಕರ್ನಾಟಕದಲ್ಲಿಬ್ಯಾಡಗಿ ಮೆಣಸಿನಕಾಯಿ ಹೆಚ್ಚು ಖ್ಯಾತಿ ಪಡೆದರೆ,ಗುಜರಾತದಲ್ಲಿಕೃಷ್ಣಪ್ರಭಾ ಮೆಣಸಿನಕಾಯಿ ಖ್ಯಾತಿ ಪಡೆದಿದೆ. ಬ್ಯಾಡಗಿಮೆಣಸಿಣಕಾಯಿಯಲ್ಲಿನಾನಾ ಬಗೆಗಳಿವೆ. ಮೆಣಸಿನಕಾಯಿ ಬೆಳೆಗೆ ಅಂಟಿಕೊಳ್ಳುವರೋಗನಿಯಂತ್ರಣಕ್ಕೆ ಪರಿಹಾರವಿದೆ.ರೈತರುರಾಸಾಯನಿಕ ಬಳಸುತ್ತಿರುವದರಿಂದ ರಫ್ತಿಗೆ ಅಡಚಣೆ ಆಗಿದೆ. ರಾಸಾಯನಿಕ ಬಳಕೆಕಡಿಮೆಯಾಗಬೇಕುಎಂದರು.

ಔರಂಗಾಬಾದನಎಟಿಪಿಬಿಆರ್‌ನ ನಿರ್ದೇಶಕರಾದ ಸುರೀಂದ್ರ ಟಿಕೂ ಮಾತನಾಡಿ,ಈಮೊದಲುತರಕಾರಿಗಳನ್ನು ಋತುಮಾನತಕ್ಕಂತೆಬೆಳೆಯಲಾಗುತ್ತಿದ್ದು, ಈಗ ಎಲ್ಲ ಸಮಯದಲ್ಲಿ ತರಕಾರಿ ಬೆಳೆಯಬಹುದಾಗಿದೆ.ಮೆಣಸಿನಕಾಯಿ ಮಸಾಲೆಪದಾರ್ಥಗಳಲ್ಲಿಒಂದಾಗಿದ್ದು, ಭಾರತದವಿಭಿನ್ನಪರಿಸರವಲಯಗಳಲ್ಲಿ ಬೆಳೆದಮೆಣಸಿನಕಾಯಿಪ್ರಭೇದಗಳು ತಮ್ಮದೇ ಆದ ವೈಶಿಷ್ಯತೆಗಳನ್ನು ಹೊಂದಿದೆ ಎಂದರು.

ತೋಟಗಾರಿಕೆವಿಶ್ವವಿದ್ಯಾಲಯದ ಕುಲಪತಿಡಾ.ವಿಷ್ಣುವರ್ಧನಅಧ್ಯಕ್ಷತೆ ವಹಿಸಿ ಮಾತನಾಡಿ, 210 ಕ್ಕೂ ಹೆಚ್ಚು ಪ್ರತಿನಿಧಿಗಳು,38ಆಹ್ವಾನಿತಭಾಷಣಕಾರರು ಮತ್ತು 20 ಉದ್ಯಮ ತಜ್ಞರನ್ನು ಹೊಂದಿರುವ ಈ ಸಮ್ಮೇಳನವು ಮೆಣಸಿನಕಾಯಿ ಸಮಗ್ರ ಮಾಹಿತಿ ರೂಪಿಸಲುಪರಿಪೂರ್ಣವೇದಿಕೆಯನ್ನು ಒದಗಿಸುತ್ತದೆ. ಕೃಷ್ಣಪ್ರಭಾ ರುದ್ರ, ಕೃಷ್ಣಪ್ರಭಾಶಂಕರ,ಸಿದ್ಧ-1ಮತ್ತು2, ಕೃಷ್ಣಪ್ರಭಾಶುಕಾಮತ್ತುಉಅ94/68 ನಂತಹಆರುಉನ್ನತ-ಕಾರ್ಯಕ್ಷಮತೆಯ ಪ್ರಭೇದಗಳನ್ನುಬಿಡುಗಡೆಮಾಡಿದ್ದೇವೆ. ಆಣ್ವಿಕಸಂತಾನೋತ್ಪತ್ತಿಮತ್ತುರೋಗ ರೋಗನಿರ್ಣಯದಲ್ಲಿನಮ್ಮನಿರಂತರ ಪ್ರಯತ್ನಗಳು ಹಾರ್ಟ್ ಸಾಂಸ್ಕೃತಿಕ ವಿಜ್ಞಾನದಲ್ಲಿನಾವೀನ್ಯತೆಗಾಗಿನಮ್ಮ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ ಎಂದರು.

ಸಮ್ಮೇಳನದಪ್ರಥಮದಿನದಂದು ಒಟ್ಟುಎರಡುತಾಂತ್ರಿಕಗೋಷ್ಠಿಗಳಲಿ 15 ಜನ ವಿಜ್ಞಾನಿಗಳು ತಳಿ ವೈವಿಧ್ಯತೆ ಸಂಪತ್ತಿನನಿರ್ವಹಣೆಮತ್ತುಉಪಯೋಗ ಮತ್ತುಪಾರಂಪರಿಕಮತ್ತುಆಣ್ವಿಕತಳಿ ಅಭಿವೃದ್ಧಿಮೂಲಕಉತ್ಪಾದನೆಮತ್ತು ಗುಣಮಟ್ಟವೃದ್ಧಿಸುವಸಂಶೋಧನಾ ಪ್ರಬಂಧಗಳನ್ನುಮಂಡಿಸಿದರೆ,ಸಾಯಂಕಾಲ ತಜ್ಞರಸಮೂಹಚರ್ಚೆಯಲ್ಲಿ8ಜನ ತಜ್ಞರು ರೈತರ ಸಮಸ್ಯೆಗಳು ಮತ್ತು ತಂತ್ರಜ್ಞಾನ ವಿಸ್ತರಣಾ ಅಗತ್ಯತೆಗಳ ಕುರಿತುಹಲವಾರು ವಿಷಯಗಳನ್ನು ವಿಶ್ಲೇಷಿಸಿ,ನಿರ್ದಿಷ್ಟಶಿಫಾರಸ್ಸು ಗಳನ್ನು ಪಟ್ಟಿ ಮಾಡಲಾಯಿತು.

ಈ ಸಂದರ್ಭದಲ್ಲಿ ಭಾರತೀಯ ತೋಟಗಾರಿಕೆಅಕಾಡೆಮಿಯಲೋಗೋ ಬಿಡುಗಡೆ ಮಾಡಲಾಡಲಾಯಿತು. ಸಂಶೋಧನನಿರ್ದೇಶಕಡಾ.ಬಿ.ಪಕ್ರದ್ದಿನ, ಪ್ರಾಧ್ಯಾಪಕರು ಮತ್ತು ತರಬೇತಿ ಸಂಸ್ಥೆಯ ಮುಖ್ಯಸ್ಥ ಡಾ.ವಸಂತ ಗಾಣಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು. ಸಭಾಭವನದ ಆವರಣದಲ್ಲಿಮೆಣಸಿನಕಾಯಿವಿವಿಧ ತಳಿಗಳನ್ನುಪ್ರದರ್ಶನಕ್ಕೆಇಡಲಾಗಿತ್ತು.

# ರೈತರ ಪ್ರಗತಿಗೆ ಖಂಡ್ರೆ ಮನೆತನದ ಶ್ರಮ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಅ.27: ಜಿಲ್ಲೆಯ ರೈತರ ಪ್ರಗತಿಗೆ ಖಂಡ್ರೆ ಮನೆತನ ಅವಿರತವಾಗಿ ಶ್ರಮ ವಹಿಸುತ್ತಿದೆ ಎಂದುಭಾತಂಬ್ರಾನಿರಂಜನಸಂಸ್ಥಾನ ಮಠದಶಿವಯೋಗೀಶ್ವರಸ್ವಾಮೀಜಿ ಹೇಳಿದರು.

ತಾಲೂಕಿನಹುಣಜಿ(ಎ)ಸಮೀಪದ ಮಹಾತ್ಮಗಾಂಧಿ ಸಹಕಾರ ಸಕ್ಕರೆ ಕಾರ್ಖಾನೆಆವರಣದಲ್ಲಿಭಾನುವಾರ ಆಯೋಜಿಸಿದ್ದ2025-26ನೇಸಾಲಿನ ಕಬ್ಬುನುರಿಸುವಹಂಗಾಮಿನಬಾಯ್ಲರ್ ಪ್ರದೀಪನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವಹಿಸಿಅವರುಮಾತನಾಡಿದರು.

ಜಿಲ್ಲೆಯಲ್ಲಿ ರೈತರ ಆರ್ಥಿಕ ಪ್ರಗತಿಗಾಗಿಮಾಜಿಸಚಿವಶತಾಯುಷಿ ಡಾ.ಭೀಮಣ್ಣಖಂಡ್ರೆ ಅವರುಸಕ್ಕರೆ ಕಾರ್ಖಾನೆಕಟ್ಟಿದರು.ಅವರಪುತ್ರರು ಕಾರ್ಖಾನೆಯನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡುಹೋಗುತ್ತಿದ್ದಾರೆ ಎಂದುಮೆಚ್ಚುಗೆವ್ಯಕ್ತಪಡಿಸಿದರು.

ಕಾರ್ಖಾನೆಅಭಿವೃದ್ಧಿಯಲ್ಲಿಕಾರ್ಮಿಕರ ದುಡಿಮೆಯುಮುಖ್ಯವಾಗಿರುತ್ತದೆ. ಕಾರ್ಮಿಕರು ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ ಕಾರ್ಖಾನೆ ಅಧ್ಯಕ್ಷ ಅಮರಕುಮಾರ ಖಂಡ್ರೆ ಮಾತನಾಡಿ, ರೈತರ ಆಶೀರ್ವಾದ ದಿಂದಎರಡನೇಅವಧಿಗೆಕಾರ್ಖಾನೆ ಅಧ್ಯಕ್ಷನಾಗಿದ್ದೇನೆ.

ಈಬಾರಿಯಆಡಳಿತಮಂಡಳಿಯಲ್ಲಿ ಯುವಕರಿಗೆಆದ್ಯತೆನೀಡಲಾಗಿದೆ. ಎಲ್ಲ ನಿರ್ದೇಶಕರು ಕಾರ್ಖಾನೆ ಬೆಳವಣಿಗೆಗೆಹೆಚ್ಚಿನಮುತುವರ್ಜಿ ವಹಿಸಬೇಕು ಎಂದು ತಿಳಿಸಿದರು.

ಈ ಕಾರ್ಖಾನೆಯ ಉಪಾಧ್ಯಕ್ಷೆ ನಳಿನಿ ಸುನಿಲ ಪಾಟೀಲ್, ನಿರ್ದೇಶಕರಾದ ಮಲ್ಲಿಕಾರ್ಜುನ ಪಾಟೀಲದ,ಅಂಕೋಶಪಾಟೀಲ್, ಸಂತೋಷಕುಮಾರ ಪಾಟೀಲ್, ಅಶೋಕಕುಮಾರಕೋಟಿ, ಶಂಕರ ಚವ್ಹಾಣ, ವಿನಾಯಕ ಬಿರಾದಾರ, ಸಂಜೀವರೆಡ್ಡಿಗೊಂಡೆ,ಸಂದೀಪಮಾನೆ, ಮೋಹನಪ್ಪ ಪಂಚಾಳ, ಸುರೇಖಾ ಶೆಟಕಾರ, ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಣ್ಣ,ಕಬ್ಬುವಿಭಾಗದಪ್ರಧಾನ ವ್ಯವಸ್ಥಾಪಕ ವಿನೋದ ಕೋಟೆ, ಬಿ.ಎಂ.ಪಾಟೀಲ, ಚಿದಾನಂದ, ಉಮೇಶಚಿದ್ರಿ,ರೇವಣೇಶ,ಸಂಜು ಖಂಡೆ,ಗುರುನಾಥಸ್ವಾಮಿಸೇರಿದಂತೆ ಹಲವರು ಇದ್ದರು.

ಕಚೇರಿ ಅಧೀಕ್ಷಕ ರಮೇಶ ಚಿದ್ರಿ ನಿರೂಪಿಸಿ, ವಂದಿಸಿದರು.

# ಕಾಲುಬಾಯಿ ಜ್ವರ ರೋಗ ಲಸಿಕಾ ಕಾರ್ಯಕ್ರಮ ಯಶಸ್ವಿಗೊಳಿಸಿ:ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ, ಅ.27 : ರಾಷ್ಟ್ರೀಯ ಜಾನುವಾರು ರೋಗನಿಯಂತ್ರಣ ಕಾರ್ಯಕ್ರಮದಡಿಬೀದರಜಿಲ್ಲೆಯಾದ್ಯಂತ ಇದೇನವೆಂಬರ್.3ರಿಂದಡಿಸೆಂಬರ್.3 ರವರೆಗೆಜಾನುವಾರುಗಳಿಗೆಎಂಟನೇ ಹಂತದಕಾಲುಬಾಯಿಜ್ವರರೋಗದ ಲಸಿಕೆ ನೀಡಲಾಗುತ್ತಿದ್ದು, ಈ ಕಾರ್ಯಕ್ರಮಯಶಸ್ವಿಗೊಳಿಸುವಂತೆ ಅಪರಜಿಲ್ಲಾಧಿಕಾರಿಶಿವಾನಂದಕರಾಳೆ ತಿಳಿಸಿದರು.

ಅವರುಸೋಮವಾರಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿರಾಷ್ಟ್ರೀಯಜಾನುವಾರು ರೋಗಗಳನಿಯಂತ್ರಣಕಾರ್ಯಕ್ರಮ ಸಂಬಂಧಜಿಲ್ಲಾಮಟ್ಟದನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಎಲ್ಲ ಗ್ರಾಮಗಳಲ್ಲಿ ಎಲ್ಲಜಾನುವಾರುಗಳಿಗೆಈಲಸಿಕಾ ಚುಚ್ಚುಮದ್ದು ಲಭ್ಯವಾಗುವಂತೆ ವ್ಯಾಪಕ ಪ್ರಚಾರ ಬೇಕು.

ಗ್ರಾಮಮಟ್ಟದಲ್ಲಿಪಿಡಿಓ, ಆಶಾ ಅಂಗನವಾಡಿಕಾರ್ಯಕರ್ತೆಯರು, ಕೃಷಿ ಸಖಿಯರು, ಕೆ.ಎಂ.ಎಫ್ ಹಾಗೂ ಶಿಕ್ಷಣ ಇಲಾಖೆ ಸೇರಿ ಈ ಲಸಿಕೆಕಾರ್ಯಕ್ರಮಕುರಿತುಪ್ರಚಾರ ಮಾಡುವಂತೆ ಶಿವಾನಂದ ಕರಾಳೆ ತಿಳಿಸಿದರು.

ಎಲ್ಲಗ್ರಾಮಗಳಲ್ಲಿಗ್ರಾಮಪಂಚಾಯತ ವತಿಯಿಂದಡಂಗೂರಸಾರುವಂತೆ ಸೂಚಿಸಿದರು. ಜಿಲ್ಲೆಯಲ್ಲಿಕಳೆದ5 ವರ್ಷಗಳಲ್ಲಿಒಂದುಲಕ್ಷಜಾನುವಾರು ಕಡಿಮೆಯಾಗಿರುವುದಕ್ಕೆ ಕಳವಳ ವ್ಯಕ್ತಪಡಿಸಿದಅಪರಜಿಲ್ಲಾಧಿಕಾರಿಗಳು ಇಂಟಿಗ್ರೇಟೆಡ್‌ಫಾರ್ಮಿಂಗ್‌ಗೆಹೆಚ್ಚು ಒತ್ತು ನೀಡುವ ಕುರಿತು ರೈತರಲ್ಲಿ ಜಾಗೃತಿಮೂಡಿಸುವಂತೆಅಧಿಕಾರಿಗಳಿಗೆ ತಿಳಿಸಿದರು.

ಲಸಿಕೆಗಳು, ಸಿರೀಂಜ್ ಹಾಗೂ ತುರ್ತು ಔಷಧಿಗಳು ಸರಿಯಾಗಿ ಲಭ್ಯವಾಗುವಂತೆನೋಡಿಕೊಳ್ಳಬೇಕೆಂದು ಸಹ ತಿಳಿಸಿದರು.

ಪಶು ವೈದ್ಯಕೀಯ ಇಲಾಖೆಯ ಉಪನಿರ್ದೇಶಕಡಾ.ನರಸಪ್ಪಎ.ಡಿ. ಮಾತನಾಡಿ, ತಾಲ್ಲೂಕಾ ಹಾಗೂ ಗ್ರಾಮ ಮಟ್ಟದಲ್ಲಿ ಅಧಿಕಾರಿ ಹಾಗೂ ಸಿಬ್ಬಂದಿಗಳ ತಂಡಗಳನ್ನು ರಚಿಸಲಾಗಿದೆ.ರೈತರಮನೆಬಾಗಿಲಿಗೆ ತೆರಳಿ ಜಾನುವಾರುಗಳಿಗೆ ಲಸಿಕೆ ಹಾಕಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಕಾರ್ಯದರ್ಶಿ ಸೂರ್ಯಕಾಂತಬಿರಾದಾರಹಾಘೂ ತಾಲ್ಲೂಕು ಮಟ್ಟದ ಪಶು ಇಲಾಖೆ ಅಧಿಕಾರಿಗಳುಸೇರಿದಂತೆಇತರರು ಉಪಸ್ಥಿತರಿದ್ದರು.

## ಕೆಯುಡಬ್ಲ್ಯೂಜೆ ಚುನಾವಣೆ: 784 ಸ್ಥಾನಕ್ಕೆ 1447 ನಾಮಪತ್ರ



ಬೆಂಗಳೂರು: ಅ.27:ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) 2025-2028ನೇ ಸಾಲಿಗೆರಾಜ್ಯ ಘಟಕ ಮತ್ತು31ಜಿಲ್ಲೆಗಳಜಿಲ್ಲಾ ಘಟಕಗಳ(ಅಧ್ಯಕ್ಷರು, ಉಪಾಧ್ಯಕ್ಷರು,ಪ್ರಧಾನ ಕಾರ್ಯದರ್ಶಿ,ಕಾರ್ಯದರ್ಶಿಗಳು, ಖಜಾಂಚಿ, ಜಿಲ್ಲಾ ಕಾರ್ಯಕಾರಿ ಸಮಿತಿಮತ್ತುರಾಜ್ಯ ಕಾರ್ಯಕಾರಿ ಸಮಿತಿಯ ಒಟ್ಟು784 ಸ್ಥಾನಗಳಿಗೆ ನಾಮಪತ್ರ ಸಲ್ಲಿಸಲುಕೊನೆಯ ದಿನ 27-10-2025ರಂದು ಒಟ್ಟು1447 ಸ್ಪರ್ಧಾಕಾಂಕ್ಷಿಗಳುನಾಮಪತ್ರಗಳನ್ನು ಸಲ್ಲಿಸಿದ್ದಾರೆ.

ದಿನಾಂಕ: 28-10-2025 ರಂದುಮಂಗಳವಾರ ನಾಮಪತ್ರ ಪರಿಶೀಲನೆ ಜಿಲ್ಲಾಮತ್ತುರಾಜ್ಯ ಘಟಕಗಳಲ್ಲಿ ಏಕಕಾಲಕ್ಕೆ ನಡೆಯಲಿದೆ. ದಿನಾಂಕ:30-10-2025 ರಂದು ಗುರುವಾರ ನಾಮಪತ್ರ ಹಿಂಪಡೆಯಲುಕೊನೆಯದಿನವಾಗಿರುತ್ತದೆ. ದಿನಾಂಕ:09-11-2025ರಂದು ಭಾನುವಾರ ಜಿಲ್ಲಾ ಮತ್ತು ರಾಜ್ಯ ಘಟಕದಲ್ಲಿ ಏಕಕಾಲಕ್ಕೆ ಮತದಾನ ನಡೆಯಲಿದೆಎಂದುಕೆಯುಡಬ್ಲುಜೆ ಮುಖ್ಯ ಚುನಾವಣಾಧಿಕಾರಿ ಎನ್ ರವಿಕುಮಾರ(ಟೆಲೆಕ್ಸ್ )ತಿಳಿಸಿದ್ದಾರೆ.

## ಕೊನೆಯ ದಿನವೂ ಸಲ್ಲಿಕೆಯಾಗದ ನಾಮಪತ್ರ ಯಾವ ಹುದ್ದೆಗೂ ಇಲ್ಲ ನಾಮಪತ್ರ

ಬೀದರ್: ಅ 27: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬೀದರ್ ಜಿಲ್ಲಾ ಘಟಕದ2025-28ನೇಸಾಲಿನ ಚುನಾವಣೆಗೆ ಸಂಬಂಧಿಸಿದಂತೆ ಅಕ್ಟೋಬರ್27ರ,ಸೋಮವಾರ ಯಾವುದೇ ನಾಮಪತ್ರ ಸಲ್ಲಿಕೆ ಆಗಿಲ್ಲ.

ಅಕ್ಟೋಬರ್ 19ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದ್ದು,ಇದುವರೆಗೆ ಯಾವ ಹುದ್ದೆಗೂ ನಾಮಪತ್ರ ಸಲ್ಲಿಕೆಯಾಗಿಲ್ಲ. ಅಕ್ಟೋಬರ್ 27ರಂದು ನಾಮಪತ್ರ ಸಲ್ಲಿಕೆಗೆಕೊನೆಯ ದಿನವಾಗಿತ್ತು. ಯಾವಹುದ್ದೆಗೂ ನಾಮಪತ್ರಗಳುಸಲ್ಲಿಕೆಯಾಗದ ಕಾರಣ ಕಣದಲ್ಲಿ ಯಾವುದೇ ಅಭ್ಯರ್ಥಿಗಳು ಇಲ್ಲ ಎಂದು ಶಶಿಕಾಂತಎಸ್.ಶೆಂಬೆಳ್ಳಿ,ಜಿಲ್ಲಾ ಚುನಾವಣಾಧಿಕಾರಿ,ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ,ಬೀದರ್ ಜಿಲ್ಲಾ ಘಟಕ ತಿಳಿಸಿದ್ದಾರೆ.

# ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಅಧಿಕಾರಿಗಳು ಕೈಜೋಡಿಸಬೇಕು: ಬಿ. ಫೌಜಿಯಾ ತರನ್ನುಮ್ಮ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಅ.27:ಕಲಬುರಗಿ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿಸುವನಿಟ್ಟಿನಲ್ಲಿಸಂಬಂಧಪಟ್ಟ ಎಲ್ಲಾ ಇಲಾಖೆಯ ಅಧಿಕಾರಿಗಳು ಕೈಜೋಡಿಸಬೇಕೆಂದು ಕಲಬುರಗಿ ಜಿಲ್ಲಾಧಿಕಾರಿಬಿ.ಫೌಜಿಯಾತರನ್ನುಮ್ ಅವರುಹೇಳಿದರುಸೋಮವಾರದಂದು ಜಿಲ್ಲಾಧಿಕಾರಿಗಳಕಚೇರಿಸಭಾಂಗಣದಲ್ಲಿ ವಿವಿಧ ಯೋಜನೆಗಳ ಜಿಲ್ಲಾಮಟ್ಟದ ಸಮನ್ವಯ ಸಮಿತಿ ಅಧ್ಯಕ್ಷತೆವಹಿಸಿ ಮಾತನಾಡಿದಅವರು,ಇತ್ತೀಚಿನದಿನಗಳ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಿನ ಪ್ರಮಾಣದಲ್ಲಿ ಕಂಡು ಬರುತ್ತಿದ್ದು, ಅಧಿಕಾರಿಗಳುನಿರ್ಲಕ್ಷ್ಯವಹಿಸದೆಕೆಲಸ ನಿರ್ವಹಿಸಿ,ಹಳ್ಳಿಗಳಲ್ಲಿನಡೆಯುವಬಾಲ್ಯ ವಿವಾಹದ ಕುರಿತು ಮಾಹಿತಿ ಪಡೆದು ಇದನ್ನುತಡೆಯಬೇಕು.ಬಾಲವಿವಾಹ ತಡೆದುಅತಿಹೆಚ್ಚುಪ್ರಕರಣಗಳುದಾಖಲಿಸಿ ಕ್ರಮಕೈಗೊಳ್ಳಬೇಕು. ಸಂಬಂಧಪಟ್ಟ ಅಧಿಕಾರಿಗಳೂ ಇದನ್ನು ನಿರ್ಲಕ್ಷ್ಯ ವಹಿಸಿದ್ದಲ್ಲಿ ಶಿಸ್ತಿನ ಕ್ರಮಕ್ಕೆ ಶಿಫಾರಸು ಮಾಡಲಾಗುವುದು ಎಚ್ಚರಿಸಿದರು.

ಸೀಮಂತ ಕಾರ್ಯಕ್ರಮವು ಕೇವಲ ಅಂಗನವಾಡಿ ಕೇಂದ್ರಗಳಲ್ಲಿ ಸಿಮಿತವಾಗದೇ ದೊಡ್ಡ ಪ್ರಮಾಣ ಕಾರ್ಯಕ್ರಮವನ್ನು ಆಯೋಜನೆ ಮಾಡಬೇಕು.ಜತೆಗೆಕಾರ್ಯಕ್ರಮದಲ್ಲಿ ಯಾವ ಆಹಾರವು ಪೌಷ್ಠಿಕಾಂಶದಿಂದ ಕೂಡಿರುತ್ತದೆ ಎಂಬುವುದನ್ನು ಅಧಿಕಾರಿಗಳುಜಾಗೃತಿಮೂಡಿಸಬೇಕು ಎಂದು ಹೇಳಿದರು.ಪ್ರಧಾನಮಂತ್ರಿ ಮಾತೃವಂದನಾ ಯೋಜನೆಗೆ ನಿಗದಿಪಡಿಸಿದ ಗುರಿ ಪ್ರತಿಯೊಬ್ಬರು ಸಾಧಿಸಬೇಕು.ಕೆಲವೊಂದುಅಧಿಕಾರಿಗಳು ಸಾಧನೆ-ಗುರಿಮುಟ್ಟಿರುವುದಿಲ್ಲ,ಅವರು ಹೆಚ್ಚಿನ ರೀತಿಯಲ್ಲಿ ಶ್ರಮಿಸಬೇಕು. ಎಲ್ಲಾ ಯೋಜನೆಗಳಲ್ಲಿ ತಾಲೂಕಾ ಆರೋಗ್ಯ ಅಧಿಕಾರಿಗಳು ಮತ್ತು ಶಿಶು ಅಭಿವೃದ್ಧಿಯೋಜನಾಧಿಕಾರಿಗಳುಮತ್ತು ಮೇಲ್ವಿಚಾರಕಿಯರುಜಂಟಿಸಭೆಯನ್ನು ನಡೆಸಿಕ್ರಮವಹಿಸಲು ಅಧಿಕಾರಿಗಳಿಗೆ ಸೂಚಿಸಿದರು. ಕೇಂದ್ರ ಸರ್ಕಾರದ ಯೋಜನೆಯಾದಬೇಟಿಬಚಾವೋಭೇಟಿ ಪಡಾವೂ ಯೋಜನೆಯಡಿ ಹತ್ತು ಲಕ್ಷ ರೂ. ಅನುದಾನ ನೀಡಿದ್ದು, ಇದನ್ನು ಸಮರ್ಪಕವಾಗಿ ಬಳಕೆ ಮಾಡಬೇಕು. ಈ ಯೋಜನೆ ಕುರಿತು ಅಧಿಕಾರಿಗಳು ಹೆಚ್ಚಿನ ರೀತಿಯಲ್ಲಿ ಜಾಗೃತಿ ಮೂಡಿಸಿ ಪ್ರತಿಯೊಬ್ಬಫಲಾನುಭವಿಗಳುಇದರ ಲಾಭವನ್ನುಪಡೆಯಬೇಕೆಂದುಹೇಳಿದರು. ಪ್ರಧಾನಮಂತ್ರಿ ಮಾತೃವಂದನಾ ಯೋಜನೆಯಡಿ ಆಧಾರ್ ಕಾರ್ಡ ಸಮಸ್ಯೆ ಮತ್ತು ಬ್ಯಾಂಕ್ ಖಾತೆಗೆಆಧಾರ್ ಲಿಂಕ್ಇಲ್ಲದಿರುವುದುಫಲಾನುಭವಿಗಳ ಸಂಬಂಧಪಟ್ಟಅಧಿಕಾರಿಗಳುತಿಳಿಸಬೇಕೆಂದು ಹೇಳಿದರು. ಬಾಲಕಿಯರ ವಸತಿ ನಿಲಯಗಳಿಗೆಅನಿರೀಕ್ಷತವಾಗಿಭೇಟಿನೀಡಿ, ವಸತಿ ನಿಲಯದ ಸುತ್ತಮುತ್ತ ಸ್ವಚ್ಛತೆ, ನೀರಿನ ಸಮಸ್ಯೆಗಳನ್ನು ಅವುಗಳನ್ನು ಪರಿಶೀಲಿಸಿಕ್ರಮಕೈಗೊಳ್ಳಬೇಕುಎಂದು ಸಂಬಂಧಪಟ್ಟಅಧಿಕಾರಿಗಳಿಗೆಸೂಚನೆ ನೀಡಿದರು ಮಹಿಳಾಸಹಾಯವಾಣಿಗೆ ಕಡಿಮೆಸಂಖ್ಯೆಯಲ್ಲಿಕರೆಗಳುಬಂದಿದ್ದು, ಮಹಿಳಾಸಹಾಯವಾಣಿಬಗ್ಗೆಜನರಲ್ಲಿ ಹೆಚ್ಚಿನಅರಿವುಮೂಡಿಸಲುಸೂಚಿಸಿದರು. ಸಖಿಒನ್‌ಸ್ಟಾಫ್‌ಸೆಂಟರ್‌ನಪ್ರಕರಣಗಳು ಕಡಿಮೆ ಆಗಿದೆ. ಜನರಲ್ಲಿಅಧಿಕಾರಿಗಳು ಅರಿವು ಮೂಡಿಸಬೇಕು ಗೌರವಧನ, ಆಡಳಿತವೆಚ್ಚವನ್ನುಸಮರ್ಪಕವಾಗಿಬಳಕೆ ಮಾಡಲುಅಧಿಕಾರಿಗಳಿಗೆಸೂಚಿಸಿದರು ಮೀಷನ್‌ಶಕ್ತಿಯುಮಹಿಳೆಯರಸುರಕ್ಷತೆ ಭದ್ರತೆ ಮತ್ತು ಸಬಲೀಕರಣಕ್ಕಾಗಿ ಮಧ್ಯಸ್ಥಿಕೆಕ್ರಮಗಳನ್ನುಬಲಪಡಿಸುವ ಗುರಿಯನ್ನುಳ್ಳಧ್ಯೇಯೋದ್ದೇಶಮಾದರಿಯನ್ನು ರೂಪಿಸಿದಒಂದುಯೋಜನೆಯಾಗಿದೆ. ಇದೇಸಂದರ್ಭದಲ್ಲಿಕಾನೂನುಬಾಹಿರ ದತ್ತು ಮಾಡಿದರೆ ಆಪತ್ತು, ಕಾನೂನು ಬದ್ಧವಾಗಿಮಕ್ಕಳನ್ನುದತ್ತುಪಡೆಯಲು ಮುಂದೆ ಬನ್ನಿ ಎನ್ನುವ ಪೋಸ್ಟರ್‌ನ್ನು ಕಲಬುರಗಿಜಿಲ್ಲಾಧಿಕಾರಿಬಿ.ಫೌಜಿಯಾ ತರನ್ನುಮ್ ಬಿಡುಗಡೆಗೊಳಿಸಿದರು. ದತ್ತುಮಾಸಾಚರಣೆಸಂಬಂಧಅರಿವು ಕಾರ್ಯಕ್ರಮಗಳನ್ನುಹಮ್ಮಿಕೊಳ್ಳಲು ಸೂಚಿಸಿದರು.ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಹೆಚ್ಚುವರಿ ಎಸ್.ಪಿ.ಮಹೇಶಮೇಘಣ್ಣನವರ್,ಜಿಲ್ಲಾ ಪಂಚಾಯತ್‌ಮುಖ್ಯಯೋಜನಾಧಿಕಾರಿ ಎಸ್.ಎಸ್.ಮಠಪತಿ,ಎಸಿಪಿಶರಣಬಸಪ್ಪ ಸುಬೇದಾರ,ಡಿ.ಹೆಚ್.ಓ.ಡಾ.ಶರಣಬಸಪ್ಪ ಕ್ಯಾತನಾಳ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿಇಲಾಖೆಯಉಪನಿರ್ದೇಶಕ ರಾಜಕುಮಾರ ರಾಠೋಡ, ಮಹಿಳಾ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಮಂಜುಳಾ ವಿ. ಪಾಟೀಲ್, ಜಿಲ್ಲಾ ಮಹಿಳಾಪೊಲೀಸ್‌ಠಾಣೆಯಪೊಲೀಸ್ ಇನ್ಸ್ ಪೆಕ್ಟರ್ ಜಗದೀಶ್ ಕೆ.ಜಿ, ಎಲ್ಲಾ ಜಿಲ್ಲಾಮಟ್ಟದ ಅಧಿಕಾರಿಗಳು ಮತ್ತು ಸಿ.ಡಿ.ಪಿ.ಓ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳು ಭಾಗವಹಿಸಿದ್ದರು.

# ಮತದಾರರ ಪಟ್ಟಿಪರಿಷ್ಕರಣೆ ಅಭಿಯಾನ ಯಶಸ್ವಿಗೊಳಿಸಿ: ಶಾಸಕ ಪ್ರಭು ಚವ್ಹಾಣ



ಔರಾದ(ಬಿ):ಅ.27:ದೇಶಾದ್ಯಂತ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕೈಗೊಳ್ಳಲು ಕೇಂದ್ರಸರ್ಕಾರಮುಂದಾಗಿದ್ದು,ಬೂತ್ ಮಟ್ಟದ ಏಜೆಂಟ್‌ಗಳು(ಬಿಎಲ್‌ಎ-2) ತಮ್ಮಬೂತ್‌ಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆಅಚ್ಚುಕಟ್ಟಾಗಿನಡೆಯುವಂತೆ ನೋಡಿಕೊಳ್ಳಬೇಕೆಂದುಮಾಜಿಸಚಿವರು ಹಾಗೂಔರಾದ(ಬಿ)ಶಾಸಕರಾದಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಭಾರತೀಯಜನತಾಪಕ್ಷಔರಾದ(ಬಿ) ಮಂಡಲವತಿಯಿಂದಅ.26ರಂದುಕಮಲನಗರ ತಾಲ್ಲೂಕಿನಠಾಣಾಕುಶನೂರಬಸವೇಶ್ವರ ಕಲ್ಯಾಣ ಮಂಟಪದಲ್ಲಿ ಏರ್ಪಡಿಸಿದ್ದ ಔರಾದ(ಬಿ)ವಿಧಾನಸಭಾಕ್ಷೇತ್ರವ್ಯಾಪ್ತಿಯ ಬಿಎಲ್‌ಎ-2ಕಾರ್ಯಾಗಾರದಲ್ಲಿಅವರು ಮಾತನಾಡಿದರು.

ದೇಶದಲ್ಲಿಚುನಾವಣೆಗಳುಪಾರದರ್ಶಕವಾಗಿ ಮತ್ತು ಅಚ್ಚುಕಟ್ಟಾಗಿ ನಡೆಸಬೇಕೆಂಬ ಉದ್ದೇಶದಿಂದ ಪ್ರಧಾನಿ ನರೇಂದ್ರ ಮೋದಿಯವರನೇತೃತ್ವದಕೇಂದ್ರಸರ್ಕಾರ ಮತದಾರರಪಟ್ಟಿವಿಶೇಷತೀವ್ರಪರಿಷ್ಕರಣೆ (ಎಸ್‌ಐಆರ್)ನಡೆಸುತ್ತಿದ್ದು,ಅರ್ಹರನ್ನು ಮತದಾರರ ಪಟ್ಟಿಗೆ ಸೇರಿಸುವುದು, ಬೂತ್‌ನಿಂದ ಹೊರಹೋದವರು, ಬೋಗಸ್ ಮತದಾರರು, ಎರಡು ಕಡೆ ಹೆಸರಿದ್ದವರು, ಮರಣ ಹೊಂದಿದವರ ಹೆಸರುಗಳಿದ್ದರೆಡಿಲೀಟ್ ಮಾಡಿಸುವುದು ಬೂತ್ ಏಜೆಂಟರ ಜವಾಬ್ದಾರಿಯಾಗಿದೆ ಎಂದರು.

ಬಿಎಲ್‌ಓಗಳು ಮತದಾರರ ಪಟ್ಟಿ ಪರಿಷ್ಕರಣೆಗೆತಮ್ಮಗ್ರಾಮಗಳಿಗೆಆಗಮಿಸಿದ ಸಂದರ್ಭದಲ್ಲಿಬೂತ್ ಏಜೆಂಟರುಅವರ ಜತೆಯಲ್ಲಿದ್ದುಕೊಂಡು ಅಗತ್ಯ ಸಹಕಾರ ನೀಡಬೇಕು. ಮೃತರಾದವರು,ಗ್ರಾಮ, ಪಟ್ಟಣ ಬಿಟ್ಟು ಹೋಗಿರುವವರನ್ನು ಗುರುತಿಸಬೇಕುಮತ್ತು ಒಂದಕ್ಕಿಂತಹೆಚ್ಚು ಕಡೆಗಳಲ್ಲಿಬರುವಹೆಸರುಗಳನ್ನು ತೆಗೆದು ಮತದಾರರಪಟ್ಟಿಯನ್ನುಸ್ವಚ್ಛಗೊಳಿಸುವ ಕಾರ್ಯಕ್ಕೆಸಹಕರಿಸಬೇಕೆಂದುಹೇಳಿದರು.

ಒಂದು ರಾಷ್ಟ್ರ ಒಂದು ಮತದಾರರ ಪಟ್ಟಿ ಮಾಡಬೇಕೆಂಬ ಸಂಕಲ್ಪದೊಂದಿಗೆ ಪ್ರಧಾನಿಯವರುಕೆಲಸಮಾಡುತ್ತಿದ್ದಾರೆ. ಮುಂಬರುವಸ್ಥಳೀಯಸಂಸ್ಥೆಗಳಚುನಾವಣೆ ಹಾಗೂಮತ್ತಿತರೆಎಲ್ಲಚುನಾವಣೆಗಳಲ್ಲಿ ನಿಜವಾದಮತದಾರರುಮಾತ್ರ ಮತದಾನ ಮಾಡುವಂತಾಗಬೇಕೆಂಬಉದ್ದೇಶವಿದೆ.ಈ ದಿಶೆಯಲ್ಲಿಬೂತ್ ಏಜೆಂಟರಜವಾಬ್ದಾರಿ ಹೆಚ್ಚಿನ ಪ್ರಮಾಣದಲ್ಲಿದೆ. ಅವರು ಮಾಡಬೇಕಾದಕೆಲಸಕಾರ್ಯಗಳುಮತ್ತು ಜವಾಬ್ದಾರಿಗಳಕುರಿತುಪಕ್ಷದಿಂದಅಗತ್ಯ ಮಾರ್ಗದರ್ಶನ,ಸಲಹೆಸೂಚನೆಗಳನ್ನು ನೀಡಲಾಗಿದೆ. ಅವುಗಳನ್ನುಕಟ್ಟುನಿಟ್ಟಾಗಿ ಪಾಲಿಸಬೇಕೆಂದುನಿರ್ದೇಶನನೀಡಿದರು.

ವಿಧಾನ ಪರಿಷತ್ ಮಾಜಿ ಸದಸ್ಯರಾದ ಅಮರನಾಥಪಾಟೀಲಅವರುಮಾತನಾಡಿ, ದೇಶದಲ್ಲಿ ಮತದಾನ ವ್ಯವಸ್ಥೆಯನ್ನು ಸುಧಾರಿಸಲುಮತದಾರರಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸಲು ಪ್ರಧಾನಿ ನರೇಂದ್ರಮೋದಿಯವರನೇತೃತ್ವದಕೇಂದ್ರ ಸರ್ಕಾರ ಮುಂದಾಗಿದೆ. ದೇಶಾದ್ಯಂತ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು,ಈದಿಶೆಯಲ್ಲಿಪಕ್ಷದಿಂದ ಮೂರುತಿಂಗಳವರೆಗೆಅಭಿಯಾನನಡೆಸುತ್ತಿದ್ದು ಬೂತ್ ಏಜೆಂಟರು ಶ್ರದ್ಧೆಯಿಂದ ಕೆಲಸ ಮಾಡಬೇಕೆಂದು ಹೇಳಿದರು.

ಬಿಜೆಪಿಜಿಲ್ಲಾಧ್ಯಕ್ಷರಾದಸೋಮನಾಥ ಪಾಟೀಲ ಮಾತನಾಡಿ, ಚುನಾವಣೆಗಳ ಮತದಾನದಸಂದರ್ಭದಲ್ಲಿಯಾವುದೇ ರೀತಿಯಅವ್ಯವಹಾರಗಳುನಡೆಯಬಾರದು ಮತ್ತು ಬೋಗಸ್ ಮತದಾನವನ್ನು ತಡೆಯುವಉದ್ದೇಶದಿಂದಮತದಾರರ ಪಟ್ಟಿಪರಿಷ್ಕರಣೆನಡೆಸಲಾಗುತ್ತಿದೆ.ಬೂತ್ ಮಟ್ಟದಲ್ಲಿರುವಪಕ್ಷದಬೂತ್ ಏಜೆಂಟರು ತಮ್ಮಕೆಲಸಕಾರ್ಯಗಳನ್ನುಅಚ್ಚುಕಟ್ಟಾಗಿ ನಿಭಾಯಿಸಬೇಕು ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನಕಾರ್ಯದರ್ಶಿಕಿರಣಪಾಟೀಲ, ಆತ್ಮನಿರ್ಭರಅಭಿಯಾನದಜಿಲ್ಲಾಸಂಚಾಲಕ ಬಾಬು ವಾಲಿ, ಮುಖಂಡರಾದ ವಸಂತ ಬಿರಾದಾರ, ಸತೀಷ ಪಾಟೀಲ, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಸಂತೋಷರೆಡ್ಡಿ, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಶಿವರಾಜ ಅಲಾಮ್ಮಜೆ, ಒಬಿಸಿ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ನಿಲೇಶ ರಕ್ಷಾಳೆ, ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ವಿಜಯಲಕ್ಷ್ಮೀ ಕೌಟಗೆ, ಶಿವಾಜಿರಾವ ಪಾಟೀಲ ಮುಂಗನಾಳ, ಶಿವಾಜಿರಾವ ಕಾಳೆ, ವೀರು ದಿಗ್ವಾಲ್, ಅಭಿಯಾನದ ತಾಲ್ಲೂಕು ಪ್ರಮುಖರಾದ ಪ್ರವೀಣ ಕಾರಬಾರಿ, ಸಚಿನ ರಾಠೋಡ, ಪ್ರತೀಕ ಚವ್ಹಾಣ,ಖಂಡೋಬಾಕಂಗಟೆ,ಧನರಾಜ ವಡೆಯರ್, ಶಿವಕುಮಾರ ಸಜ್ಜನಶೆಟ್ಟೆ, ಪ್ರಭುರಾವಜೀರ್ಗೆ,ಬಾಬುರಾವವಾಗ್ಮಾರೆ, ಸಾಗರ ಪಾಟೀಲ, ರಂಗರಾವ ಜಾಧವ, ಶಿವಾನಂದವಡ್ಡೆ,ಶಿವುಜುಲ್ಫೆ,ಬಾಬುರಾವ ತೋರ್ಣಾವಾಡಿ,ಓಂಕಾರಸ್ವಾಮಿ,ಬಂಟಿ ರಾಂಪೂರೆ, ರಾಜಕುಮಾರ ಸೋರಾಳೆ, ರವೀಂದ್ರರೆಡ್ಡಿ,ಸಚಿನಬಿರಾದಾರ,ಸಂಜು ಮುರ್ಕೆ, ಉದಯ ಸೋಲಾಪೂರೆ,

ಪ್ರಕಾಶ ಜೀರ್ಗೆ, ಬಸವರಾಜ ಹಳ್ಳೆ, ಜಾಖೀರ್ ಶೇಕ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಸ್ಟಿಕ್ಕರ್ ಬಿಡುಗಡೆ:**

ಕಾರ್ಯಕ್ರಮದಲ್ಲಿಆತ್ಮನಿರ್ಭರಅಭಿಯಾನದ ಸ್ಟಿಕ್ಕರ್‌ಗಳನ್ನುಬಿಡುಗಡೆಗೊಳಿಸಲಾಯಿತು. ಆತ್ಮನಿರ್ಭರಅಭಿಯಾನದಜಿಲ್ಲಾಸಂಚಾಲಕ ಬಾಬು ವಾಲಿ ಅವರು ಆತ್ಮನಿರ್ಭರ ಅಭಿಯಾನದಕುರಿತಪ್ರಮಾಣವಚನವನ್ನು ಬೋಧಿಸಿದರು.ಪಕ್ಷದಕಾರ್ಯಕರ್ತರು ಎಲ್ಲಮನೆಬಾಗಿಲುಗಳಮೇಲೆಆತ್ಮನಿರ್ಭರ ಅಭಿಯಾನದ ಸ್ಟಿಕ್ಕರ್‌ಗಳನ್ನು ಅಂಟಿಸಿ ಜಾಗೃತಿಮೂಡಿಸಬೇಕೆಂದುಕೋರಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927 (RNINO:KARKAN/2011/48371)